ಸಂಪುಟ : 13 Volume | ಸಂಚಿಕೆ : 261 Issue | ಪುಟಗಳು : 08 Pages | ಬುಧುವಾರ 03 ಡಿಸೆಂಬರ್ 2025 | ₹6 | PRGINO. 120927(RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಓದು, ಓದು, ಓದು ಯಾಕೆಂದರೆ ಶತ್ರುಗಳು ನಿನ್ನ ಜ್ಞಾನಕ್ಕೆ ಮಾತ್ರ ಹೆದರುತ್ತಾರೆ.
ಡಾ. ಬಿ.ಆರ್. ಅಂಬೇಡ್ಕರ್.

2 ಜಾತಿ, ಧರ್ಮ, ಭಾಷೆಗಳ ಹೆಸರಿನಲ್ಲಿ | 3 ಸಮಗ್ರ ಶೈಕ್ಷಣಿಕ ಅಭಿವೃದ್ಧಿಗೆ ಗುಲಬರ್ಗಾ | 4 ಸಾಲಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ | 8 ಶ್ರೀ ಮಾಣಿಕ ಪ್ರಭು ಜಾತ್ರೆ ಆರಂಭ

## ಅಶಾ ಕಾರ್ಯಕರ್ತರಿಗೆ ಅಭಯ



**ಮಲ್ಲಮ್ಮ ನುಡಿ ವಾರ್ತೆ ಮಂಡ್ಯ/ನವದೆಹಲಿ:** ಪ್ರತಿಭಟನೆ ಬಿಟ್ಟು ಮಾತುಕತೆಗೆ ದೆಹಲಿಗೆ ಬರುವಂತೆ ಅನಿರ್ದಿಷ್ಟಾವಧಿ ಮುಷ್ಕರಕ್ಕಿಳಿದಿರುವ ಅಕ್ಷರ ದಾಸೋಹ ನೌಕರರು, ಅಂಗನವಾಡಿ ಕಾರ್ಯಕರ್ತೆರಿಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಆಹ್ವಾನ ನೀಡಿದ್ದಾರೆ.

...ಿಕಾರಿ ಕುಮಾರ್ ಅವರ ...ವಾಡಿ ನೌಕರರ ಸಂಘದ ಶ್ರೀಕುಮಾರಿ ಜೊತೆ ಕುಮಾರಸ್ವಾಮಿಯವರು ದೂರವಾಣಿಯಲ್ಲಿ ಮಾತನಾಡಿ, ನಿಮ್ಮ ಸಂಘದ ಪ್ರತಿನಿಧಿಗಳಲ್ಲಿ 10 ಜನ ಪ್ರಮುಖರು ದೆಹಲಿಗೆ ಬನ್ನಿ. ನಾನೇ ಸಂಬಂಧಪಟ್ಟ ಸಚಿವರು, ಅಧಿಕಾರಿಗಳ ಜೊತೆ ಸಭೆ ಏರ್ಪಾಡು ಮಾಡಿಸುತ್ತೇನೆ. ನೀವು ಬಂದು ಹೋಗುವ ವಿಮಾನಯಾನ ವೆಚ್ಚ ಹಾಗೂ ದೆಹಲಿಯಲ್ಲಿ ವಸತಿ ವ್ಯವಸ್ಥೆಯನ್ನು ನಾನೇ ಕಲ್ಪಿಸುವೆ ಎಂದು ಭರವಸೆ ನೀಡಿದ್ದಾರೆ.ವಿವಿಧ ಬೇಡಿಕೆಗಳ ಈಡೇರಿಸುವಂತೆ ಆಗ್ರಹಿಸಿ ಲಕ್ಷಾಂತರ ಅಂಗನವಾಡಿ ಸಹಾಯಕಿಯರು ಮತ್ತು ಕಾರ್ಯಕರ್ತೆಯರು ಸೋಮವಾರದಿಂದ ಅನಿರ್ದಿಷ್ಟಾವಧಿ ಧರಣಿ ಆರಂಭಿಸಿದ್ದಾರೆ.ನಗರದ ಸ್ವಾತಂತ್ರ್ಯ ಉದ್ಯಾನ ಸೇರಿದಂತೆ ಮಂಡ್ಯ ಮತ್ತು ಹುಬ್ಬಳ್ಳಿಯಲ್ಲಿ ಕೇಂದ್ರದ ಸರ್ಕಾರದ ಸಚಿವರ ನಿವಾಸಗಳ ಎದುರು ಪ್ರತಿಭಟಿಸುವುದರೊಂದಿಗೆ ರಾಜ್ಯದ್ಯಂತ ಹೋರಾಟ ಆರಂಭಿಸಿದ್ದಾರೆ.

## ಬಿಎಸ್‌ವೈಗೆ ಬಿಗ್ ರಿಲ್ಯಾಕ್ಸ್



**ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:** ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಬಗ್ಗೆ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣದ ವಿಚಾರಣೆಗೆ ಸುಪ್ರೀಂ ಕೋರ್ಟ್ ತಡೆ ನೀಡಿದೆ.

ತನ್ನ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ರದ್ದುಗೊಳಿಸಲು ನಿರಾಕರಿಸಿದ ಕರ್ನಾಟಕ ಹೈಕೋರ್ಟ್‌ನಲ್ಲಿ ನ.13ರ ಆದೇಶದ ವಿರುದ್ಧ ಯಡಿಯೂರಪ್ಪ ಸಲ್ಲಿಸಿದ್ದ ವಿಶೇಷ ರಜೆ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿ ಜೋಯ್ಮಲ್ಯ ಅವರನ್ನೊಳಗೊಂಡ ಪೀಠವು ವಿಚಾರಿಸಿತು.

ಯಡಿಯೂರಪ್ಪ ಅವರು ತಮ್ಮ ಪ್ರಕರಣವನ್ನು ಸಂಪೂರ್ಣವಾಗಿ ಕೋರ್ಟ್ ಮುಂದೆ ಮಂಡಿಸಲು ಸ್ವಾತಂತ್ರ್ಯವಿದೆಯೇ?

ಎನ್ನುವ ಕುರಿತು ಬಿಎಸ್‌ವೈ ಮನವಿಗೆ ಪ್ರತಿಕ್ರಿಯೆ ನೀಡುವಂತೆ ಸುಪ್ರೀಂ ರಾಜ್ಯ ಸರ್ಕಾರಕ್ಕೂ ನೋಟಿಸ್ ನೀಡಿದೆ.

'ಹೈಕೋರ್ಟ್ನ ಪೀಠವು ಹಿಂದಿನ ತೀರ್ಪನ್ನು ತಪ್ಪಾಗಿ ಅರ್ಥೈಸಿಕೊಂಡಿದೆ ಮತ್ತು ಅರ್ಜಿಯನ್ನು ಅದರ ಅರ್ಹತೆಯ ಮೇಲೆ ವಿಚಾರಣೆ ಮಾಡಲು ಸಾಧ್ಯವಿಲ್ಲ ಎಂದು ತಪ್ಪಾಗಿ ಅಭಿಪ್ರಾಯಪಟ್ಟಿದೆ. ಆದ್ದರಿಂದ,

ಫೆ.7ರ ಹಿಂದಿನ ಆದೇಶದಲ್ಲಿ ಅನುಮತಿಸಿದಂತೆ ಅರ್ಜಿದಾರರ ವಿಚಾರಣೆಯ ಹಕ್ಕನ್ನು ಪರಿಗಣಿಸುವ ಸೀಮಿತ ಉದ್ದೇಶಕ್ಕಾಗಿ ಮಾತ್ರ ಪ್ರಕರಣವನ್ನು ಮತ್ತೊಮ್ಮೆ ವಿಚಾರಣೆ ನಡೆಸಲು ನೋಟಿಸ್ ಕಳುಹಿಸುತ್ತಿದೆ ಎಂದು ನ್ಯಾಯಾಲಯ ಹೇಳಿದೆ.

## ಮಾಜಿ ಶಾಸಕ ಇನ್ನಿಲ್ಲ



**ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:** ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮಾಜಿ ಶಾಸಕ ಆರ್.ವಿ.ದೇವರಾಜ್ (67) ಹೃದಯಾಘಾತದಿಂದ ನಿಧನರಾಗಿದ್ದಾರೆ.ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳಿದ್ದ ಸಂದರ್ಭದಲ್ಲಿ ತೀವ್ರ ಹೃದಯಾಘಾತಕ್ಕೆ ಒಳಗಾದರು. ತಕ್ಷಣವೇ ಅಪೋಲೋ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿದ ನಂತರ ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಗೆ ಕರೆದೊಯ್ಯುವ ಸಂದರ್ಭದಲ್ಲಿ ಕೊನೆಯುಸಿರೆಳೆದಿದ್ದಾರೆ ಎಂದು ತಿಳಿದು ಬಂದಿದೆ. ಬ್ರೇಕ್ ಫಾಸ್ಟ್ ಮೀಟಿಂಗ್ ಮುಗಿಸಿದ ತಕ್ಷಣ ಆರ್ ವಿ ದೇವರಾಜ್ ಮನೆಗೆ ಭೇಟಿ ಕೊಟ್ಟ ಸಿಎಂ ಸಿದ್ದರಾಮಯ್ಯ ಅಂತಿಮ ದರ್ಶನ ಪಡೆದರು. ದುಃಖತಪ್ತರಾಗಿದ್ದ ಕುಟುಂಬಸ್ತರಿಗೆ ಧೈರ್ಯ ತುಂಬಿದರು. ಆರ್ ವಿ ದೇವರಾಜ್ ಪತ್ನಿ, ಮಗ, ಮಗಳು ಹಾಗೂ ಅಪಾರ ಅಭಿಮಾನಿಗಳನ್ನು ಅಗಲಿದ್ದಾರೆ. ಮಾಜಿ ಶಾಸಕ ಇನ್ನಿಲ್ಲಬೆಂಗಳೂರು: ಬೆಂಗಳೂರಿನ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮಾಜಿ ಶಾಸಕ ಆರ್.ವಿ.ದೇವರಾಜ್ (67) ಹೃದಯಾಘಾತದಿಂದ ನಿಧನರಾಗಿದ್ದಾರೆ.ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳಿದ್ದ ಸಂದರ್ಭದಲ್ಲಿ ತೀವ್ರ ಹೃದಯಾಘಾತಕ್ಕೆ ಒಳಗಾದರು. ತಕ್ಷಣವೇ ಅಪೋಲೋ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿದ ನಂತರ ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಗೆ ಕರೆದೊಯ್ಯುವ ಸಂದರ್ಭದಲ್ಲಿ ಕೊನೆಯುಸಿರೆಳೆದಿದ್ದಾರೆ ಎಂದು ತಿಳಿದು ಬಂದಿದೆ. ಬ್ರೇಕ್ ಫಾಸ್ಟ್ ಮೀಟಿಂಗ್ ಮುಗಿಸಿದ ತಕ್ಷಣ ಆರ್ ವಿ ದೇವರಾಜ್ ಮನೆಗೆ ಭೇಟಿ ಕೊಟ್ಟ ಸಿಎಂ ಸಿದ್ದರಾಮಯ್ಯ ಅಂತಿಮ ದರ್ಶನ ಪಡೆದರು. ದುಃಖತಪ್ತರಾಗಿದ್ದ ಕುಟುಂಬಸ್ತರಿಗೆ ಧೈರ್ಯ ತುಂಬಿದರು. ಆರ್ ವಿ ದೇವರಾಜ್ ಪತ್ನಿ, ಮಗ, ಮಗಳು ಹಾಗೂ ಅಪಾರ ಅಭಿಮಾನಿಗಳನ್ನು ಅಗಲಿದ್ದಾರೆ.



ಜರ್ಮನಿ ಸರ್ಕಾರದ ಫೆಡರಲ್ ಸಚಿವಾಲಯ ಇಕಾನಾಮಿಕ್ ಕೋಆಪರೇಶನ್ ಅಂಡ್ ಡೆವಲಪ್ಮೆಂಟ್‌ನ ಉನ್ನತ ಮಟ್ಟದ ನಿಯೋಗವು ತಮ್ಮ ಭಾರತದ ಪ್ರವಾಸದ ಭಾಗವಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ಭೇಟಿ ನೀಡಿದೆ. ನಿಯೋಗದ ಸದಸ್ಯರು ದೃಷ್ಟಿ ದೋಷ ಹೊಂದಿದ ಪ್ರಯಾಣಿಕರ ಸಾರ್ವಜನಿಕ ಸಾರಿಗೆಯ ಬಳಕೆಯನ್ನು ಹೆಚ್ಚಿಸುವ ಉದ್ದೇಶದಿಂದ ವಿನ್ಯಾಸಗೊಳಿಸಲಾದ ಸಹಾಯಕ ಧ್ವನಿ-ನೇವಿಗೇಶನ್ ಪರಿಹಾರ, ಧ್ವನಿ ಸ್ಪಂದನ, ಆನ್‌ಬೋರ್ಡ್ ಬಗ್ಗೆ ಖುದ್ದು ಮಾಹಿತಿ ಪಡೆದಿದ್ದಾರೆ.



ಬೆಂಗಳೂರು: ಹನುಮ ಜಯಂತಿಯ ಪ್ರಯುಕ್ತ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಇಂದು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಮಠಾಧೀಶರಾದ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿದರು. ಬಿಜೆಪಿ ರಾಜ್ಯ ಕಾರ್ಯದರ್ಶಿಗಳಾದ ಹೆಚ್.ಸಿ. ತಮ್ಮೇಶ್ ಗೌಡ, ಶರಣು ತಳ್ಳಿಕೇರಿ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಬೆಂಗಳೂರು ದಕ್ಷಿಣ ಜಿಲ್ಲಾ ಉಪಾಧ್ಯಕ್ಷ ಉಮೇಶ್ ಶೆಟ್ಟಿ, ರಾಜ್ಯ ಮಾಧ್ಯಮ ಸಹ ಸಂಚಾಲಕ ಪ್ರಶಾಂತ್ ಕೆಡೆಂಜಿ ಮತ್ತು ಪ್ರಮುಖರು ಉಪಸ್ಥಿತರಿದ್ದರು.

# ನಾಟಿಕೋಳಿ ರುಚಿ ರಾಜಕೀಯ ಬಿಸಿ

## ನಿಲ್ಲದ ಡಿಸಿಎಂ- ಮುಖ್ಯಮಂತ್ರಿ ಕುರ್ಚಿಯ ಕಿತ್ತಾಟ, ಹೈಕಮಾಂಡ್ ಸಮನ್ವಯ ಮಂತ್ರ

**ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:** ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿ ಕಿತ್ತಾಟ ಮುಂದುವರಿದಿದೆ. ಎರಡನೇ ಬಾರಿಗೆ ನಡೆದ ಬ್ರೇಕ್ ಪಾಸ್ಟ್ ರಾಜಕೀಯ ತೀವ್ರ ಕುತೂಹಲ ಕೆರಳಿಸಿದ್ದು, ಬೆಳಗ್ಗೆ ಇದ್ದ ಖುಷಿ ಧ್ಯಾಹ್ನದ ಬಳಿಕ ಸಿಎಂ ವ್ಯರಾಗ್ಯದ ಮಾತು ಆಡಿದ್ದು ಚರ್ಚೆಗೆ ಗ್ರಾಸವೊದಗಿಸಿದೆ.ಒಗ್ಗಟ್ಟು ಪ್ರದರ್ಶನ: ನಾನು ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಬ್ರದರ್ಸ್, ಇಬ್ಬರದು ಒಂದೇ ಪಕ್ಷ, ಒಂದೇ ಸಿದ್ಧಾಂತ. ನಾವು ಯಾವಾಗಲೂ ಒಟ್ಟಾಗಿ ಇದ್ದೇವೆ. ನಮ್ಮ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಉಪಹಾರಕ್ಕೆ ಕರೆದಾಗ ಹಳ್ಳಿಯಿಂದ ನಾಟಿ ಕೋಳಿ ತರುವಂತೆ ಹೇಳಿದ್ದಂತೆ ಅದರಂತೆ ನಾಟಿ ಕೋಳಿ ಸವಿದಿದ್ದೇನೆ. ರಾಹುಲ್ ಗಾಂಧಿ ಹೇಳಿದಂತೆ ನಡೆದುಕೊಳ್ಳಬೇಕು. ನಮ್ಮಲ್ಲಿ ಭಿನ್ನಮತವಿಲ್ಲ. ಎಲ್ಲಾ ಶಾಸಕರು ಒಗ್ಗಟ್ಟಾಗಿದ್ದೇವೆ ಎಂದು ಸಿಎಂ ವಿವರಿಸಿದ್ದಾರೆ.

ರಾಹುಲ್ ಹೇಳಿದಂತೆ ಕೇಳಬೇಕು: ರಾಜ್ಯದ ನಾಯಕತ್ವದಲ್ಲಿನ ಯಾವುದೇ ಬದಲಾವಣೆಯನ್ನು ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸುತ್ತದೆ ಎಂದು ಪುನರುಚ್ಚರಿಸಿದ ಸಿದ್ದರಾಮಯ್ಯ, ಹಿರಿಯ ನಾಯಕರಾದ ಸೋನಿಯಾ ಗಾಂಧಿ ಮತ್ತು ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಅಭಿಪ್ರಾಯಗಳನ್ನು ಆಧರಿಸಿ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂದು ಸುಳಿವು ನೀಡಿದ್ದಾರೆ.




### ಸಿಎಂ-ಡಿಸಿಎಂ ಇಬ್ಬರದ್ದೂ ನಾಟ:ಜೆಡಿಎಸ್

ಇಂದಿನ ಡಿಸಿಎಂ ಬ್ರೇಕ್ ಫಾಸ್ಟ್ ಮೀಟಿಂಗ್ ಗೆ ಜೆಡಿಎಸ್ ಅಣಕಿಸಿದೆ. ಇದು ಸಿಎಂ ಸಿದ್ದರಾಮಯ್ಯನವರ ಸೆಟ್ಲ್ ಮೆಂಟ್ ರಾಜಕಾರಣ ಎಂದು ಟೀಕಿಸಿದೆ.

ಸಿದ್ದರಾಮಯ್ಯನವರಿಗೆ ಸಿಎಂ ಕುರ್ಚಿ ಬಿಡಲು ಮನಸ್ಸು ಒಪ್ಪುತ್ತಿಲ್ಲ, ಅದಕ್ಕಾಗಿ ಡಿಕೆಶಿ ಜೊತೆ ಹೊಂದಾಣಿಕೆ ರಾಜಕೀಯ ಮಾಡುತ್ತಿದ್ದಾರೆ. ಸಂಪುಟ ಪುನಾರಚನೆಯಲ್ಲಿ ಹೊಂದಾಣಿಕೆ ಮಾಡಿಕೊಳ್ಳೋಣ ಎಂದು ಒತ್ತಡ ಹೇರಲು ನೋಡುತ್ತಿದ್ದಾರೆ. ಇಬ್ಬರದ್ದು ನಾಟಕವಷ್ಟೆ ಎಂದು ಹೇಳಿದೆ.

### ಹೈ ಹೇಳಿದಾಗ ಡಿಕೆ ಸಿಎಂ

ಈ ಮಧ್ಯೆ ಡಿಕೆ ಶಿವಕುಮಾರ್ ಯಾವಾಗ ಸಿಎಂ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಹೈಕಮಾಂಡ್ ಹೇಳಿದಾಗ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿನ ರೈತರ ಬಗ್ಗೆಯೂ ಸಭೆಯಲ್ಲಿ ಚರ್ಚೆ ನಡೆದಿದೆ. ಸರ್ಕಾರ ಯಾವಾಗಲೂ ರೈತರ ಪರವಾಗಿದೆ. ಈ ಬಾರಿ ರೈತರು ಹೆಚ್ಚು ಮೆಕ್ಕೆಜೋಳ ಬೆಳೆದಿದ್ದಾರೆ. 54-55 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಉತ್ಪಾದನೆ ಆಗಬಹುದು. ಮೆಕ್ಕೆ ಜೋಳಕ್ಕೆ ಕೇಂದ್ರ ಸರ್ಕಾರಕ್ಕೆ 2400 ರೂ. ಕನಿಷ್ಠ ಬೆಂಬಲ ಬೆಲೆ ನಿಗದಿಮಾಡಿದೆ ಎಂದು ಸಿಎಂ ತಿಳಿಸಿದ್ದಾರೆ.

### 8ರಂದು ದೆಹಲಿಗೆ ಡಿಸಿಎಂ ಭೇಟಿ

ಇನ್ನೂ ಡಿಸಿಎಂ ಡಿಕೆ ಶಿವಕುಮಾರ್ ಮಾತನಾಡಿ, ಉಪಹಾರ ಸಭೆಗೆ ಮೊದಲು ನಾನೇ ಸಿಎಂ ಅವರನ್ನು ಆಹ್ವಾನಿಸಿದೆ. ಆದರೆ, ಅವರ ಮನೆಯಲ್ಲಿ ಮೊದಲ ಉಪಹಾರ ಸಭೆ ನಡೆಯಿತು. ಇಂದಿನ ಸಭೆಯಲ್ಲಿ ಪಕ್ಷ, ಸರ್ಕಾರ ಹಾಗೂ ಅಧಿವೇಶನದ ಬಗ್ಗೆ ಚರ್ಚೆ ನಡೆದಿದೆ. ಉತ್ತಮ ಆಡಳಿತ ನೀಡಲು ಹಾಗೂ ನಮ್ಮ ರಾಜ್ಯದ ನಿರಂತರ ಅಭಿವೃದ್ಧಿಗೆ ಬದ್ಧರಾಗಿದ್ದೇವೆ ಎಂದು ಪುನರುಚ್ಚರಿಸುತ್ತೇವೆ. ಡಿಸೆಂಬರ್ 8 ರಂದು ದೆಹಲಿಗೆ ಹೋಗುತ್ತೇವೆ ಎಂದು ತಿಳಿಸಿದರು.

### ಮುಖ್ಯಮಂತ್ರಿಯ ವಿಷಾದದ ಮಾತು

ಉಪಾಹಾರದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧಕ್ಕೆ ಭೇಟಿ ನೀಡಿ ಹಿಂದಿರುಗಿ ಬರುವಾಗ ಶಾಸಕ ಬೇಳೂರು ಸುದರ್ಶನ್ ಗೇಟ್ ಬಳಿ ಭೇಟಿಯಾಗುತ್ತಾರೆ. ಗೊಂದಲ ಪರಿಹರಿಸಿ ಎಂದು ಸಿಎಂಗೆ ಕೇಳಿದಾಗ ಪ್ರತಿಕ್ರಿಯಿಸಿದ ಸಿಎಂ, ನಾನೆಂದೂ ಅಧಿಕಾರಕ್ಕೆ ಆಸೆಪಟ್ಟಿಲ್ಲ. ಚಿಂತಿಸಿಯೂ ಇಲ್ಲ. ರಾಜಕೀಯ ನಮ್ಮಪ್ಪನ ಸೊತ್ತಲ್ಲ. ಯಾವಾಗ ಏನಾಗುತ್ತದೋ ಆಗಲಿ ಎಂದು ವಿಷಾದದಿಂದ ಉತ್ತರಿಸಿರುವುದು ಕುತೂಹಲಕ್ಕೆ ಕಾರಣವಾಗಿದೆ.

### ಕಾಂಗ್ರೆಸ್ ಹೈ ಕಮಾಂಡ್ ಇದೆಯೇ..?

ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ನಡುವಿನ ಬ್ರೇಕ್ ಫಾಸ್ಟ್ ಮೀಟಿಂಗ್ ಬರೀ ಟೀಸರ್, ಸಿನಿಮಾ ಇನ್ನೂ ಬಾಕಿ ಇದೆ. ಕೆಲವೇ ದಿನಗಳಲ್ಲಿ ಚಿತ್ರ ಬಿಡುಗಡೆಯಾಗಲಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ವ್ಯಂಗ್ಯವಾಡಿದ್ದಾರೆ. ಎಲ್ಲಿದೆ ಕಾಂಗ್ರೆಸ್ ಹೈಕಮಾಂಡ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರೇ ತಮ್ಮ ಮೇಲೆ ಹೈಕಮಾಂಡ್ ಇದೆ ಎಂದ ಮೇಲೆ ಇದು ಒಂದು ಕುಟುಂಬದ ವಿಷಯವೇ ಎಂದಿದ್ದಾರೆ.

## ಲೈಸೆನ್ಸ್ ನವೀಕರಣ ಮಾಡಿಕೊಳ್ಳಲು ಸೂಚನೆ

**ಮಲ್ಲಮ್ಮ ನುಡಿ ವಾರ್ತೆ ಬೀದರ,** ಕರ್ನಾಟಕ ರಾಜ್ಯ ಲೇವಾದೇವಿಗಾರರು, ಗಿರವಿ ಕಾಯ್ದೆ 1961 ರ ಅಡಿ ಪರವಾನಿಗೆ ಪಡೆದು ಕಾರ್ಯನಿರ್ವಾಹಿಸುತ್ತಿರುವ ಬೀದರ ಜಿಲ್ಲೆಯ ಲೇವಾದೇವಿ, ಗಿರಿವಿ ಹಾಗೂ ಹಣಕಾಸು ಸಂಸ್ಥೆಗಳ ಪರವಾನಿಗೆ ಅವಧಿಯು 31 ನೇ ಮಾರ್ಚ್ 2026 ರಂದು ಮುಕ್ತಾಯವಾಗುತ್ತಿರುವುದರಿಂದ ತಮ್ಮ ಸಂಸ್ಥೆಯ ಪರವಾನಿಗೆ ನವೀಕರಣಕ್ಕೆ ಸಂಬಂಧಿಸಿದಂತೆ 31 ಜನೆವರಿ 2026 ರೊಳಗಾಗಿ ನಿಗಧಿತ ಶುಲ್ಕವನ್ನು ಪಾವತಿಸಿ, ನವೀಕರಣ ಮಾಡಿಕೊಳ್ಳಬೇಕು. ನಂತರ ಬಂದ ನವೀಕರಣ ಅರ್ಜಿಗಳಿಗೆ ಕಾಯ್ದೆ ಕಲಂ 6 (4) ರಲ್ಲಿ ನಿರ್ದಿಷ್ಟಪಡಿಸಲಾದ ದರದ ದುಪ್ಪಟ್ಟು (ಎರಡರಷ್ಟು) ಶುಲ್ಕವನ್ನು ಪಾವತಿ ಮಾಡಬೇಕಾಗುತ್ತದೆ ಎಂದು ಬೀದರ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಬೀದರ ಜಿಲ್ಲೆಗೆ ಸಂಬಂಧಿಸಿದಂತೆ ಲೇವಾದೇವಿಗಾರರು, ಗಿರವಿದಾರರು ಮತ್ತು ಹಣಕಾಸು ಸಂಸ್ಥೆಗಳ ಪರವಾನಿಗೆ ನವೀಕರಣಗೋಳಿಸದೆ ವ್ಯವಹಾರ ತೊಡಗಿಸಿಕೊಂಡಲ್ಲಿ ಅವರ ವಿರುದ್ಧ ಕಾನೂನಾತ್ಮಕ ಕ್ರಮ ತೆಗೆದುಕೊಳ್ಳಲಾಗುವುದು ಮತ್ತು ನವೀಕರಣ ಗೊಳಿಸದೆ ಇರುವ ಲೇವಾದೇವಿಗಾರರು, ಗಿರವಿದಾರರು ಮತ್ತು ಹಣಕಾಸು ಸಂಸ್ಥೆಗಳ ಭದ್ರತಾ ಠೇವಣಿಯನ್ನು ಮುಟ್ಟಗೋಲೂ ಮಾಡಲಾಗುವುದು ಹಾಗೂ ಕರ್ನಾಟಕ ರಾಜ್ಯ ಲೇವಾದೇವಿಗಾರರು, ಗಿರವಿ ಕಾಯ್ದೆ 1961 ರ ಕಾಯ್ದೆ ಕಲಂ 7ಎ (2) ರ ಪ್ರಕಾರ ವ್ಯವಹಾರದಲ್ಲಿ ತೊಡಗಿಸಿದ ಮೊತ್ತಕ್ಕೆ ಅನುಗುಣಾವಾಗಿ ಭದ್ರತಾ ಠೇವಣಿಯನ್ನು ಪಾವತಿಸಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೀದರ ಈ ಕಛೇರಿಯ

## ಡಿ.07 ರಂದು ಟಿ ಇ ಟಿ ಪರೀಕ್ಷೆ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಇದೇ ಭಾನುವಾರ ಡಿಸೆಂಬರ್ 07 ರಂದು ಜಿಲ್ಲಾ ಕೇಂದ್ರದ ಹಳೇ ಬಾಗಲಕೋಟ, ವಿದ್ಯಾಗಿರಿ ಮತ್ತು ನವನಗರ ಸೇರಿ ಒಟ್ಟು 33 ಪರೀಕ್ಷಾ ಕೇಂದ್ರಗಳಲ್ಲಿ ಟಿಇಟಿ ಪರೀಕ್ಷೆಯನ್ನು ಪಾರದರ್ಶಕ ಮತ್ತು ಕಟ್ಟುನಿಟ್ಟಾಗಿ ನಡೆಸಲಾಗುವುದು ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು. ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ಮಂಗಳವಾರದಂದು ಜರುಗಿದ ಟಿಇಟಿ ಪರೀಕ್ಷೆ 2025 ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಟಿಇಟಿ ಪರೀಕ್ಷೆಯ ಪತ್ರಿಕೆ-1 ನ್ನು ಬೆಳಿಗ್ಗೆ 9.30 ರಿಂದ 12 ಗಂಟೆಯವರೆಗೆ ಹಳೇ ಬಾಗಲಕೋಟದ 12 ಪರೀಕ್ಷಾ ಕೇಂದ್ರಗಳಲ್ಲಿ ಹಾಗೂ ಪತ್ರಿಕೆ-2 ನ್ನು ಮಧ್ಯಾಹ್ನ 2 ರಿಂದ ಸಂಜೆ 4.30 ರವರೆಗೆ ನಡೆಸಲಾಗುತ್ತಿದ್ದು ಒಟ್ಟು 9075 ಪರೀಕ್ಷಾರ್ಥಿಗಳು ಹಾಜರಾಗಲಿದ್ದಾರೆ ಎಂದರು. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಓರ್ವ ಎ ಅಥವಾ ಬಿ ವೃಂದದ ಅಧಿಕಾರಿಯನ್ನು ಸ್ಥಾನಿಕ ಜಾಗೃತ ಅಧಿಕಾರಿಯಾಗಿ ಹಾಗೂ ತಲಾ 5-6 ಕೇಂದ್ರಕ್ಕೆ ಓರ್ವ ಎ ವೃಂದದ ಜಿಲ್ಲಾ ಮಟ್ಟದ ಅಧಿಕಾರಿಯನ್ನು ವೀಕ್ಷಕರನ್ನಾಗಿ ನೇಮಕ ಮಾಡಿ ನಿಯೋಜಿಸಲಾಗುತ್ತಿದ್ದು, ಎಲ್ಲೂ ಲೋಪದೋಷಗಳು ಉಂಟಾಗದಂತೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮೇಲ್ವಿಚಾರಣೆ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಎಲ್ಲಾ ಹಂತದ ಅಧಿಕಾರಿಗಳಿಗೆ ಅವರು ಸೂಚಿಸಿದರು.

## ಮತದಾರರ ಪಟ್ಟಿ ಪರಿಷ್ಕರಣೆಗೆ ಅಸ್ತು

**ಮಲ್ಲಮ್ಮ ನುಡಿ ವಾರ್ತೆ ಹೊಸದಿಲ್ಲಿ:** ಸಂಸತ್ತಿನಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಬಗ್ಗೆ ಚರ್ಚೆಗೆ ಸರ್ಕಾರ ಸಿದ್ಧವಿದೆ, ಆದರೆ ವಿರೋಧ ಪಕ್ಷಗಳು ಸಮಯ ನಿಗದಿ ಮಾಡಬಾರದು ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ.

ಪ್ರತಿ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ತಕ್ಷಣವೇ ಈ ಮಹತ್ವದ ವಿಷಯದ ಬಗ್ಗೆ ಚರ್ಚೆ ನಡೆಸಬೇಕೆಂದು ಒತ್ತಾಯಿಸಿದಾಗ, ರಿಜಿಜು ಅವರು ವಿವಿಧ ಪಕ್ಷಗಳ ನಾಯಕರೊಂದಿಗೆ ಸಮಾಲೋಚನೆ ನಡೆಸಿ ಪರಿಹಾರ ಕಂಡುಕೊಳ್ಳುವುದಾಗಿ ತಿಳಿಸಿದರು. ರಾಜ್ಯಸಭೆಯಲ್ಲಿ ಸದನದ ನಾಯಕ ಜೆ.ಪಿ.ನಡ್ಡಾ ಅವರು, ಸಂಸದೀಯ ವ್ಯವಹಾರಗಳ ಸಚಿವರು ಈಗಾಗಲೇ ಈ ಬಗ್ಗೆ ಮಾತನಾಡುವುದಾಗಿ ಹೇಳಿದ್ದಾರೆ ಎಂದರು. ವಿರೋಧ ಪಕ್ಷದ ನಾಯಕರೊಂದಿಗೆ ಶೀಘ್ರದಲ್ಲೇ ಸಭೆ ನಡೆಯಲಿದ್ದು, ನಿರ್ಧಾರ ಕೈಗೊಳ್ಳಲಾಗುವುದು ಎಂದು ನಡ್ಡಾ ಹೇಳಿದ್ದಾರೆ.

### ಸಮಯ ನಿಗದಿ ಮಾಡಬೇಡಿ



**ಖರ್ಗೆ ಅವರ ತಕ್ಷಣದ ಚರ್ಚೆಯ ಬೇಡಿಕೆಗೆ ಪ್ರತಿಕ್ರಿಯಿಸಿದ ರಿಜಿಜು, ಯಾವುದಕ್ಕೂ ಸಮಯ ನಿಗದಿ ಮಾಡಬೇಡಿ ಎಂದು ಮನವಿ ಮಾಡಿದ್ದಾರೆ. ಸಂಸದೀಯ ಪ್ರಜಾಪ್ರಭುತ್ವದಲ್ಲಿ, ನಾವು ಸಂವಾದ ನಡೆಸಬೇಕು, ಚರ್ಚೆ ನಡೆಸಬೇಕು ಎಂದಿದ್ದಾರೆ. ದೇಶದಲ್ಲಿ ಅನೇಕ ಸಮಸ್ಯೆಗಳಿವೆ, ಆದರೆ ಒಂದು ಸಮಸ್ಯೆಯನ್ನು ಕಡಿಮೆ ಮಾಡಿ ಮತ್ತೊಂದು ಸಮಸ್ಯೆಯನ್ನು ತೆಗೆದುಕೊಳ್ಳಬಾರದು. ಏಕೆಂದರೆ ಎಲ್ಲ ಸಮಸ್ಯೆಗಳೂ ಮುಖ್ಯವಾಗಿವೆ ಎಂದು ವಿವರಿಸಿದ್ದಾರೆ.**

## ಬೆಂಗಳೂರಿನಲ್ಲಿ ಮಲ್ಲಮ್ಮ ನುಡಿ

**ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:** ಈಗಾಗಲೇ ಹೈದರಾಬಾದ್ ಕರ್ನಾಟಕದಲ್ಲಿ ಪ್ರಾದೇಶಿಕ ಪತ್ರಿಕೆಯಾಗಿ ಓದುಗರ ಮನಸೂರೆಗೊಂಡಿರುವ ಮಲ್ಲಮ್ಮ ನುಡಿ ಇದೀಗ ನಾಡಿನ ರಾಜಧಾನಿ ಬೆಂಗಳೂರಿನಲ್ಲೂ ಸದ್ದು ಮಾಡತೊಡಗಿದೆ.ವಿಭಿನ್ನ ಶೈಲಿಯ ಪುಟವಿನ್ಯಾಸ ಹಾಗೂ ವಿಶಿಷ್ಟ ಸುದ್ದಿಗಳ ಮೂಲಗಳ ಮೂಲಕ ಗಮನ ಸೆಳೆದಿರುವ ಮಲ್ಲಮ್ಮ ನುಡಿ ಬೆಗಳೂರು ಜನರ ಮನಸೂರೆಗೊಳ್ಳಲು ಪ್ರತಿನಿತ್ಯ ತಾಜಾ ಸುದ್ದಿಗಳ ಜೊತೆ ಬಹುತೇಕ ಎಲ್ಲಾ ಸರ್ಕಾರಿ ಕಚೇರಿ, ಮುನ್ನೂರಕ್ಕೂ ಹೆಚ್ಚು ಪ್ರಮುಖ ಸ್ಟಾಲ್‌ಗಳಲ್ಲಿ ರಾರಾಜಿಸಲಿದೆ. ಶ್ರೀಸಾಯಿ ಏಜೆನ್ಸಿ ವಿತರಣೆಯ ಹೊಣೆ ಹೊತ್ತಿದೆ. ನಾಡಿನ ಎಲ್ಲಾ ಜಾಹೀರಾತುದಾರರು ಜಾಹೀರಾತು ನೀಡುವುದರ ಮೂಲಕ ತಮ್ಮ ಉನ್ನತಿ-ಪತ್ರಿಕೆಯ ಪ್ರಗತಿಗೆ ಸಹಕರಿಸಬೇಕಾಗಿ ಆಡಳಿತ ಮಂಡಳಿ ಕೋರಿದೆ.




## ನಾನು ಕೋಚ್ ಆಗಿದ್ದರೆ ಸೋಲಿನ ಹೊಣೆ ಮೊದಲು ನಾನು ಹೊರುತ್ತಿದ್ದೆ': ಗೌತಮ್ ಗಂಭೀರ್ ವಿರುದ್ಧ ರವಿ ಶಾಸ್ತ್ರಿ ವಾಗ್ದಾಳಿ

# ಸಾಮರಸ್ಯದ ಬದುಕು ಎಲ್ಲರದ್ದಾಗಲಿ: ಗುರುಬಸವ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆಭಾಲ್ಕಿ:

ಗುರುವಿನ ಮಾರ್ಗ ಅನುಸರಿಸಿ ಸಾಮರಸ್ಯದ ಬದುಕು ಸಾಗಿಸಬೇಕು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಗ್ರಾಮದ ಸಿದ್ಧಾರೂಢ ಮಂದಿರ ಪರಿಸರದಲ್ಲಿ ಮಂಗಳವಾರ ಆಯೋಜಿಸಿದ್ದ ಸದ್ಗುರು ಸಿದ್ಧಾರೂಢರ ಮೂರ್ತಿ ಪ್ರಾಣ ಪ್ರತಿಷ್ಠಾಪನೆಯ ತೃತೀಯ ವಾರ್ಷಿಕೋತ್ಸವ ಸಮಾರೋಪ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಗುರುವಿನ ಮಹಿಮೆ ಅಪಾರ. ಭಕ್ತರಿಗೆ ಜ್ಞಾನದ ಬೆಳಕು ಕರುಣಿಸುವ ಶಕ್ತಿ ಗುರುವಿನಲ್ಲಿರುತ್ತದೆ. ನಿಸ್ವಾರ್ಥ ಸೇವೆ ಮತ್ತು ಶ್ರದ್ಧೆ, ಭಕ್ತಿಯಿಂದ ಗುರುವನ್ನು ಒಲಿಸಿಕೊಂಡು ಸಾರ್ಥಕ ಬದುಕು ಸಾಗಿಸಬೇಕು ಎಂದು ತಿಳಿಸಿದರು.

ನೇತೃತ್ವ ವಹಿಸಿದ್ದ ಗಣೇಶಾನಂದ ಮಹಾರಾಜರು ಮಾತನಾಡಿ, ಸಿದ್ಧಾರೂಢ ಪೂಜ್ಯರು ಪರಮಾತ್ಮನ ಸ್ವರೂಪವಾಗಿದ್ದಾರೆ. ಅವರ ತತ್ವಗಳು ಇಂದಿಗೂ ಪ್ರಸ್ತುತವಾಗಿದ್ದಾರೆ. ಪ್ರತಿಯೊಬ್ಬಗರು ಸತ್ಯದ ದರ್ಶನ ಮತ್ತು ಜ್ಞಾನದ ಶಕ್ತಿ ಅರಿಯಲು ಗುರುವಿನ ಮೊರೆ ಹೋಗಬೇಕು ಎಂದು ತಿಳಿಸಿದರು.


ದಿವ್ಯ ಸಾನ್ನಿಧ್ಯ ವಹಿಸಿದ್ದ ಬೀದರ್ ಸಿದ್ಧಾರೂಢ ಮಠದ ಡಾ.ಶಿವಕುಮಾರ ಸ್ವಾಮೀಜಿ

### ನಾಣ್ಯದಲ್ಲಿ ತುಲಾಭಾರ ಸೇವೆ

ಇದೇ ವೇಳೆ ಬೀದರ್ ಸಿದ್ಧಾರೂಢ ಮಠದ ಡಾ.ಶಿವಕುಮಾರ ಸ್ವಾಮೀಜಿ ಅವರ ತುಲಾಭಾರ ನೆರವೇರಿತು. ಅಲಂಕೃತ ತಕ್ಕಡಿಯಲ್ಲಿ ಭಕ್ತರು ಪೂಜ್ಯರನ್ನು ಕುರಿಸಿ ನಾಣ್ಯಗಳಿಂದ ತುಲಾಭಾರ ಸೇವೆ ನೆರವೇರಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರಾದ ಶಿವಶಂಕರ ಪಾಟೀಲ್, ಶಿವಕುಮಾರ ಮೈನಾಳೆ, ರಾಜಕುಮಾರ ಮೈನಾಳೆ, ವಿಜಯಕುಮಾರ ಮೈನಾಳೆ, ರಾಜಕುಮಾರ ಬಿರಾದಾರ್, ಶಂಕರ ಕೋರಾಳೆ, ಬಾಬುರಾವ ವೀರಶೆಟ್ಟಿ, ಪವನ ಕಣಜೆ, ನಾಗನ್ನಾಥ ಬಿರಾದಾರ್, ರಮೇಶ ಮೈನಾಳೆ, ವಿದ್ಯಾನಂದ ಮೈನಾಳೆ, ಅನಿಲಕುಮಾರ ಮೈನಾಳೆ ಸೇರಿದಂತೆ ಹಲವರು ಇದ್ದರು.

ಮಾತನಾಡಿ, ಸಿದ್ಧಾರೂಢ ಪೂಜ್ಯರು ತಮ್ಮ ಜೀವಿತಾವಧಿಯಲ್ಲಿ ಅನೇಕ ಅದ್ಭುತ ಕಾರ್ಯಗಳು, ಹಲವಾರು ಪವಾಡಗಳನ್ನು ಮಾಡಿದ್ದಾರೆ. ಆ ಕಾರಣಕ್ಕಾಗಿಯೇ

ಅವರನ್ನು ಇಂದಿಗೂ ನನೆಯುತ್ತಿವೆ ಎಂದು ತಿಳಿಸಿದರು. ಸದ್ರುಪಾನಂದ ಸ್ವಾಮೀಜಿ, ಮಾತೋಶ್ರೀ ತಾಯಿ ಮಾತನಾಡಿದರು.

# ಸಂಸ್ಕೃತಿಯ ಸರಳ ನಿರೂಪಣೆ ವಚನದಲ್ಲಿದೆ : ಪ್ರಭುಲಿಂಗ ಸ್ವಾಮೀಜಿ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಆದರ್ಶ ಸಂಸ್ಕೃತಿಯ ಸರಳ ನಿರೂಪಣೆ. ಸ್ವಚ್ಛಂದ ಮಾನವೀಯ ಮೌಲ್ಯ ಬಿತ್ತಿ ಬೆಳಕು ಚೆಲ್ಲಿದ ವಚನಕಾರರು ಮಾನವನಿಗೆ ದಟ್ಟ ಅನುಭವ ನೀಡಿದ್ದಾರೆ. ಗಂಭೀರ ಸಂವಾದವೂ ಸೇರಿ ವಿಶಾಲ ತಾತ್ವಿಕ ಚಿಂತನೆ ನೀಡಿದ ಅವರ ಹಾದಿ ಮನುಕುಲಕ್ಕೆ ಸದಾ ಪ್ರೇರಣಾದಾಯಕ ಎಂದು ರಾಜಗೀರಾದ ಪ್ರಭುಲಿಂಗ ಸ್ವಾಮೀಜಿ ಹೇಳಿದರು.

ತಾಲೂಕಿನ ಮುಧೋಳ(ಬಿ) ಗ್ರಾಮದಲ್ಲಿ ಈಚೆಗೆ ನಡೆದ 220ನೇ ಶರಣ ಸಂಗಮ ಪ್ರಯುಕ್ತ ನಡೆದ ವಚನ ಪ್ರವಚನ ಮತ್ತು ಬಸವನೀಲಗಂಗಾ ಪ್ರಶಸ್ತಿ ಪುರಸ್ಕೃತ ಹಿನ್ನಲೆ ಆಯೋಜಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಸಾನಿಧ್ಯ ವಹಿಸಿ ಮಾತನಾಡಿದರು.

ಕಾಯಕ ಪ್ರತಿನಿಧಿಗಳಾಗಿ ಇಡೀ ನಾಡಿನ ತುಂಬ ಪ್ರಗತಿಪರ ಹೆಜ್ಜೆ ಗುರುತು ಮೂಡಿಸಿದ ಶರಣರ ನಡೆ–ನುಡಿಗಳು ಈ ದೇಶದ ಸಂಸ್ಕೃತಕ, ಸಾಹಿತ್ಯಕ ಇತಿಹಾಸಕ್ಕೆ ದೊಡ್ಡ ಕೊಡುಗೆ ಎಂದರು.

ಔರಾದ್ ಏಕತಾ ಫೌಂಡೇಷನ್ ಟ್ರಸ ಅಧ್ಯಕ್ಷ ರವೀಂದ್ರ ಸ್ವಾಮಿ ಹಾಲಹಳ್ಳಿಕರ್ ಉದ್ಘಾಟಿಸಿ ಮಾತನಾಡಿ, ಶರಣರ ಸಂದೇಶಗಳನ್ನು ಮನೆ ಮನೆಗೆ ತಲುಪಿಸುವ ಕ್ರೀಯಾಶೀಲ ಸಂಘಟನೆ. ಈ ಮೂಲಕ ಮಕ್ಕಳು, ಯುವಕರು ಮನಸ್ಸಿನಲ್ಲಿ ಸರಳ ಸಾತ್ವಿಕ ಜೀವನದ ಸಂದೇಶ ಪಸರಿಸುತ್ತಿದೆ ಎಂದರು.



ಮಾದವರಾವ ಪಾಟೀಲ ಅಧ್ಯಕ್ಷತೆ ವಹಿಸಿದರು. ಮುಖ್ಯಶಿಕ್ಷಕ ಸೂರ್ಯಕಾಂತ ಸಿಂಗೆ, ಪ್ರಕಾಶ ದೇಶಮುಖ, ಸುರೇಖಾ ಮಲ್ಲಾಪುರ, ಸಚಿಜೀವಕುಮಾರ ಜುಮ್ಮಾ, ನಾಗಯ್ಯ ಸ್ವಾಮಿ, ಮುನ್ನಕ್ಕಾ, ಮಲ್ಲಮ್ಮಾ, ನೀಲಮ್ಮಾ ಬೆಂಬುಳಗೆ, ರಾಜಶೇಖರ ಅಜ್ಜ, ಗುರುನಾಥ ವಟಗೆ, ಹಾವಗಿರಾವ ವಟಗೆ ಇದ್ದರು.

# ಜಾತಿ, ಧರ್ಮ, ಭಾಷೆಗಳ ಹೆಸರಿನಲ್ಲಿ ಭಗವದ್ಗೀತೆಯನ್ನು ಸೀಮಿತಗೊಳಿಸುವುದು ದೇಶದ ದುರಂತು



ಮಲ್ಲಮ್ಮ ನುಡಿ ವಾರ್ತೆ ಬೀದರ:

ನಗರದ ಶ್ರೀ ರಾಘವೇಂದ್ರಸ್ವಾಮಿ ಮಂದಿರದಲ್ಲಿ ಡಿಸೆಂಬರ್ 01, ಸೋಮವಾರದಂದು ಶ್ರೀ ಗೀತಾ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಭಗವದ್ಗೀತೆಯ 18 ಅಧ್ಯಾಯಗಳ 700 ಶ್ಲೋಕಗಳ ಪಾರಾಯಣ ಸಮಾರೋಪ ಈ ಸಂದರ್ಭದಲ್ಲಿ ನೆರವೇರಿತು. ಕಾರ್ಯಕ್ರಮಕ್ಕೆ ಸಾನಿಧ್ಯ ವಹಿಸಿದ ಮೆಹೆಕರ್ ತಡೋಳಾ ಸಂಸ್ಥಾನದ ಶ್ರೀ ರಾಜೇಶ್ವರ ಶಿವಾಚಾರ್ಯರು ಆಶೀರ್ವಚನ ನೀಡುತ್ತಾ, ಸಂಸ್ಕಾರ ಮತ್ತು ನೀತಿಯ ಕೊರತೆಯಿರುವ ಹಾಲಿ ಶಿಕ್ಷಣ

ಪದ್ಧತಿ ದೇಶದ ಸಮಗ್ರ ಪ್ರಗತಿಗೆ ಅಡ್ಡಿಯಾಗುತ್ತಿದೆ ಎಂದು ಅಭಿಪ್ರಾಯಪಟ್ಟರು.

"ವ್ಯಕ್ತಿತ್ವ ರೂಪಿಸಿ ರಾಷ್ಟ್ರ ನಿರ್ಮಾಣಕ್ಕೆ ಪ್ರೇರೇಪಿಸುವ ಗುರುಕುಲ ಪ್ರೇರಿತ ಭಗವದ್ಗೀತೆ ಆಧಾರಿತ ಶಿಕ್ಷಣವಷ್ಟೇ ದೇಶವನ್ನು ಬಲಿಷ್ಠ, ವಿಕಸಿತ ಮತ್ತು ಆತ್ಮನಿರ್ಭರವಾಗಿಸುತ್ತದೆ," ಎಂದು ಅವರು ಹೇಳಿದರು. ಜಾತಿ, ಧರ್ಮ, ಭಾಷೆಗಳ ಹೆಸರಿನಲ್ಲಿ ಭಗವದ್ಗೀತೆಯನ್ನು ಸೀಮಿತಗೊಳಿಸುವುದು ದೇಶದ ದುರಂತ ಎಂದೂ ವಿಷಾದಿಸಿದರು.

ಭಗವದ್ಗೀತಾ ಅಭಿಯಾನ ಸಮಿತಿಯ ವತಿಯಿಂದ ನಡೆದ ಪಾರಾಯಣ ಕಾರ್ಯಕ್ರಮದಲ್ಲಿ ನೂರಾರು ಮಾತೆಯರು ಏಕಸ್ವರದಲ್ಲಿ ಎಲ್ಲಾ 700 ಶ್ಲೋಕಗಳನ್ನು ಶ್ರಾವ್ಯವಾಗಿ ಪಠಿಸಿದರು.

ಶ್ಲೋಕೋಚ್ಚಾರಣೆಯನಾದದಿಂದ ಸಂಪೂರ್ಣ ಮಂದಿರ ಮತ್ತು ಸುತ್ತಮುತ್ತಲಿನ ವಾತಾವರಣ ಆಧ್ಯಾತ್ಮಿಕತೆಯಿಂದ ತುಂಬಿತು.

ಶ್ರೀಮತಿ ಗೀತಾ ಭಟ್, ಜ್ಯೋತಿ ಕುಲಕರ್ಣಿ, ಮಂಜುಳಾ ಕುಲಕರ್ಣಿ, ನಂದಾ ಕುಲಕರ್ಣಿ, ಪ್ರಮೋದಿನಿ ಕುಲಕರ್ಣಿ ಇವರ ನೇತೃತ್ವದ ತಂಡ ಪಾಳಿಪಾಳಿ ಪಾರಾಯಣವನ್ನು ಯಶಸ್ವಿಯಾಗಿ ಮುನ್ನಡೆಸಿತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಭಗವದ್ಗೀತಾ ಸಮಿತಿಯ ಗೌರವಾಧ್ಯಕ್ಷರು ಹಾಗೂ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ಅಧ್ಯಕ್ಷರಾದ ಸೂರ್ಯಕಾಂತ ನಾಗಮಾರಪಳ್ಳಿ ಅವರು, ಬೀದರದ ಭಗವದ್ಗೀತೆ ಅಭಿಯಾನ ಸಮಿತಿಯು ಗೀತಾ ಪ್ರಚಾರದ ಜೊತೆಗೆ ಶಾಲಾ ಮಕ್ಕಳಲ್ಲೂ ಜ್ಞಾನವರ್ಧನೆ ಮಾಡುತ್ತಿರುವ ಸೇವೆಯನ್ನು ಶ್ಲಾಘಿಸಿದರು.

# ಸಮಾಜ ಸೇವಕ ಶಿವಲಿಂಗಯ್ಯಾ ಮಠ ರವರಿಗೆ 'ಕನ್ನಡ ರತ್ನ ಪ್ರಶಸ್ತಿ' ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಕೆ. ಆರ್. ಕುಮಾರ್ ರವರ ಅಧ್ಯಕ್ಷತೆಯಲ್ಲಿ ಪಟ್ಟಣದ ಗಾಂಧಿ ವೃತ್ತದಲ್ಲಿ ಹಮ್ಮಿಕೊಂಡಿದ 70ನೇ ಕನ್ನಡ ರಾಜ್ಯೋತ್ಸವ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಸಮಾಜ ಸೇವಕ ಶಿವಲಿಂಗಯ್ಯಾ ಮಠ ರವರು ಸಾಮಾಜಿಕ ಕ್ಷೇತ್ರಗಳಲ್ಲಿ ಹಾಗೂ ಧಾರ್ಮಿಕ ಕ್ಷೇತ್ರಗಳಲ್ಲಿ ಬಡ ಜನರ, ನಿರ್ಗತಿಕರ ಹಾಗೂ ಮಠ ಮಂದಿರಗಳ ಸೇವೆಯನ್ನು ಹಗಲಿರಳನ್ನದೇ ಬಡ ಜನರಿಗೆ ಸದಾ ಕಾಲ ತನು ಮನ ಧನದಿಂದ ಸೇವೆ ಸಲ್ಲಿಸುವ ಕಾರ್ಯವನ್ನು ಮೆಚ್ಚಿ, ಅವರಿಗೆ 2025ನೇ ಸಾಲಿನ "ಕನ್ನಡ ರತ್ನ" ಪ್ರಶಸ್ತಿ ಶ್ರೀಶ್ರೀಶ್ರೀ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ಹಾಗೂ ಶ್ರೀ ಹವಾ ಮಲ್ಲಿನಾಥ ಮಹಾಜರಾಜರು ನೀಡಿ ಸನ್ಮಾನಿಸಿ ಆಶೀರ್ವಾದಿಸಿದರು. ಶಾಸಕರಾದ ಡಾ. ಸಿದ್ದು ಪಾಟೀಲ, ಡಾ. ಶೈಲೇಂದ್ರ ಬೆಲ್ದಾಳೆ, ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್, ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ, ಜಿಲ್ಲಾಧ್ಯಕ್ಷ ಸುಭಾಷ ಕೆನೆಡೆ, ಜಿಲ್ಲಾ ಕಾರ್ಯದರ್ಶಿ ರಮೇಶ ಧೂಳ, ತಾಲೂಕಾಧ್ಯಕ್ಷ ಪವನ ಪೂಜಾರಿ, ರಾಜಕುಮಾರ್ ಆರ್. ಹಡಪದ ಸೇರಿದಂತೆ ಕನ್ನಡ ಅಭಿಮಾನಿಗಳು ಉಪಸ್ಥಿತರಿದ್ದರು.

# ಶ್ರೀಕಾಂತ ರಾಠೋಡ ಅವರಿಗೆ 'ಕನ್ನಡ ರತ್ನ ಪ್ರಶಸ್ತಿ' ಪ್ರದಾನ



ಮಲ್ಲಮ್ಮ ನುಡಿ ವಾರ್ತೆಚಿಟಗುಪ್ಪ:

ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್ ರವರ ಅಧ್ಯಕ್ಷತೆಯಲ್ಲಿ ಪಟ್ಟಣದ ಗಾಂಧಿ ವೃತ್ತದಲ್ಲಿ ಹಮ್ಮಿಕೊಂಡಿದ್ದ 70ನೇ ಕನ್ನಡ ರಾಜ್ಯೋತ್ಸವ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಾದೇಶಿಕ ವಲಯ ಅರಣ್ಯಾಧಿಕಾರಿಯಾಗಿ ತಾಲೂಕಿನಲ್ಲಿ ಅರಣ್ಯ ಸಂರಕ್ಷಣೆ, ಪರಿಸರ ಸಂರಕ್ಷಣೆಗಾಗಿ ಹಗಲಿರಳು ಸಲ್ಲಿಸುತ್ತಿರುವ ಸೇವೆಯನ್ನು ಪರಿಗಣಿಸಿ ಅವರನ್ನು 2025ನೇ ಸಾಲಿನ "ಕನ್ನಡ ರತ್ನ ಪ್ರಶಸ್ತಿ" ಶ್ರೀಶ್ರೀಶ್ರೀ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ಹಾಗೂ ಶ್ರೀ ಹವಾ ಮಲ್ಲಿನಾಥ ಮಹಾರಾಜರು ನೀಡಿ ಸನ್ಮಾನಿಸಿ ಆಶೀರ್ವಾದಿಸಿದರು. ಈ ಸಂದರ್ಭದಲ್ಲಿ ಶಾಸಕರಾದ ಡಾ. ಸಿದ್ದು ಪಾಟೀಲ, ಡಾ. ಶೈಲೇಂದ್ರ ಬೆಲ್ದಾಳೆ, ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್, ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ, ಉಪ ವಲಯ ಅರಣ್ಯಾಧಿಕಾರಿ ವೀರಯ್ಯಾ ಪೂಜಾರಿ, ಜಿಲ್ಲಾಧ್ಯಕ್ಷ ಸುಭಾಷ ಕೆನೆಡೆ, ಜಿಲ್ಲಾ ಕಾರ್ಯದರ್ಶಿ ರಮೇಶ ಧೂಳ, ತಾಲೂಕಾಧ್ಯಕ್ಷ ಪವನ ಪೂಜಾರಿ, ರಾಜಕುಮಾರ್ ಆರ್. ಹಡಪದ ಸೇರಿದಂತೆ ಕನ್ನಡ ಅಭಿಮಾನಿಗಳು ಉಪಸ್ಥಿತರಿದ್ದರು.

# ನಾವೀನ್ಯತೆ ಆವಿಷ್ಕಾರ ಪ್ರಶಸ್ತಿ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಬೀದರ: ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ 2025ನೇ ಸಾಲಿಗೆ ಪದವಿ, ಸ್ನಾತಕೋತ್ತರ ಪದವಿ, ಬೋಧಕರು ಹಾಗೂ ಜನಸಾಮಾನ್ಯರ ಆವಿಷ್ಕಾರ/ನಾವಿನ್ಯತೆಗೆ ಪುರಸ್ಕಾರ ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಜ್ಞಾನ ಮತ್ತು ತಂತ್ರಜ್ಞಾನ ಅಥವಾ ಆರ್ಥಿಕತೆಯ ಯಾವುದೇ ವಿಭಾಗದಿಂದ ಮೂಡಿದ ಜನಸಾಮಾನ್ಯರ ಅದರಲ್ಲೂ ಗ್ರಾಮೀಣ ಪ್ರದೇಶದ ಜನಜೀವನವನ್ನು ಪರಿವರ್ತಿಸಲು ಸಹಾಯಕವಾದ ಅಥವಾ ಉದ್ಯಮಗಳು ಹಾಗೂ ಉದ್ಯೋಗ ಸೃಷ್ಠಿಗೆ ಕಾರಣವಾದ ಅನುಕರಣೀಯ ಆವಿಷ್ಕಾರಗಳು/ಪರಿಹಾರಗಳನ್ನು ಪ್ರತಿ ವರ್ಷ ಗುರುತಿಸಿ ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳ ಹಾಗೂ ಬೋಧಕರಿಗೆ ಮತ್ತು ಜನಸಾಮಾನ್ಯರಿಗೆ ನಗದು ಪುರಸ್ಕಾರದ ಜೊತೆಗೆ ಪ್ರಶಸ್ತಿ ಪತ್ರಗಳನ್ನು ನೀಡಲಾಗುತ್ತದೆ.

ಆಸಕ್ತರು ದಿನಾಂಕ: 31–12–2025 ರೊಳಗಾಗಿ ಅಕಾಡೆಮಿಯ ವೆಸ್ಸೈನಲ್ಲಿ (https://kstacademy.in) ನೀಡಿರುವ ಮಾರ್ಗಸೂಚಿಯನ್ವಯ ಅಲೈನ್ ಮೂಲಕ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಶ್ರೀನಿವಾಸು (9620767819) ಹಾಗೂ ಚಂದ್ರಶೇಖರಮೂರ್ತಿ (9686449019/080–29721550) ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಔರಾದ(ಬಿ): ನಾಳೆ ಕೆಡಿಪಿ ಸಭೆ

ಮಲ್ಲಮ್ಮ ನುಡಿ ವಾರ್ತೆ ಬೀದರ್:

ಔರಾದ (ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅಧ್ಯಕ್ಷತೆಯಲ್ಲಿ ಡಿಸೆಂಬರ್.4 ರಂದು ಬೆಳಿಗ್ಗೆ 10 ಗಂಟೆಗೆ ಔರಾದ(ಬಿ) ತಾಲ್ಲೂಕಾ ಪಂಚಾಯತ ಸಭಾಂಗಣದಲ್ಲಿ ಕೆ.ಡಿ.ಪಿ. ಸಭೆ ನಡೆಯಲಿದೆ. ಕಾರಣ ತಾಲ್ಲೂಕಿನ ಎಲ್ಲಾ ಅನುಷ್ಠಾನಾಧಿಕಾರಿಗಳು ತಮ್ಮ ಇಲಾಖೆಯ ಪ್ರಗತಿ ವರದಿಯೊಂದಿಗೆ ಖುದ್ದಾಗಿ ಸಭೆಗೆ ಹಾಜರಾಗಬೇಕೆಂದು ಔರಾದ (ಬಿ) ತಾಲ್ಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎನ್. ಧರ್ಮಸಿಂಗ್ ಕ್ರಿಕೆಟ್ ಟೂರ್ನಿ 16 ರಿಂದ

ಮಲ್ಲಮ್ಮ ನುಡಿ ವಾರ್ತೆ ಬೀದರ್:



ನಗರದ ನೆಹರೂ ಕ್ರೀಡಾಂಗಣದಲ್ಲಿ ಡಿ. 16 ರಿಂದ ಮಾಜಿ ಮುಖ್ಯಮಂತ್ರಿ ಎನ್. ಧರ್ಮಸಿಂಗ್ ಸ್ಮರಣಾರ್ಥ 9ನೇ ಕ್ರಿಕೆಟ್ ಟೂರ್ನಮೆಂಟ್ ಹಮ್ಮಿಕೊಳ್ಳಲಾಗಿದೆ ಎಂದು

ಟೂರ್ನಮೆಂಟ್ ಆಯೋಜಕರೂ ಆದ ಬೀದರ್ ದಕ್ಷಿಣ ಮುಖಂಡ ಚಂದ್ರಾಸಿಂಗ್ ತಿಳಿಸಿದ್ದಾರೆ.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕ್ರಿಕೆಟ್ ತಂಡಗಳಿಗೆ ಮಾತ್ರ

ಟೂರ್ನಮೆಂನಲ್ಲಿ ಪಾಲ್ಗೊಳ್ಳಲು ಅವಕಾಶ ಇದೆ. ವಿಜೇತ ತಂಡಕ್ಕೆ ರೂ. 1 ಲಕ್ಷ, ರನ್ನರ್ ಅಪ್ ತಂಡಕ್ಕೆ ರೂ. 50 ಸಾವಿರ ನಗದು ಹಾಗೂ ಟ್ರೋಫಿ ದೊರೆಯಲಿದೆ ಎಂದುಹೇಳಿದ್ದಾರೆ. ಉತ್ತಮ ಬ್ಯಾಮೆನ್ ಹಾಗೂ ಉತ್ತಮ ಬೌಲರ್ ಪ್ರಶಸ್ತಿ ಕೊಡಲಾಗುವುದು ಎಂದು ತಿಳಿಸಿದ್ದಾರೆ.

ಪ್ರತಿ ಪಂದ್ಯಗಳು 8 ಓವರ್,

ಸೆಮಿ ಫೈನಲ್ ಹಾಗೂ ಫೈನಲ್ ಪಂದ್ಯಗಳು 10 ಓವನದ್ದಾಗಿರಲಿವೆ ಎಂದು ಹೇಳಿದ್ದಾರೆ. ತಂಡಗಳ ಹೆಸರು ನೋಂದಣಿಗೆ ಡಿಸೆಂಬರ್ 13 ಕೊನೆಯ ದಿನವಾಗಿದೆ. ಹೆಸರು ನೋಂದಣಿ ಹಾಗೂ

ಹೆಚ್ಚಿನ ಮಾಹಿತಿಗೆ ಇಮ್ರಾನ್ (ಮೊ.ಸಂ: 9731988737) ಅವರನ್ನು ಸಂಪರ್ಕಿಸಬಹುದುಎಂದು ತಿಳಿಸಿದ್ದಾರೆ.

# ಡಿ.4ರಂದು ವಿವಿಧೆಡೆ ಜಗದ್ಗುರು ಮೌನೇಶ್ವರರ ಜಯಂತೋತ್ಸವ ಆಚರಣೆ

ಮಲ್ಲಮ್ಮ ನುಡಿ ವಾರ್ತೆಚಿಟಗುಪ್ಪ:

ತಾಲೂಕಿನ ವಿವಿಧಡೆ ಹೊಸ್ತಿಲ ಹುಣ್ಣಿಮೆಯ ದಿನ ಗುರುವಾರದಂದು ಭಾವೈಕ್ಯತೆಯ ಹರಿಕಾರ ತಿಂಥಣಿ ಜಗದ್ಗುರು ಮೌನೇಶ್ವರ ಜಯಂತೋತ್ಸವ ನಿಮಿತ್ತವಾಗಿ ನಾನಾ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ತಾಲೂಕಿನ ನಿರ್ಣಾ ಗ್ರಾಮದ ಜಗದ್ಗುರು ಮೌನೇಶ್ವರ ಮಂದಿರದ ಜಾತ್ರಾ ಮಹೋತ್ಸವ ಜರುಗಲಿದೆ. ಯಾದಗಿರಿ ಏಕದಂಡಿಗಿ ಶ್ರೀಮಠದ ಶ್ರೀನಿವಾಸ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ನಾನಾ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ಬೆಳಗ್ಗೆ ವಿಶೇಷ ಹೋಮ ಹವನ, ಪಲ್ಲಕ್ಕಿ ಉತ್ಸವ ಸೇರಿದಂತೆ ನಾನಾ ಧಾರ್ಮಿಕ ಕಾರ್ಯಕ್ರಮಗಳುಜರುಗಲಿವೆ. ತಾಲೂಕಿನ ಮನ್ನಾಎಖ್ಖೇಳ್ಳಿ ಗ್ರಾಮದ ಜಗದ್ಗುರು ಮೌನೇಶ್ವರ ಮಂದಿರದಲ್ಲಿ ಹಿಂದು


ಮುಸ್ಲಿಂ ಭಾವೈಕ್ಯತೆಯ ಹರಿಕಾರ ತಿಂಥಣಿ ಜಗದ್ಗುರು ಮೌನೇಶ್ವರರ ಜಯಂತೋತ್ಸವ ಕಾರ್ಯಕ್ರಮ

ನಿಮಿತ್ತವಾಗಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಮಂದಿರದ ಅಧ್ಯಕ್ಷ ರಾಜಕುಮಾರ ಪಂಚಾಳ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂದು ಬೆಳಗ್ಗೆ 8 ಗಂಟೆಗೆ ಜಗದ್ಗುರು ಮೌನೇಶ್ವರ ಶಿವಲಿಂಗಕ್ಕೆ ವಿಶೇಷ ಅಭಿಷೇಕ, ಅಲಂಕಾರ ಹಾಗೂ ಮಹಾಮಂಗಳಾರತಿ ಕಾರ್ಯಕ್ರಮ ಜರುಗಲಿದೆ. ತಾಲೂಕಿನ ಮೀನಕೇರಾ ಗ್ರಾಮದ ಜಗದ್ಗುರು ಮೌನೇಶ್ವರ ಹಿರೋಡೇಶ್ವರ ಮಂದಿರದಲ್ಲಿ ಮೌನೇಶ್ವರ ಜಯಂತೋತ್ಸವ ನಿಮಿತ್ತವಾಗಿ ವಿಶೇಷ ಪೂಜಾಭಿಷೇಕ ಕಾರ್ಯಕ್ರಮವೂ ವೇಬ್ರ ಶ್ರೀ ಕೃಷ್ಣಾಚಾರ್ಯ ಪಂಚಾಳ ಅವರ ನೇತೃತ್ವದಲ್ಲಿ ಜರುಗಲಿದ್ದು, ಸಂಜೆ 7 ಗಂಟೆಗೆ ತಾಯಂದಿರರಿಂದ ತೊಟ್ಟಿಲು ಕಾರ್ಯಕ್ರಮ ಜರುಗಲಿದೆ.

# ಬೆಳಗಾವಿಯಲ್ಲಿ ಪತ್ರಕರ್ತರ ರಕ್ಷಣೆ ಕಾಯ್ದೆಗೆ ಒತ್ತಾಯಿಸಿ 15ಕ್ಕೆ ಧರಣಿ ಜಾನಸನ್ ಘೋಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್ : ಪತ್ರಕರ್ತರ ರಕ್ಷಣೆ ಕಾಯ್ದೆ ಜಾರಿಗೊಳಿಸುವುದು, ಆರ್. ಎನ್.ಐ. ಸಂಖ್ಯೆ ಹೊಂದಿದ ಎಲ್ಲ ಪತ್ರಕರ್ತರಿಗೆ ರಾಜ್ಯದಾದ್ಯಂತ ಸಂಚರಿಸಲು ಉಚಿತ ಬಸ್ ಪಾಸ್ ವಿತರಿಸುವುದು ಸೇರಿದಂತೆ ಪತ್ರಕರ್ತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯು ಡಿ. 15 ರಂದು ಬೆಳಗಾವಿಯ ಸುವರ್ಣ ಸೌಧದೆದುರು ಧರಣಿ ನಡೆಸಲು ನಿರ್ಧರಿಸಿದೆ.

ಡಿಸೆಂಬರ್ 8 ರಿಂದ 19 ರ ವರೆಗೆ ಬೆಳಗಾವಿಯಲ್ಲಿ ವಿಧಾನಮಂಡಲ ಚಳಿಗಾಲ ಅಧಿವೇಶನ ನಡೆಯಲಿದೆ. ಈ ವೇಳೆ ಸರ್ಕಾರದ ಗಮನ ಸೆಳೆಯಲು ಧರಣಿ ನಡೆಸಲಾಗುತ್ತಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘಟನೆಯ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ತಿಳಿಸಿದ್ದಾರೆ.



ಪತ್ರಕರ್ತರ ಮಾಶಾಸನ ನಿಯಮ ಸರಳೀಕರಿಸುವುದು, ಹಿರಿಯ ಪತ್ರಕರ್ತರಿಗೆ ನೆರವು ಕಲ್ಪಿಸುವುದು, ಕರ್ತವ್ಯದ ವೇಳೆ ಅಥವಾ ಅಪಘಾತದಲ್ಲಿ ಪತ್ರಕರ್ತರು ಮೃತಪಟ್ಟರೆ ಅವರ ಕುಟುಂಬಕ್ಕೆ ರೂ. 10 ಲಕ್ಷ ಪರಿಹಾರ ಒದಗಿಸುವುದು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಖಾಲಿ ಇರುವ 300 ಕ್ಕೂ ಅಧಿಕ ಹುದ್ದೆಗಳನ್ನು ಭರ್ತಿ ಮಾಡುವುದು ಇತರ ಬೇಡಿಕೆಗಳಾಗಿವೆ ಎಂದು ಹೇಳಿದ್ದಾರೆ.

# ಪರಿಸರ ಮಾಲಿನ್ಯ ತಡೆಗೆ ಸಾಮೂಹಿಕ ಪ್ರಯತ್ನ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ವಿವಿಧ ಮಾಲಿನ್ಯಗಳಿಂದ ಪರಿಸರ ತತ್ತರಿಸಿ ಹೋಗಿದೆ. ಮಾಲಿನ್ಯ ನಿಯಂತ್ರಣ ನೀತಿ–ನಿಯಮಗಳು, ಸರ್ಕಾರ, ಕೆಲವು ಸಂಸ್ಥೆಗಳು, ಪರಿಸರ ಪ್ರೇಮಿಗಳಿಂದ ಮಾತ್ರ ಸಾಧ್ಯವಿಲ್ಲ. ಜೊತೆಗೆ ಎಲ್ಲೆಡೆ ವ್ಯಾಪಕವಾಗಿ ಗಿಡಗಳನ್ನು ನೆಟ್ಟು ಪೋಷಿಸುವುದು, ಸ್ವಚ್ಛತೆಯನ್ನು ಕಾಪಾಡುವುದು, ಪರಿಸರ ಸ್ನೇಹಿ ವಾತಾವರಣ ನಿರ್ಮಿಸುವ ಮೂಲಕ ಮಾಲಿನ್ಯ ನಿಯಂತ್ರಣಕ್ಕೆ ಸಾಮೂಹಿಕ ಪ್ರಯತ್ನ ಅಗತ್ಯವಾಗಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಅಭಿಪ್ರಾಯಪಟ್ಟರು.

ನಗರದ ಹೊಸ ಜೇವರ್ಗಿ ರಸ್ತೆಯಲ್ಲಿನ 'ಗೆಟ್ಸ್ ಡಿಗ್ರಿ ಕಾಲೇಜ್'ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ರಾಷ್ಟ್ರೀಯ ಮಾಲಿನ್ಯ ನಿಯಂತ್ರಣಾ ದಿನಾಚರಣೆ'ಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ವ್ಯಾಪಕ ಗಿಡ–ಮರಗಳಿಂದ ಎಕ್ಯೂಐ ಉತ್ತಮವಾಗುತ್ತದೆ. ದೆಹಲಿ ಮಾಲಿನ್ಯದಿಂದ ತತ್ತರಿಸಿದೆ. ಪರಿಸರ ಮಾಲಿನ್ಯ ತಡೆಗೆ ಪ್ಲಾಸ್ಟಿಕ್ ಬಳಕೆ ನಿಷೇಧ, ವನಮಹೋತ್ಸವ, ಜಲಮೂಲಗಳ ಸಂರಕ್ಷಣೆ,

ನೀರಿನ ಮಿತ ಬಳಕೆ, ಇ–ತ್ಯಾಜ್ಯ ಪುನರ್ಬಳಕೆ, ಆಹಾರ ಪದಾರ್ಥಗಳನ್ನು ಹಾಳಾಗದಂತೆ ಎಚ್ಚರವಹಿಸುವುದು, ನವೀಕರಿಸಬಹುದಾದ ಇಂಧನಗಳು ಮತ್ತು ಎಲೆಕ್ಟ್ರಿಕ್ ವಾಹನಗಳ ಬಳಕಗೆ ಆದ್ಯತೆ, ವೈಯಕ್ತಿಕ ವಾಹನದ ಬದಲಿಗೆ ಸಾರ್ವಜನಿಕ ಸಾರಿಗೆಯನ್ನು ಬಳಸುವುದು, ರಾಸಾಯನಿಕಗಳ ಬಳಕೆ ನಿಷೇಧಿಸುವುದು ಸೇರಿದಂತೆ ಅನೇಕ ಕ್ರಮಗಳನ್ನು ಅನುಸರಿಸುವ ಮೂಲಕ ಮಾಲಿನ್ಯವನ್ನು ತಡೆಗಟ್ಟಬಹುದಾಗಿದೆ ಎಂದರು.

ಕಾಲೇಜಿನ ಪ್ರಾಂಶುಪಾಲ ಡಾ.ಎಚ್.ಬಿ.ಕಂಟೆಗೋಳ್ ಮಾತನಾಡಿ, ಮಾಲಿನ್ಯ ತಡೆಗೆ ವ್ಯಾಪಕ ಜಾಗೃತಿ ಅಗತ್ಯ. ವಿದ್ಯಾರ್ಥಿ ದಿಸೆಯಿಂದಲೇ ಪರಿಸರ ಕಾಳಜಿ ಬೆಳೆಸಿಕೊಂಡು, ಮಾಲಿನ್ಯಮುಕ್ತ ಪರಿಸರ ನಿರ್ಮಾಣಕ್ಕೆ ಶ್ರಮಿಸಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕರಾವಿಪ ಗ್ರಾಮೀಣ ಘಟಕದ ಮಾಜಿ ಸಂಚಾಲಕ ಶಿವಯೋಗೆಪ್ಪಾ ಎಸ್.ಬಿರಾದಾರ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅಪರಿಚಿತ ಮೃತ ವ್ಯಕ್ತಿಗಳ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ದಿನಾಂಕ: 20–11–2025 ರಂದು ಬಬಲಾದ ಮತ್ತು ಕಲಬುರಗಿ ರೈಲ್ವೆ ನಿಲ್ದಾಣಗಳ ಮಧ್ಯೆ ರೈಲ್ವೆ ಕಿ.ಮೀ.ನಂ. 557/37–35 ರಲ್ಲಿ ಸುಮಾರು 35 ರಿಂದ 40 ವರ್ಷದ ಅಪರಿಚಿತ ವ್ಯಕ್ತಿಯು ಮೃತಪಟ್ಟಿದ್ದು, ಈವರೆಗೆ ಈ ಮೃತ ವ್ಯಕ್ತಿಯ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ ಎಂದು ವಾಡಿ (ಜಂ) ರೈಲ್ವೆ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೃತ ವ್ಯಕ್ತಿಯು 5 ಅಡಿ 1 ಇಂಚು ಎತ್ತರ ಇದ್ದು, ಗೋಧಿ ಮೈಬಣ್ಣ, ಕೋಲು ಮುಖ, ಉದ್ದನೆಯ ಮೂಗು, ತಲೆಯಲ್ಲಿ ಕಪ್ಪುಬಣ್ಣದ ಕೂದಲು, ಮುಖದ ಮೇಲೆ ಕಪ್ಪು ಬಣ್ಣದ ಮೀಸೆ ಮತ್ತು ಕುರುಚಲು ಗಡ್ಡಾ ಬಿಟ್ಟಿದ್ದು, ಸಾಧಾರಣ ಮೈಕಟ್ಟು ಹೊಂದಿರುತ್ತಾರೆ. ಕೊರಳಲ್ಲಿ ರುದ್ರಾಕ್ಷಿ ಮಾಲೆ ಇರುತ್ತದೆ.

ಅದೇ ರೀತಿ ದಿನಾಂಕ: 27–11–2025 ರಂದು ಶಹಾಬಾದ ರೈಲು ನಿಲ್ದಾಣದ ಡೌನ್

ರೈಲು ಹಳಿಯ ಪಕ್ಕದ ಡಾಂಬರ ರಸ್ತೆಯ ಮೇಲೆ ರೈಲ್ವೆ ವಿದ್ಯುತ್ ಕಂಬ ಅದರ ಮೇಲೆ 1018 ರ ಹತ್ತಿರದಲ್ಲಿ ಸುಮಾರು 45 ರಿಂದ 50 ವರ್ಷದ ಅಪರಿಚಿತ ವ್ಯಕ್ತಿಯು ಮೃತಪಟ್ಟಿದ್ದು, ಈವರೆಗೆ ಈ ಮೃತ ವ್ಯಕ್ತಿಯ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ.

ಮೃತಪಟ್ಟ ವ್ಯಕ್ತಿಯು 5 ಅಡಿ 2 ಇಂಚು ಎತ್ತರ ಇದ್ದು, ಎಣ್ಣೆಗೆಪ್ಪು ಮೈಬಣ್ಣ, ಕೋಲು ಮುಖ, ದುಂಡು ಮುಗು, ತಲೆಯಲ್ಲಿ ಕಪ್ಪು ಮತ್ತು ಬಿಳಿ ಮಿಶ್ರಿತ ಬಣ್ಣದ ಕೂದಲು, ಮುಖದ ಮೇಲೆ ಕಪ್ಪು ಮತ್ತು ಬಿಳಿ ಮಿಶ್ರಿತ ಬಣ್ಣದ ಮೀಸೆ ಮತ್ತು ಕರುಚುಲು ಗಡ್ಡಾ ಬಿಟ್ಟಿರುತ್ತಾರೆ. ಸಾಧಾರಣ ಮೈಕಟ್ಟು ಹೊಂದಿರುತ್ತಾರೆ.

ಬಲಗೈ ಮೇಲೆ ಯಾವುದೋ ಕಾಣಿಸದ ಅಂಚೆ ಗುರುತು ಇರುತ್ತದೆ. ಬಿಳಿ ಬಣ್ಣದ ತುಂಬು ತೋಳಿನ ಶರ್ಟ್, ಸಿಮೆಂಟ್ ಬಣ್ಣದ ಪ್ಯಾಂಟ್, ಕಂದು ಬಣ್ಣದ ಅಂಡರ್‌ವೇಯರ್ ಮತ್ತು ಸೊಂಟದಲ್ಲಿ ಬಿಳಿ ಬಣ್ಣದ ಉಡದಾರ ಇರುತ್ತದೆ.

ಈ ಮೇಲ್ಕಂಡ ಮೃತ ವ್ಯಕ್ತಿಗಳ ವಾರಸುದಾರರು ಯಾರಾದರೂ ಇದ್ದಲ್ಲಿ ರೈಲ್ವೆ ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 080–22871291, ವಾಡಿ ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08476–202244 ಹಾಗೂ ರೈಲ್ವೆ ಪೊಲೀಸ್ ಠಾಣೆಯ ಉಪ ನಿರೀಕ್ಷಕರ ಮೊಬೈಲ್ ಸಂಖ್ಯೆ 9480802132ಗೆ ಸಂಪರ್ಕಿಸಲು ಕೋರಿದೆ.

# ಕ್ರೀಡೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ನಮ್ಮ ಸಂಸ್ಥೆ ಸದಾ ಮುಂದೆ : ಅವ್ವಾರು ಮಂಜುನಾಥ್



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ: ಬಳ್ಳಾರಿ ನಗರದ ಯುವ ಬ್ಯಾಡ್ಮಿಂಟನ್ ಪ್ರತಿಭೆಗಳು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದು ಇವರ ಕ್ರೀಡಾ ಸಾಧನೆ ರಾಷ್ಟ್ರದ ಗಮನ ಸೆಳೆಯುವಂತಾಗಲಿ ಎಂದು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ಶುಭ ಹಾರೈಸಿದ್ದಾರೆ.

ರಾಜ್ಯಮಟ್ಟದ ಬ್ಯಾಡ್ಮಿಂಟನ್ ಕ್ರೀಡಾಕೂಟದಲ್ಲಿ ಪಾಲ್ಗೊಂಡಿದ್ದ ಬಳ್ಳಾರಿ ನಗರದ ಯುವ ಪ್ರತಿಭೆಗಳು ಮತ್ತು ವಿದ್ಯಾರ್ಥಿನಿಯರಾದ ಕೆ. ಹಾಶಿಕಾ ಸಾಯಿ, ಟಿ. ಸಮುದ್ವಿತ ಮತ್ತು ಎಸ್. ಮನೋಜ್ಞಾಸಾಯಿ ಅವರು, ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ಮಹತ್ತರ ಸಾಧನೆ ಮಾಡಿರುವ ಹಿನ್ನಲೆಯಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆಯು ಇವರನ್ನು ಮಂಗಳವಾರ ಅಭಿನಂದಿಸಿ, ಗೌರವಿಸಿ ಪ್ರೋತ್ಸಾಹಿಸಿತು.

ಬಳ್ಳಾರಿ ಕಲೆ, ಕ್ರೀಡೆ, ಸಾಹಿತ್ಯ ಮತ್ತು ವಿವಿಧ ಕ್ಷೇತ್ರಗಳಲ್ಲಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಖ್ಯಾತಿಯನ್ನು ಪಡೆದಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಾದ ಕೆ. ಹಾಶಿಕಾ ಸಾಯಿ, ಟಿ. ಸಮುದ್ವಿತ ಮತ್ತು ಎಸ್. ಮನೋಜ್ಞಾಸಾಯಿ ಅವರ ಸಾಧನೆಯು ಗಮನಾರ್ಹವಾದದ್ದು. ಈ ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಅಭಿನಂದಿಸುತ್ತಿದೆ ಎಂದರು.

ಅಭಿನಂದಿತ ವಿದ್ಯಾರ್ಥಿನಿಯರಾದ ಕೆ. ಹಾಶಿಕಾ ಸಾಯಿ, ಟಿ. ಸಮುದ್ವಿತ ಮತ್ತು ಎಸ್. ಮನೋಜ್ಞಾಸಾಯಿ ಅವರು, ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ಅತ್ಯಂತ ಕೆಳ ಹಂತದಿಂದ ನಿರಂತರ ಸಾಧನೆಗಳ ಮೆಟ್ಟಿಲುಗಳನ್ನು ಹತ್ತುತ್ತಿರುವ ನಮಗೆ, ಬಿಡಿಸಿಸಿ&ಐ ಅಭಿನಂದಿಸುತ್ತಿರುವುದಕ್ಕೆ ಕೃತಜ್ಞತೆಗಳನ್ನು ಸಲ್ಲಿಸುತ್ತೇವೆ. ನಿಮ್ಮೆಲ್ಲರ ಶುಭ ಹಾರೈಕೆ ಮತ್ತು ಪ್ರೋತ್ಸಾಹಗಳ ಕಾರಣ ರಾಷ್ಟ್ರಮಟ್ಟದಲ್ಲಿ ವಿಶೇಷ ಸಾಧನೆಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು, ಯುವ ಕ್ರೀಡಾಪಟುಗಳು ವಿದ್ಯಾರ್ಥಿ ಜೀವನದಲ್ಲಿಯೇ ಜಿಲ್ಲಾ ಮತ್ತು ರಾಜ್ಯ ಮಟ್ಟದ ವಿವಿಧ ಕ್ರೀಡಾಕೂಟಗಳಲ್ಲಿ ಪಾಲ್ಗೊಂಡು ವಿಶೇಷ ಸಾಧನೆಗಳನ್ನು ಮಾಡಿದ್ದಾರೆ. ಈ ನಿಟ್ಟಿನಲ್ಲಿ ನಮ್ಮ ಸಂಸ್ಥೆಯು ಅವರ ಸಾಧನೆಯನ್ನು ಅಭಿನಂದಿಸಿ, ಭವಿಷ್ಯದ ಸ್ಪರ್ಧೆಗಳಲ್ಲಿ ಸಾಧನೆ ಮಾಡಲು ಪ್ರೋತ್ಸಾಹಿಸುತ್ತಿದೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಕಾರ್ಯಕಾರಿ ಸಮಿತಿ ಸದಸ್ಯ ವೇಣುಗೋಪಾಲ್ ಗುಪ್ತ ಅವರು ಕ್ರೀಡಾಪಟುಗಳನ್ನು ಸಭೆಗೆ ಪರಿಚಯಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನಿಕಟಪೂರ್ವ ಅಧ್ಯಕ್ಷರಾದ ಯಶವಂತರಾಜ್ ನಾಗಿರೆಡ್ಡಿ, ಹಿರಿಯ ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಉಪಾಧ್ಯಕ್ಷರಾದ ಸೊಂತ ಗಿರಿಧರ, ಪಿ. ಪಾಲಣ್ಣ, ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ, ವಿ. ರಾಮಚಂದ್ರ, ಖಜಾಂಚಿಗಳಾದ ನಾಗಳ್ಳಿ ರಮೇಶ್, ಮಾಜಿ ಅಧ್ಯಕ್ಷರುಗಳಾದ ಸಿ. ಶ್ರೀನಿವಾಸರಾವ್, ಬಿ. ಮಹಾರುದ್ರಗೌಡ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು, ಕ್ರೀಡಾಪಟುಗಳ ಪೋಷಕರು ಉಪಸ್ಥಿತರಿದ್ದರು.

# ಸಮಗ್ರ ಶೈಕ್ಷಣಿಕ ಅಭಿವೃದ್ಧಿಗೆ ಗುಲಬರ್ಗಾ ವಿಶ್ವವಿದ್ಯಾಲಯ ಸೇವೆ ಅಮೂಲ್ಯವಾಗಿದೆ: ಕುಲಪತಿ ರಾಜಾಸಾಬ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಕಲ್ಯಾಣ ಕರ್ನಾಟಕ ಭಾಗದ ಜನರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಪ್ರಗತಿಗೆ ಗುಲಬರ್ಗಾ ವಿಶ್ವವಿದ್ಯಾಲಯದ ಸೇವೆ ಅಮೂಲ್ಯವಾಗಿದ್ದು, ಈ ವಿಶ್ವವಿದ್ಯಾಲಯದಲ್ಲಿ ಅಭ್ಯಾಸ ಮಾಡಿದ ಬಹಳಷ್ಟು ವಿದ್ಯಾರ್ಥಿಗಳು ಪ್ರತಿಯೊಂದು ರಂಗದಲ್ಲಿ ಉನ್ನತ ಸಾಧನೆಯನ್ನು ಮಾಡಿದ್ದಾರೆ ಎಂದು ಬೆಂಗಳೂರಿನ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಅಧ್ಯಕ್ಷರು ಹಾಗೂ ತುಮಕೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ಎ. ಹೆಚ್. ರಾಜಾಸಾಬ್ ಅವರು ಹೇಳಿದರು.

ಮಂಗಳವಾರದಂದು ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯ ಕಲಬುರಗಿ 46 ನೆಯ ಸಂಸ್ಥಾಪನಾ ದಿನಾಚರಣೆ ಹಾಗೂ 2025–26 ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭದಲ್ಲಿ ಉದ್ಘಾಟಿಸಿ ಮಾತನಾಡಿದರು.

ಈಗ ಪ್ರತಿ ಜಿಲ್ಲೆಗೊಂದು ವಿಶ್ವವಿದ್ಯಾಲಯ ಸ್ಥಾಪನೆ ಕಾರಣ ಗುಲಬರ್ಗಾ ವಿಶ್ವವಿದ್ಯಾಲಯ ತೀವ್ರ ಅನುದಾನ ಕೊರತೆ ಮತ್ತು ಸಮಯಕ್ಕೆ ಸರಿಯಾಗಿ ನೇಮಕಾತಿಗಳು ಇಲ್ಲದ ಕಾರಣ ಶಿಕ್ಷಣದಲ್ಲಿ ಹಿನ್ನಡೆ ಕಾರಣವಾಗುತ್ತಿದೆ. ಸರ್ಕಾರ ವಿಶ್ವವಿದ್ಯಾಲಯಗಳಿಗೆ ಸಮರ್ಪಕ ಅನುದಾನ ಬಿಡುಗಡೆ ಮಾಡಿ ಪ್ರತಿಯೊಬ್ಬರು ಉನ್ನತ ಶಿಕ್ಷಣ ಕನಸನ್ನು ಸಕರಾಗೊಳಿಸಲು ಹೆಚ್ಚಿನ ಮುತುವರ್ಜಿ ವಹಿಸಿ ಸಮರ್ಪಕ ಅನುದಾನವನ್ನು ಬಿಡುಗಡೆ ಮಾಡಬೇಕೆಂದು ಹೇಳಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಪೂರಕವಾಗುವಂತೆ ಸುಸ್ಥಿರ ಅಭಿವೃದ್ಧಿ ನಾವಿನ್ಯತೆ ಸಂಶೋಧನೆ ಕುರಿತು ಪ್ರಾಧ್ಯಾಕಪಕರುಗಳು ವಿದ್ಯಾರ್ಥಿಗಳಿಗೆ ಹೆಚ್ಚಿನ ಮಾರ್ಗದರ್ಶನ ನೀಡಬೇಕು. ಕಲ್ಯಾಣ ಕರ್ನಾಟಕ ಭಾಗವು ಶೈಕ್ಷಣಿಕವಾಗಿ ಹಿಂದುಳಿದ ಹಣೆಪಟ್ಟಿ ಇದ್ದರೂ ಕೂಡ ಸಂಗೀತ, ಕಲೆ, ಸಂಸ್ಕೃತಿ ಮತ್ತು ಸಂಪ್ರಾದಯಗಳು ಮತ್ತು ಎಲ್ಲ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹಾನ ವ್ಯಕಿಗಳು ಈ ಭಾಗದವರಾಗಿದ್ದಾರೆ ಎಂದರು.

ಕಲಬುರಗಿಯ ಆರ್.ಜಿ.ಹೆಚ್.ಯು.ಎಸ್. ಪ್ರಾಧ್ಯಾಪಕರು ಹಾಗೂ ಕೆ.ಬಿ.ಎನ್. ವಿಶ್ವವಿದ್ಯಾಲಯದ ಸಂದರ್ಶಕ ಪ್ರಾಧ್ಯಾಪಕರಾದ ನಾಡೋಜ ಡಾ. ಪಿ.ಎಸ್. ಶಂಕರ್ ಅವರು ಮಾತನಾಡಿ, ಗುಲಬರ್ಗಾ ವಿಶ್ವವಿದ್ಯಾಲಯ ಮೊದಲು ಹತ್ತು ವರ್ಷ ಪಿ.ಜಿ ಕೇಂದ್ರಗಳಾದ ಕನ್ನಡ, ಇಂಗ್ಲೀಷ ಅಧ್ಯಯನ ಕೇಂದ್ರಗಳಾಗಿ ಸ್ಥಾಪನೆಯಾದ ವಿಶ್ವವಿದ್ಯಾಲಯ ಇಂದು ಹೆಮ್ಮರವಾಗಿ ಬೆಳೆದು ಈ ಭಾಗದ ವಿದ್ಯಾರ್ಥಿಗಳ ಉನ್ನತ ಶಿಕ್ಷಣ ಕನಸನ್ನು ಸಕಾರಗೊಳಿಸುವುದರ ಜತೆಗೆ ಇಲ್ಲಿಯ ವಿದ್ಯಾಭ್ಯಾಸ ಮಾಡಿದ ಬಹಳಷ್ಟು ವಿದ್ಯಾರ್ಥಿಗಳು ಹೆಚ್ಚಿನ ಸಾಧನೆಯನ್ನು ಮಾಡಿದ್ದಾರೆ ಗುಲಬರ್ಗಾ ವಿಶ್ವವಿದ್ಯಾಲಯ ಕ್ಯಾಂಪಸ್ ಹಚ್ಚು ಹಸಿರಾಗಿರಲು ಕಾರಣೀಕರ್ತರಾದ ಸಸ್ಯಶಾಸ್ತ್ರದ ಉಪನ್ಯಾಸಕರಾದ ಕ್ಯಾಂಪಸ್ ಉದ್ಯಾನ ವನಕ್ಕೆ ನಾಗರಾಜ ಅವರ ಹೆಸರನ್ನು ಇಡಬೇಕೆಂದು ಹೇಳಿದರು.

ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಕೇರಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕುಲಸಚಿವ ಪ್ರೊ.ರಮೇಶ ಲಂಡನಕರ್ ಅತಿಥಿಗಳನ್ನು ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿದರು.

ಜೈವಿಕ ತಂತ್ರಜ್ಞಾನ ವಿಭಾಗದ ಪ್ರೊ. ಎಂ. ಬಿ. ಸುಲೋಚನಾ ಹಾಗೂ ವಿಶ್ವವಿದ್ಯಾಲಯ ಗ್ರಂಥಪಾಲಕ ಡಾ. ಸುರೇಶ್ ಜಂಗೆ ಅತಿಥಿ ಪರಿಚಯಿಸಿದರು. ಇಂಗ್ಲಿಷ್ ವಿಭಾಗದ ಪ್ರಾಧ್ಯಾಪಕ ಪ್ರೊ. ರಮೇಶ್ ರಾಥೋಡ್ ವರದಿ ಮಂಡಿಸಿದರು.

ಅಂತರಾಷ್ಟ್ರೀಯ ಮತ್ತು ವಿದೇಶದಲ್ಲಿ ಪ್ರಬಂಧ ಮಂಡಿಸಿ ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಯಿತು. ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕರಾದ ಪ್ರೊ. ಎಚ್.ಟಿ.ಪೋತೆ, ಗಣಿತ ಶಾಸ್ತ್ರ ವಿಭಾಗದ ಪ್ರೊ. ಶ್ರವಣ ಕುಮಾರ ಗಾಯಕವಾಡ್, ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕರಾದ ಡಾ. ಎನ್.ಜಿ. ಕಣ್ಣೂರ, ವಿಶ್ವವಿದ್ಯಾಲಯ ಗ್ರಂಥಪಾಲಕ ಸುರೇಶ ಜಂಗೆ, ದೈಹಿಕ ಶಿಕ್ಷಣ ಪ್ರಾಂಶುಪಾಲರಾದ ಡಾ. ಹನುಮಂತ ಜಂಗೆ ಯೋಗ ವಿಭಾಗದ ಡಾ. ಚಂದ್ರಕಾಂತ ಬಿರಾದಾರ, ಅನ್ವಯಕ ವಿದ್ಯುನ್ಮಾನ ವಿಭಾಗದ ಪ್ರೊ. ಡಾ. ಅಂಬರೀಷ ಅಂಬಲಗಿ, ಸೇರಿದಂತೆ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ನಿವೃತ್ತಿ ಹೊಂದಿದ ಬೋಧಕೇತರ ಸಿಬ್ಬಂದಿಗಳಿಗೆ ಸನ್ಮಾನಿಸಲಾಯಿತು.

ಸಂಗೀತ ವಿಭಾಗದ ಶಿಕ್ಷಕರು ಹಾಗೂ ವಿದ್ಯಾರ್ಥಿನಿಯರು ನಾಡಗೀತೆ ಹಾಗೂ ವಿಶ್ವವಿದ್ಯಾಲಯ ಗೀತೆ ಪ್ರಸ್ತುತಪಡಿಸಿದರು. ಇಂಗ್ಲಿಷ್ ವಿಭಾಗದ ಪ್ರಾಧ್ಯಾಪಕ ಪ್ರೊ. ರಮೇಶ್ ರಾಥೋಡ್, ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಪ್ರೊ. ಅಬ್ದುಲ್ ರಬ್ ಉಸ್ತಾದ್, ವಿದ್ಯಾವಿಷಯಕ ಪರಿಷತ್ ಸದಸ್ಯ ಪ್ರೊ. ಬಸವರಾಜ ಸಣ್ಣಕ್ಕಿ, ಮೌಲ್ಯಮಾಪನ ಕುಲಸಚಿವ ಡಾ. ಎನ್.ಜಿ. ಕಣ್ಣೂರ, ವಿ ಕಾರ್ಯಕ್ರಮದಲ್ಲಿ ಸಿಂಡಿಕೇಟ್ ಸದಸ್ಯರು, ವಿದ್ಯಾವಿಷಯಕ ಪರಿಷತ್ ಸದಸ್ಯರು, ಎಲ್ಲಾ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಶಿಕ್ಷಕೇತರ ಸಿಬ್ಬಂದಿಗಳು, ಅತಿಥಿ ಉಪನ್ಯಾಸಕರು, ಸ್ನಾತಕೋತ್ತರ ಹಾಗೂ ಸಂಶೋಧನಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಶಿಕ್ಷಕರ ವಿರುದ್ಧ ಅವಹೇಳನಾತ್ಮಕ ಹೇಳಿಕೆ : ಖಂಡಿಸಿ ಹಿಂಪಡೆಯುವಂತೆ ಪ್ರೊ. ಚಂದ್ರಶೇಖರ ಪಾಟೀಲ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಕ್ಷರಿ ಶಿಕ್ಷಕರ ಬಗ್ಗೆ ಮಾಡಿದ ಅವಹೇಳನಾತ್ಮಕ ಹೇಳಿಕೆಗೆ ಶಿಕ್ಷಕ ವೃಂದ ಹಾಗೂ ಬುದ್ಧಿಜೀವಿಗಳಿಂದ ತೀವ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಕೊಪ್ಪಳದ ಗವಿಸಿದ್ದೇಶ್ವರ ಮಠದ ಸನ್ನಿಧಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಶಿಕ್ಷಕರ ಜ್ಞಾನವನ್ನು ಕಡಿಮೆ ಮಾಡಿರುವ ರೀತಿಯಲ್ಲಿ ಷಡಕ್ಷರಿ ಮಾತನಾಡಿದ್ದನ್ನು ಖಂಡಿಸಿ, ಹಿರಿಯ ಶಿಕ್ಷಣ

ತಜ್ಞ ಪ್ರೊ. ಚಂದ್ರಶೇಖರ ಪಾಟೀಲ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

"ಮಗುವಿನ ಮನಸ್ಸಿನಲ್ಲಿ ಜ್ಞಾನದ ಮೊದಲ ಗೆರೆ ಎಳೆಯುವವರು ಶಿಕ್ಷಕರು. ಅಂಥ ಗುರುಗಳಿಗೇ ಅವಮಾನ ಮಾಡುವ ಹೇಳಿಕೆ ಉದ್ಧಟತನ ಹಾಗೂ ಅಜ್ಞಾನದ ಸಂಕೇತ" ಎಂದು ಅವರು ಹೇಳಿದ್ದಾರೆ. ಶಿಕ್ಷಕರ ಶ್ರಮ, ಜ್ಞಾನ ಮತ್ತು ಸೇವೆಗೆ ತಕ್ಕ ಗೌರವ ನೀಡದೇ ಮಾತನಾಡಿದುದು ಕ್ಷಮಾರ್ಹವಲ್ಲ ಎಂದು ಪಾಟೀಲ ಹೇಳಿದರು.

ಷಡಕ್ಷರಿಯವರು ಮಾತನಾಡಿದ ಮಾತುಗಳು ರಾಜ್ಯಾದ್ಯಂತ ಶಿಕ್ಷಕರ ಮನಗಳಲ್ಲಿ ನೋವುಂಟುಮಾಡಿದ್ದು, ಅವರು ತಕ್ಷಣವೇ ಹೇಳಿಕೆ ಹಿಂಪಡೆದು ಶಿಕ್ಷಕರ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದರು.

"ಗೌರವವಿಲ್ಲದ ಮಾತುಗಳು ತಿರುಗುಬಾಣಗಳಾಗಿ ಪರಿಣಮಿಸುತ್ತವೆ. ಗುರುನಿಂದನೆ

ಮಾಡಿದ ಸರ್ಕಾರಗಳೂ ಉಳಿದಿಲ್ಲ; ವ್ಯಕ್ತಿಗಳೂ ಉಳಿಯುವುದಿಲ್ಲ. ಅಗೌರವ ಶಿಕ್ಷಕರ ಮಹಿಮೆಯನ್ನು ಕಡಿಮೆ ಮಾಡಲಾರದು" ಎಂದು ಪಾಟೀಲ ಹೇಳಿದರು.

ಷಡಕ್ಷರಿ ಕ್ಷಮೆ ಕೇಳದಿದ್ದಲ್ಲಿ, ರಾಜ್ಯಾದ್ಯಂತ ಶಿಕ್ಷಕ ಸಮುದಾಯ ಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ಪ್ರೊ. ಪಾಟೀಲ ಎಚ್ಚರಿಸಿದ್ದಾರೆ.

## ಅಸ್ಕಾಹಾಳ, ಕೋಲ್ಡ್ ಸ್ಟೋರೇಜ್ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು : ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–1ರ ಶಾಖೆ–2ರಲ್ಲಿ ಎಲ್.ಟಿ ಲೈನ್‌ರೋಡ್ ವೈಡ್‌ನಿಂಗ್ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಡಿಸೆಂಬರ್ 3ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆವರೆಗೆ ಅಸ್ಕಾಹಾಳ, ಕೋಲ್ಡ್ ಸ್ಟೋರೇಜ್ ಎದುರುಗಡೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386 ಅಥವಾ 08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,2–ರಾಜ್ಯಾದ್ಯಂತ ಹಾಗೂ ಹೊರ ರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾ ಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯನಿರ್ವಹಿಸುತ್ತಿರುವ ನೊಂದಾಯಿತ ಸಂಘ ಸಂಸ್ಥೆಗಳಿಗೆ ಧನಸಹಾಯ ನೀಡಲು ಹಾಗೂ ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷಭೂಷಣಗಳ ಖರೀದಿಗೆ ಸಹಾಯಧನ ಹಾಗೂ ಚಿತ್ರಕಲೆ, ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನ ನೀಡಲು 2025–26ನೇ ಸಾಲಿನ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪಯೋಜನೆಯಡಿ ಸೇವಾಸಿಂಧು ಖಜತಭಿಟಜಿಞಣ.ಇಚಿಡಿಟಿಚಿಣಚಿಞಚಿ.ರಠತ.ಟಿ ಮುಖಾಂತರ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಡಿಸೆಂಬರ್ 30 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ 08024410547, 8792662816, 08022213530, 9986837037, 9900337738, 9448436877 ನಂಬರಗಳಿಗೆ ಹಾಗೂ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಮತ್ತು ಬಾಗಲಕೋಟೆ ಜಿಲ್ಲೆಯ ವ್ಯವಸ್ಥಾಪಕರು, ಸೇವಾಸಿಂಧು ಇವರನ್ನು ಸಂಪರ್ಕಿಸುವಂತೆ ಪ್ರಕಟಣೆ ಮೂಲಕ ತಿಳಿಸಲಾಗಿದೆ.

## ಗ್ರಾಹಕರ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕಲಬುರಗಿ ಜೆಸ್ಕಾಂ ಗ್ರಾಮೀಣ ವಿಭಾಗ–1ರ ವ್ಯಾಪ್ತಿಯಲ್ಲಿ ಬರುವ ಕಡಗಂಚಿ ಕಾರ್ಯ ಮತ್ತು ಪಾಲನೆ ಜೆಸ್ಕಾಂ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರವರ ಕಚೇರಿಯಲ್ಲಿ ಇದೇ ಡಿಸೆಂಬರ್ 3 ರಂದು ಬೆಳಿಗ್ಗೆ 11 ಗಂಟೆಗೆ ಗ್ರಾಹಕರ ಕುಂದುಕೊರತೆ ಸಂವಾದ ಸಭೆಯನ್ನು ಜರುಗಲಿದೆ. ಕಲಬುರಗಿ ಜೆಸ್ಕಾಂ ಕಾ ಮತ್ತು ಪಾ ವೃತ್ತದ ಅಧೀಕ್ಷಕ ಅಭಿಯಂತರ ಇವರ ಅಧ್ಯಕ್ಷತೆಯಲ್ಲಿ ಸಭೆ ಜರುಗಲಿದ್ದು, ಮೇಲ್ಕಂಡ ದಿನದಂದು ನಡೆಯುವ ಗ್ರಾಹಕರ ಸಂವಾದ ಸಭೆಗೆ ಎಲ್ಲಾ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

## ಡಿಸೆಂಬರ್ ೩ ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ 11 ಕೆ.ವಿ. ಜಯನಗರ ಹಾಗೂ ಹುಸೇನ್ ಗಾರ್ಡನ್ ಫೀಡರ್‌ಗಳ ವ್ಯಾಪ್ತಿಯಲ್ಲಿನ ನಿರ್ವಹಣಾ ಕಾರ್ಯಕೈಗೊಳ್ಳುವ ಪ್ರಯುಕ್ತ ಇದೇ ಡಿಸೆಂಬರ್ 3 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ.

ಜಯ ನಗರ ಫೀಡರ್: ಜಯನಗರ, ಡಾಕ್ಟರ್ಸ್ ಕಾಲೋನಿ, ಬನಶಂಕರಿ ಲೇಔಟ್, ಡೆಂಟಲ್ ಕಾಲೇಜು, ಆಂಜನೇಯ ನಗರ, ರಂಗದಾಳ್ ಕಾಂಪ್ಲೆಕ್ಸ್, ಆರ್.ಟಿ.ಓ. ವಿಠಲ್ ರಂಗದಾಳ್ ಟಿ.ಸಿ. ಮತ್ತು ಸುತ್ತಮುತ್ತಲಿನ ಪ್ರದೇಶಗಳು.

ಹುಸೇನ ಗಾರ್ಡನ್ ಫೀಡರ್: ಹುಸೇನ್ ಗಾರ್ಡನ್ ಇಕ್‌ಬಾಲ ಗಾರ್ಡನ್ ಸಾಬ್ರಿನ ಮಜಿದ ಪ್ರದೇಶ ಮತ್ತು ಸುತ್ತ–ಮುತ್ತಲಿನ ಪ್ರದೇಶಗಳು.

## ಮಾಜಿ ದೇವದಾಸಿ ಮಹಿಳೆಯರ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕಾಗಿ ಸಹಾಯಧನ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: 2024–25ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿನ ವಿಶೇಷ ಪ್ಯಾಕೇಜ್ ಯೋಜನೆಯಡಿ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕಾಗಿ ಜಿಲ್ಲೆಗೆ ಭೌತಿಕ 4 ಹಾಗೂ ಆರ್ಥಿಕ 4 ಲಕ್ಷ ರೂ.ಗಳ ಸಹಾಯಧನ ಗುರಿಯನ್ನು ನಿಗದಿಪಡಿಸಿದ್ದು, ಇದಕ್ಕಾಗಿ ಅರ್ಹ ಮಾಜಿ ದೇವದಾಸಿ ಮಹಿಳೆಯರ ಮಕ್ಕಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ (ಸಿ.ಇ.ಟಿ./ನೀಟ್) ಆಯ್ಕೆಯಾದ ಬ್ಯಾಚುಲರ್ ಆಫ್ ಆರ್ಕಿ–ಟೆಕ್ಟ/ ಇಂಜೀನಿಯರಿಂಗ್/ ಟೆಕ್ನಾಲಜಿ (ಬಿ.ಇ/ಬಿ.ಟೆಕ್) ಎಂ.ಟೆಕ್.ಎಂ.ಇ.ಬಿ.ಆರ್ಕ/ಎಂ.ಆರ್ಕ್/ಎಂ.ಬಿ.ಬಿ.ಎಸ್/ಎಂ.ಡಿ/ಎಂ.ಎಸ್ ಕೋರ್ಸಗಳಿಗೆ ಸರ್ಕಾರಿ ಕೋಟಾದಲ್ಲಿ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಫಲಾಪೇಕ್ಷಿಯ ತಾಯಿಯು ಸರ್ಕಾರದಿಂದ 1993–94 ಮತ್ತು 2007–08 ರಲ್ಲಿ ನಡೆಸಿದ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟಿರಬೇಕು. ರಾಷ್ಟ್ರೀಕೃತ ಬ್ಯಾಂಕನಲ್ಲಿ ಕಡ್ಡಾಯವಾಗಿ ಖಾತೆ ಹೊಂದಿರಬೇಕು ಹಾಗೂ ಬ್ಯಾಂಕ ಖಾತೆಯೊಂದಿಗೆ ಆಧಾರ ಸೀಡಿಂಗ್ ಆಗಿರಬೇಕು. ಅಭ್ಯರ್ಥಿಗಳನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುತ್ತದೆ.

ಅರ್ಹ ಮಾಜಿ ದೇವದಾಸಿ ಮಹಿಳೆಯರ ಮಕ್ಕಳು ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲಾತಿಗಳೊಂದಿಗೆ ಪ್ರಸ್ತಾವನೆಯನ್ನು ದ್ವಿಪ್ರತಿಯಲ್ಲಿ 2025ರ ಡಿಸೆಂಬರ್ 8ರ ಸಂಜೆ 5.30 ರೊಳಗಾಗಿ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಅರ್ಹತಾ ಮಾನದಂಡ, ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಏಡ್ಸ್ ನಿಯಂತ್ರಣಕ್ಕೆ ಜಾಗೃತಿ, ಅರಿವು ಮುಖ್ಯ: ನ್ಯಾಯಾಧೀಶ ಮರಿಯಪ್ಪ



**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ವಿಶ್ವ ಏಡ್ಸ್ ದಿನವು ಎಚ್ ಐವಿ ಮತ್ತು ಏಡ್ಸ್ ವಿರುದ್ಧ ಹೋರಾಟದಲ್ಲಿ ಜನರನ್ನು ಒಗ್ಗೂಡಿಸುವ ಜಾಗತಿಕ ಆಂದೋಲನವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ಹೇಳಿದರು.ನಗರದ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ ಇವರ ಸಹಯೋಗದಲ್ಲಿ ವಿಶ್ವ ಏಡ್ಸ್ ದಿನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಚ್ ಐವಿ ಕಳಂಕದ ವಿರುದ್ಧ ಶಕ್ತಿ ಮತ್ತು ಒಗ್ಗಟ್ಟನ್ನು ಪ್ರದರ್ಶಿಸುವ ಮತ್ತು ಕಳೆದುಕೊಂಡ ಜೀವಗಳನ್ನು ಸ್ಮರಿಸುವ ದಿನವಾಗಿವೆ. ಇದನ್ನು ತಡೆಯಲು ಜನಜಾಗೃತಿ ಮುಖ್ಯ. ಆರೋಗ್ಯ ಇಲಾಖೆ ಸಾಕಷ್ಟು ಕಾರ್ಯಕ್ರಮಗಳನ್ನು ಹಾಕಿಕೊಂಡು ಇದರ ನಿಯಂತ್ರಣಕ್ಕೆ ಕೆಲಸ ಮಾಡುತ್ತಿದೆ.ಮುಖ್ಯವಾಗಿ ಸಾರ್ವಜನಿಕರು ಇದರ ವಿರುದ್ಧ ಹೋರಾಡುವ ಅಗತ್ಯವಿದೆ ಎಂದರು.

ಜಿಲ್ಲಾಪಂಚಾಯತಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಓರಡಿಯಾ ಮಾತನಾಡಿ, ಈ ರೋಗ ಕಾಣಿಸಿಕೊಂಡಾಗಿನಿಂದ ಈ ವರ್ಷಕ್ಕೆ ಹೋಲಿಸಿದರೇ ಈಗ ಸಾಕಷ್ಟು ನಿಯಂತ್ರಣಕ್ಕೆ ಬಂದಿದೆ.ಸ್ವಯಂ ಆಗಿ ಜನರೇ ಇದರ ನಿಯಂತ್ರಣಕ್ಕೆ ಮುಂದಾಗಬೇಕೆಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಮಹೇಶ ಬಿರಾದರ್ ಮಾತನಾಡಿ ಅಕ್ವೈರ್ಡ್ ಇಮ್ಯೂನ್ ಡಿಫಿಷಿಯನ್ಸಿ ಸಿಂಡ್ರೊಮ್ ಅಥವಾ ಅಕ್ವೈರ್ಡ್ ಇಮ್ಯುನೊ ಡಿಫಿಷಿಯನ್ಸಿ ಸಿಂಡ್ರೋಮ್) ಎಐವಿ (ಹ್ಯೂಮನ್ ಇಮ್ಯುನೊ ಡಿಫಿಷಿಯನ್ಸಿ ವೈರಸ್) ಎಂಬ ವೈರಸ್ ಉಂಟಾಗುವ ಲಕ್ಷಣವಾಗಿದ್ದು ಇದು ಅನಾರೋಗ್ಯ, ನಿರೋಧಕ ವ್ಯವಸ್ಥೆ ಬದಲಾಯಿಸುತ್ತದೆ.ರೋಗ ನಿರೋಧಕ ಶಕ್ತಿ ಪೂರ್ಣ ಕಡಿಮೆಯಾಗಿ ರೋಗ ಉಲ್ಬಣಗೊಳ್ಳುತ್ತದೆ ಎಂದು ಹೇಳಿದರು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಸಂಜೀವಕುಮಾರ ರಾಯಚೂರಕರ್ ಮಾತನಾಡಿ, ಸಾಂಕ್ರಾಮಿಕ ರೋಗಗಳು ಸೊಳ್ಳೆ ಕಚ್ಚುವ ಮೂಲಕ ಅಥವಾ ಗಾಳಿಯಿಂದ ಹರಡುತ್ತವೆ. ಆದರೆ, ಏಡ್ಸ್ ರೋಗ ಹಾಗಲ್ಲ. ಬೇಕು ಎಂದು ಬಯಸಿದರೆ ಮಾತ್ರ ಬರುವ ಕಾಯಿಲೆಯಾಗಿದೆ. ರೋಗಕ್ಕೆ ಔಷಧವಿಲ್ಲ. ಹಾಗಾಗಿ, ಏಕಪತ್ನಿ, ಏಕಪತಿವ್ರತ ಆಚರಿಸುವ ಮೂಲಕ ಏಡ್ಸ್‌ನಿಂದ ದೂರವಿರಬೇಕು' ಎಂದು ಸಲಹೆ ನೀಡಿದರು.

# ಸಂಸ್ಥೆಗಳಿಗೆ ಧನಸಹಾಯ ನೀಡಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ : : ರಾಜ್ಯಾದ್ಯಂತ ಹಾಗೂ ಹೊರರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯನಿರ್ವಹಿಸುತ್ತಿರುವ ನೊಂದಾಯಿತ ಸಂಘ-ಸಂಸ್ಥೆಗಳಿಗೆ ಧನಸಹಾಯ ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷಭೂಷಣಗಳ ಖರೀದಿಗೆ ಸಹಾಯಧನ ಹಾಗೂ ಚಿತ್ರಕಲೆ, ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನ ನೀಡಲು 2025-26ನೇ ಸಾಲಿನ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪ ಯೋಜನೆಯಡಿ ಸೇವಾಸಿಂಧು Sevasindhu. karnataka.gov.in ಮುಖಾಂತರ 2025ರ ಡಿಸೆಂಬರ್ 01 ರಿಂದ 30ರ ವರೆಗೆ ಕಾಲಾವಕಾಶ ನೀಡಿ ಅರ್ಜಿ ಆಹ್ವಾನಿಸಿದೆ. ಸರ್ಕಾರದ ಆದೇಶ ಸಂಖ್ಯೆ ಕಸಂವಾ 280 ಕಸದ 2024 (ಭಾ-1) 2025ರ ಅಕ್ಟೋಬರ್ 31 ರಲ್ಲಿನ ಮಾರ್ಗಸೂಚಿಯನ್ನು ಸೇವಾಸಿಂಧು ಪೋರ್ಟಲ್ ಹಾಗೂ ಇಲಾಖೆಯ ವೆಬ್‌ಸೈಟ್ www.kannadasiri.karnataka.gov.in ನಲ್ಲಿ ಅಳವಡಿಸಲಾಗಿದೆ.



ಬಸವಕಲ್ಯಾಣ :- ತಾಲೂಕಿನ ಬೇಟಬಾಲಕುಂದಾ ಸಮಿಪ ಇರುವ ಶ್ರೀ ದತ್ತಾತ್ರೇಯ ದೇವಸ್ಥಾನ ಆವರಣದಲ್ಲಿ ಶ್ರೀ ದತ್ತಾತ್ರೇಯ ಜಯಂತ್ಯುತ್ಸವ ನಿಮಿತ್ತವಾಗಿ ನಡೆಯಲಿರುವ ಶ್ರೀ ಗುರು ಚರಿತ್ರೆ ಪಾರಾಯಣ ಕಾರ್ಯಕ್ರಮದಲ್ಲಿ ಶ್ರೀ ದತ್ತಾತ್ರೇಯ ದೇವಸ್ಥಾನದ ಪೂಜ್ಯಶ್ರೀ ಬಸವರಾಜ ಮಹಾರಾಜರು. ಅಂಬರಾಯ ಸೈದಾಪೂರೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಹನುಮಮಾಲಾ ವಿಸರ್ಜನೆ ಕಾರ್ಯಕ್ರಮಕ್ಕೆ ಆಗಮಿಸುತ್ತಿರುವ ಸ್ರಹಸ್ರಾರು ಮಾಲಾಧಾರಿಗಳು, ಭಕ್ತಾಧಿಗಳು: ಜಿಲ್ಲಾಡಳಿತದಿಂದ ವ್ಯವಸ್ಥಿತ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಶ್ರೀರಾಮ ಭಕ್ತ ಹನುಮನ (ಶ್ರೀ ಆಂಜನೇಯ ಸ್ವಾಮಿ) ಜನ್ಮಸ್ಥಳವಾದ ಅಂಜನಾದ್ರಿ ಬೆಟ್ಟದಲ್ಲಿ ಮಂಗಳವಾರ ವಿಶೇಷ ಸಂಭ್ರಮ ಮನೆ ಮಾಡಿರುವುದು ಕಂಡುಬಂದಿತು. ಸ್ರಹಸ್ರಾರು ಸಂ-ಖ್ಯೆಯ ಹನುಮ ಮಾಲಾಧಾರಿಗಳು, ಭಕ್ತಾಧಿಗಳು ತಂಡೋಪ ತಂಡವಾಗಿ ಆಗಮಿಸುತ್ತಿದ್ದು, ಹನುಮಮಾಲಾ ವಿಸರ್ಜನೆ ಕಾರ್ಯಕ್ರಮಕ್ಕೆ ಕೊಪ್ಪಳ ಜಿಲ್ಲಾಡಳಿತದಿಂದ ವ್ಯವಸ್ಥಿತ ಕ್ರಮ ಕೈಗೊಳ್ಳಲಾಗಿದೆ.



ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಆನೆಗೊಂದಿ (ಚಿಕ್ಕರಾಂಪುರ) ಗ್ರಾಮದಲ್ಲಿರುವ ಅಂಜನಾದ್ರಿ ಬೆಟ್ಟದಲ್ಲಿ ಪ್ರತಿವರ್ಷದಂತೆ ಈ ವರ್ಷ ನಡೆಯುತ್ತಿರುವ ಹನುಮಮಾಲಾ ವಿಸರ್ಜನೆ ಕಾರ್ಯಕ್ರಮಕ್ಕೆ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳು ಸೇರಿದಂತೆ ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶದ ರಾಜ್ಯದಿಂದಲೂ ಹನುಮ ಮಾಲಾಧಾರಿಗಳು, ದ್ವಿಚಕ್ರ ಮತ್ತು ನಾಲ್ಕು ಚಕ್ರ ವಾಹನಗಳು, ಬಸ್ ಹಾಗೂ ಕಾಲ್ನಡಿಗೆ ಮೂಲಕ ಅಂಜನಾದ್ರಿಗೆ ಆಗಮಿಸುತ್ತಿದ್ದಾರೆ. ಮಾಲಾಧಾರಿಗಳಿ ಮತ್ತು ಭಕ್ತರಿಗಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ವತಿಯಿಂದ ಅಂಜನಾದ್ರಿಯಲ್ಲಿ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ಮಾಡಲಾಗಿದೆ.

*ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಿಂದ ವಿಶೇಷ ಪೂಜೆ:* ಹನುಮಾಲಾ ಕಾರ್ಯಕ್ರಮದ ಪ್ರಯುಕ್ತ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಅವರು ಮಂಗಳವಾರ ಅಂಜನಾದ್ರಿಗೆ ಭೇಟಿ ನೀಡಿ, ಪಾದಗಟ್ಟೆಯಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ನಂತರ ಸಚಿವರು, ಶಾಸಕರು ಮತ್ತು ಇತರೆ ಅಧಿಕಾರಿಗಳೊಂದಿಗೆ ವೇದ ಪಾಠಶಾಲೆಗೆ ತೆರಳಿ ಅಲ್ಲಿನ ಪ್ರಸಾದ ಸ್ಥಳಕ್ಕೆ ಭೇಟಿ ನೀಡಿ, ಪ್ರಸಾದ ಸಿದ್ಧತೆಗಳನ್ನು ಪರಿಶೀಲಿಸಿ, ಭಕ್ತರಿಗೆ ಖುದ್ದಾಗಿ ಪ್ರಸಾದ ಸೇವೆ ಸಲ್ಲಿಸಿದರು. ಬಳಿಕ ಪ್ರಸಾದವನ್ನು ಸ್ವೀಕರಿಸಿದರು.

ಕಂಡುಕೊಳ್ಳುವ ದೃಷ್ಟಿಯಿಂದ ಬೈಪಾಸ್ ರಸ್ತೆಗಾಗಿ 6 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು. ಹನುಮಮಾಲಾಧಾರಿಗಳು ಮತ್ತು ಭಕ್ತಾಧಿಗಳ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ ಇಲಾಖೆಯವರು ಒಟ್ಟು 7 ವೈದ್ಯರ ತಂಡವನ್ನು ರಚಿಸಿದ್ದು, ಅವುಗಳು ದಿನದ 24 ಗಂಟೆಗಳ ಸರತಿ ಪಾಳೆಯದಲ್ಲಿ ಕಾರ್ಯ ನಿರ್ವಹಿಸುವ ವ್ಯವಸ್ಥೆಯನ್ನು ಚೆನ್ನಾಗಿ ಮಾಡಿದ್ದಾರೆ. ಬುಧವಾರ ಗಂಗಾವತಿ ನಗರದಿಂದ ಸಂಕೀರ್ತನಾ ಯಾತ್ರೆ ನಡೆಯಲಿದ್ದು, ಇದಕ್ಕೂ ಸಹ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಮಾತನಾಡಿ, ಹನುಮಮಲಾ ವಿಸರ್ಜನಾ ಕಾರ್ಯಕ್ರಮಕ್ಕೆ ಆಗಮಿಸುವಂತಹ ಮಾಲಾಧಾರಿಗಳಿಗೆ ಮತ್ತು ಭಕ್ತಾಧಿಗಳಿಗೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು,

ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ಪಾರ್ಕಿಂಗ್, ಭದ್ರತಾ ಸುವ್ಯವಸ್ಥೆ ಸೇರಿದಂತೆ ಇತರೆ ಎಲ್ಲಾ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗಿದೆ. ಇದರ ಜೊತೆಗೆ ಜನರಿಗೆ ದೇವರ

ದರ್ಶನ ಮತ್ತು ಪ್ರಸಾದ ವ್ಯವಸ್ಥೆಗೆ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ. ಪಾದಗಟ್ಟಿ ಮತ್ತು ಬೆಟ್ಟದ ಕೆಳಗೆ ಎಲ್.ಇ.ಡಿ ವಾಲ್‌ಗಳನ್ನು ಅಳವಡಿಸಲಾಗಿದೆ. ದೇವಸ್ಥಾನಕ್ಕೆ ಆಗಮಿಸುವ ಭಕ್ತಾಧಿಗಳ ಸಂಖ್ಯೆಯನ್ನು ಅರಿಯಲು ಹೆಡ್ ಕೌಂಟಿಂಗ್ ಮಷಿನ್ ಅಳವಡಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ, ಅಂಜನಾದ್ರಿ ಹನುಮಮಾಲಾ ಕಾರ್ಯಕ್ರಮ ನಿಮಿತ್ತ ಗಂಗಾವತಿ ಟೌನ್ ವ್ಯಾಪ್ತಿಯಲ್ಲಿ ಟ್ರಾಫಿಕ್ ಕಂಟ್ರೋಲ್ ಹಾಗೂ ಅಂಜನಾದ್ರಿಯಲ್ಲಿ ಜನರಿಗೆ ಯಾವುದೇ ರೀತಿಯ ಸಮಸ್ಯೆಗಳಾಗದಂತೆ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ನಿಯೋಜಿಸುವ ಮೂಲಕ ಜಿಲ್ಲಾ ಪೊಲೀಸ್ ಇಲಾಖೆಯು ಕ್ರಮ ಕೈಗೊಂಡಿದೆ ಎಂದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಸಹಾಯಕ ಆಯುಕ್ತರಾದ ಕ್ಯಾ. ಮಹೇಶ್ ಮಾಲಗಿತ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಟಿ. ಲಿಂಗರಾಜು, ಪ್ರವಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ನಾಗರಾಜ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ, ಗಂಗಾವತಿ ತಹಶಿಲ್ದಾರ ಯು. ನಾಗರಾಜ, ಕಾರಟಗಿ ತಹಶೀಲ್ದಾರ ವಿಶ್ವನಾಥ ಮುರಡಿ ಸೇರಿದಂತೆ ಹಲವು ಜನಪ್ರತಿನಿಧಿಗಳು ಹಾಗೂ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

*ಅಂಜನಾದ್ರಿಯಲ್ಲಿ ಹನುಮ ಮಾಲಾಧಾರಿಗಳು:*ಅಂಜನಾದ್ರಿಯ ಬೆಟ್ಟದ ಮೇಲಿನ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ ಮತ್ತು ಪಾದಗಟ್ಟೆಯಲ್ಲಿ ವಿವಿಧ ಬಣ್ಣ ಬಣ್ಣಗಳ ಹೂಗಳಿಂದ ಶ್ರೀ

ಆಂಜನೇಯಸ್ವಾಮಿ ಮೂರ್ತಿಯನ್ನು ವಿಶೇಷರೀತಿಯಲ್ಲಿ ಅಲಂಕರಿಸಲಾಗಿದೆ. ಪೂಜೆ ಪುನಸ್ಕಾರಗಳು ಅದ್ದೂ-ರಿಯಾಗಿ ನಡೆಯುತ್ತಿವೆ. ಬೆಟ್ಟದ ಮೇಲೆ ಹಾಗೂ ಬೆಟ್ಟ ಹತ್ತುವ ಮಾರ್ಗದಲ್ಲಿಯೂ ಸಹ ಹೂಗಳು ಮತ್ತು ವಿದ್ಯುತ್ ಬಣ್ಣ ಬಣ್ಣದ ದೀಪಗಳಿಂದ ಅಲಂಕಾರ ಮಾಡಲಾಗಿದೆ. ಅಂಜನಾದ್ರಿಯತ್ತ ಹನುಮ ಮಾಲಾಧಾರಿಗಳು ತಂಡೊಪ ತಂಡವಾಗಿ ಆಗಮಿಸುತ್ತಿರುವುದು ರಸ್ತೆಗಳಲ್ಲಿ ಕಂಡುಬರುತ್ತಿದೆ. ಮಾರ್ಗ ಮಧ್ಯದ ಗ್ರಾಮಗಳಲ್ಲಿ ಹನುಮ ಮಾಲಾಧಾರಿಗಳಿಗೆ ಪ್ರಸಾದ ಹಾಗೂ ತಂಗಲು ವ್ಯವಸ್ಥೆ ಮಾಡಲಾಗಿದೆ. ಭಕ್ತರು ಜೈ

ಶ್ರೀರಾಮ್, ಜೈ ಹನುಮಾನ, ಜೈ ಭಜರಂಗಬಲಿ ಎಂಬ ವಿವಿಧ ಘೋಷಣೆಗಳನ್ನು ಕೂಗುತ್ತಾ ಅಂಜನಾದ್ರಿಯತ್ತ ಸಾಗುತ್ತಿದ್ದಾರೆ.

# ಸಾಲಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಬಳ್ಳಾರಿ:ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಹಿಳಾ ಅಭಿವೃದ್ಧಿ ನಿಗಮ ವತಿಯಿಂದ 2025-26ನೇ ಸಾಲಿಗೆ ವಿವಿಧ ಯೋಜನೆಗಳಡಿ ಸಾಲ-ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಡಿ.15 ಕೊನೆಯ ದಿನವಾಗಿದೆ.*ಯೋಜನೆಗಳು:ಉದ್ಯೋಗಿನಿ ಯೋಜನೆ:

ವಯೋಮಿತಿ 18 ರಿಂದ 55 ವರ್ಷಗಳೊಳಗಿರುವ ಮಹಿಳೆಯರು ಆದಾಯ ಉತ್ಪನ್ನಕರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸ್ವಯಂ ಉದ್ಯೋಗಿಗಳಾಗಲು ಬ್ಯಾಂಕ್‌ಗಳ ಮೂಲಕ ಸಾಲ ಮತ್ತು ನಿಗಮದ ಮೂಲಕ ಸಹಾಯಧನ ನೀಡಲಾಗುತ್ತಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಆದಾಯ ಮಿತಿ ರೂ.02 ಲಕ್ಷ ಹೊಂದಿರಬೇಕು. ಘಟಕ ವೆಚ್ಚ ಕನಿಷ್ಠ ರೂ.01 ಲಕ್ಷದಿಂದ ಗರಿಷ್ಟ ರೂ.03 ಲಕ್ಷ, ಶೇ.50 ರಷ್ಟು ಸಹಾಯಧನ ನೀಡಲಾಗುವುದು.ಸಾಮಾನ್ಯವರ್ಗದವರಿಗೆ ಆದಾಯ ಮಿತಿ ರೂ.1.50 ಲಕ್ಷ ಹೊಂದಿರಬೇಕು. ಘಟಕ ವೆಚ್ಚ ಗರಿಷ್ಟ ರೂ.03 ಲಕ್ಷ, ಶೇ.30 ರಷ್ಟು ಸಹಾಯಧನ ನೀಡಲಾಗುವುದು.ಚೇತನ ಯೋಜನೆ:ದಮನಿತ ಮಹಿಳೆಯರಿಗೆ ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ರೂ.30 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತದೆ (ವಯೋಮಿತಿ 18 ವರ್ಷ ಮೇಲ್ಪಟ್ಟು).ಧನಶ್ರೀ ಯೋಜನೆ:ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ರೂ.30 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತದೆ (ವಯೋಮಿತಿ 18 ವರ್ಷ ರಿಂದ 60 ವರ್ಷ).

*ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ:*

ಲಿಂಗತ್ವ ಅಲ್ಪಸಂಖ್ಯಾತ ಫಲಾನುಭವಿಗಳಿಗೆ ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ರೂ.30 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತದೆ.

*ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ:

1993-94 ಮತ್ತು 2007-08ರ ಸಮೀಕ್ಷೆಯಲ್ಲಿ ಗುರುತಿಸಿರುವ ಮಾಜಿ ದೇವದಾಸಿ ಮಹಿಳೆಯರಿಗೆ ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ರೂ.30 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತದೆ.

ಸೂಚನೆ:ಅರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮಾಡಿಸಿರಬೇಕು. ಧನಶ್ರೀ ಯೋಜನೆ ಹಾಗೂ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಿಗೆ ಅರ್ಜಿದಾರರು ಅರ್ಜಿಯನ್ನು ಆನ್‌ಲೈನ್ ಮತ್ತು ಆಫ್‌ಲೈನ್‌ನಲ್ಲಿ ಸಲ್ಲಿಸಬಹುದು.

# ವ್ಯಕ್ತಿ ಕಾಣೆ ಪತ್ತೆಗೆ ಮನವಿ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಯಾದಗಿರಿ ಜಿಲ್ಲೆಯ ಯಾದಗಿರಿ ನಗರ ಹಿರೇಅಗಸಿ ಆಂಜನೇಯ ಹಾವಿನೋರ್, ಈತನು ಮಾನಸಿಕವಾಗಿ ಅಸ್ವಸ್ಥನಾಗಿದ್ದು, 2025ರ ನವೆಂಬರ್ 27 ರಂದು ಬೆಳಿಗ್ಗೆ 6 ಗಂಟೆಗೆ ಸುಮಾರಿಗೆ ನಿದ್ದೆಯಿಂದ ಎದ್ದು, ಹೊರಗಡೆ ಹೋದವನು ಮರಳಿ ಮನೆಗೆ ಬರದೆ ಹಿನ್ನೆಲೆ ಯಾದಗಿರಿ ನಗರ ಪೊಲೀಸ್ ಠಾಣೆಯಲ್ಲಿ ಕಾಣೆ-ಯಾದ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿದೆ ಎಂದು ಯಾದಗಿರಿ ನಗರ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕರು ಅವರು ತಿಳಿಸಿದ್ದಾರೆ.



ಅಂದು ಬೆಳಿಗ್ಗೆ 6 ಗಂ-ಟೆಗೆ ಸುಮಾರಿಗೆ ನಿದ್ದೆಯಿಂದ ಎದ್ದು, ಹೊರಗಡೆ ಹೋದವನು ಸಂಜೆ ಅವನು ಮನೆಗೆ ಬರಲಿಲ್ಲ ಗಾಬರಿಯಾಗಿ ಅವನು ಇರುವ ಸ್ಥಳಗಳಲ್ಲಿ ನಾನು ಮಗ ಹಾಗೂ ನನ್ನ ಸೊಸೆಯಾದ ಎಲ್ಲರೂ ಕೂಡಿ ಅಲ್ಲಿಲ್ಲಿ ಹುಡುಕಾಡಿದ್ದು, ಎಲ್ಲಿಯೂ ಕಂಡುಬಂದಿರುವುದಿಲ್ಲ. ನಂತರ ನಮ್ಮ ಸಂಬಂಧಿಕರ ಊರುಗಳಲ್ಲಿ ಫೋನ್ ಮುಖಾಂತರ ಸಂಪರ್ಕಿಸಿ ನನ್ನ ಮಗನ ಬಗ್ಗೆ ವಿಚಾರಿಸಲಾಗಿದೆ, ಅವನ ಇರುವಿಕೆಯ ಬಗ್ಗೆ ಯಾವುದೇ ಮಾಹಿತಿ ಸಿಕ್ಕಿರುವುದಿಲ್ಲ.

ಕಾಣೆಯಾದ ವ್ಯಕ್ತಿಯ ಚಹರಾ ಪಟ್ಟಿ ವಿವರ : 30 ವರ್ಷ ಪುರುಷನು ಇದ್ದು, ಕೂದಲು ಕಪ್ಪು, ಮೈಬಣ್ಣ ಸಾದಾಕಪ್ಪು ಬಣ್ಣ ಎತ್ತರ 5 ಫೀಟ್ 6 ಇಂಚು ಎತ್ತರ ಇದ್ದು, ದುಂಡನೆ ಮುಖ, ಧರಿಸಿದ ಉಡುಪು ಕಂದು ಬಣ್ಣದ ಶರ್ಟ್, ಕಪ್ಪುಬಣ್ಣದ ಪ್ಯಾಂಟ್, ಕೆಂಪು ಬಣ್ಣದ ಟಾವೆಲ್ (ತಲೆಗೆ ಸುತ್ತಿದ್ದು), ಕನ್ನಡ ಮಾತನಾಡುತ್ತಾನೆ, ಈ ದೂರಿನ ಆಧಾರದ ಮೇಲಿಂದ ಯಾದಗಿರಿ ನಗರ ಪೊಲೀಸ್ ಠಾಣೆಯಲ್ಲಿ ಪುರುಷ ಕಾಣೆಯಾದ ಬಗ್ಗೆ ಪ್ರಕರಣವನ್ನು ದಾಖಲಿಸಿಕೊಂಡು ತನಿಖೆಯನ್ನು ಕೈಗೊಂಡಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಲಿತರ ಹಕ್ಕು ಕಬಳಿಸಲು ಯತ್ನಿಸಿದ ರವಿಂದ್ರ ಸ್ವಾಮಿ ವಿರೂದ್ಧ ಕಠಿಣ ಕ್ರಮ ಕೈಗೊಳ್ಳಿ: ಮಾರೂತಿ ಬೌದ್ದೆ

**ಮಲ್ಲಮ್ಮ ನುಡಿ ವಾರ್ತೆ ಬೀದರ್:**

2016ರಿಂದ ಬೇಡ ಜಂಗಮ ಸುಳ್ಳು ಜಾತಿ ಪ್ರಮಾಣ ಪತ್ರ ಪಡೆಯುವ ಮೂಲಕ ದಲಿತರು ಅದರಲ್ಲೂ ದುರ್ಬಲರ ಹಕ್ಕು ಕಸಿದುಕೊಳ್ಳಲು ಯತ್ನಿಸಿದ ಏಕತಾ ಫೌಂಡೇಷನ್ ಅಧ್ಯಕ್ಷ ರವಿಂಸ್ರ ಸ್ವಾಮಿ ಅವರ ವಿರೂದ್ಧ ಅಟ್ರಾಸಿಟಿ ಕೇಸ್ ದಾಖಲಿಸಿ ಅವರನ್ನು ಗಡಿಪಾರು ಮಾಡುವಂತೆ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ಮಾರೂತಿ ಬೌದ್ಧೆ ಆಗ್ರಹಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು,

ಕಳೆದ ಏಳೆಂಟು ವರ್ಷಗಳಿಂದ ರವೀಂದ್ರ ಸ್ವಾಮಿ ಅವರ ಜಂಗಮ ಎಸ್‌ಸಿ ಪ್ರಮಾಣಪತ್ರ ವಿವಾದಿತ ಚರ್ಚೆಯಲ್ಲಿದೆ. ರವೀಂದ್ರ ಸ್ವಾಮಿ 2016ರಲ್ಲಿ ಎಸ್ಸಿ ಬೇಡ ಜಂಗಮ ಪ್ರಮಾಣಪತ್ರಕ್ಕೆ ಅರ್ಜಿ ಸಲ್ಲಿಸಿದ್ದರು. ಸತತ ಪ್ರಯತ್ನದ ಬಳಿಕ 2019ರಲ್ಲಿ ಇವರಿಗೆ ಆಗಿನ ಬೀದರ್ ತಹಸೀಲ್ದಾರರು ಎಸ್ಸಿ ಪ್ರಮಾಣಪತ್ರ ನೀಡಿದ್ದರು. ಆಗಿನಿಂದ ಇದು ವಿವಾದ ಸೃಷ್ಟಿಸಿತ್ತು. .ಸಾಕಷ್ಟು ದೂರು, ಸಮಗ್ರ ಪರಿಶೀಲನೆ ಬಳಿಕ ಹಿಂದಿನ ಡಿ.ಸಿ ಗೋವಿಂದರೆಡ್ಡಿ ಅವರು, ತೆರೆದ ಕೋರ್ಟ್ ನಲ್ಲಿ ತಹಸೀಲ್ದಾರರು ಇವರಿಗೆ ನೀಡಿದ್ದ ಎಸ್‌ಸಿ ಪ್ರಮಾಣಪತ್ರ ರದ್ದುಪಡಿಸಿದ್ದರು

ಇವರ 1-7ನೇ ಶಾಲಾ ದಾಖಲೆಗಳಲ್ಲಿ ಲಿಂಗಾಯತ, 8-10ರ ವರೆಗೆ ಭಾರತೀಯ ಹಿಂದು ಉಲ್ಲೇಖವಿದೆ. ಇವರ ಕಂದಾಯ ನಿರೀಕ್ಷಕರು, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರ ಪಂಚನಾಮೆ ಪ್ರಕಾರ ಇವರು ವೀರಶೈವ ಲಿಂಗಾಯತ ಜಾತಿಗೆ ಸೇರಿದ್ದಾರೆ ಎಂದು ಖಚಿತವಾಗಿದೆ ಎಂದು ಡಿ.ಸಿ ಆದೇಶದಲ್ಲಿ ತಿಳಿಸಲಾಗಿತ್ತು. ಇವರು 2006ರಲ್ಲಿ ಬೀದರ್ ನಗರಸಭೆ ಚುನಾವಣೆ ನಾಮಪತ್ರದಲ್ಲಿ ಹಿಂದು ಲಿಂಗಾಯತ ಎಂದು ತಿಳಿಸಿದ್ದರು. ಇವೆಲ್ಲ ಕಾರಣಗಳಿಂದ ಇವರಿಗೆ 2019ರ ಆಗಸ್ಟ್ 27ರಂದು ಬೀದರ್ ತಹಸೀಲ್ದಾರರು ನೀಡಿದ್ದ ಎಸ್ ಸಿ ಬೇಡ ಜಂಗಮ ಪ್ರಮಾಣಪತ್ರ(ಆರ್‌ಡಿ 38137154334) ಡಿ.ಸಿ ರದ್ದುಗೊಳಿಸಿದ್ದರು. ಇದಾದ ಬಳಿಕ ಈ ಪ್ರಕರಣ ಕುರಿತು ಕಲಬುರ್ಗಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಕಲ್ಬುರ್ಗಿ ಉಚ್ಚ ನ್ಯಾಯಾಲಯದ ಏಕ ಸದಸ್ಯ ಪೀಠವು ಇದನ್ನು ಮರು ಪರಿಶಿಲಿಸಿ ವರದಿ ನೀಡುವಂತೆ ಬೀದರ ಜಿಲ್ಲಾಧಿಕಾರಿಗಳಿಗೆ ಆದೇಶಿಸಿತ್ತು. ಇದನ್ನು ಪ್ರಶ್ನಿಸಿ ಬೀದರ್ ಜಿಲ್ಲಾಧಿಕಾರಿಗಳು, ರಾಜ್ಯ ಸರ್ಕಾರದ ಸಮಾಜ ಕಲ್ಯಾಣ ಇಲಾಖೆ ಹಾಗೂ ನಾನು ಕಲಬುರಗಿ ಉಚ್ಛ ನ್ಯಾಯಾಲಯದ ದ್ವಿಸದಸ್ಯ ಪೀಠದಲ್ಲಿ ಪ್ರತ್ಯೇಕ ಮೇಲ್ಮನವಿ ಸಲ್ಲಿಸಿದೇವು. ವಿಭಾಗಿಯ ಪೀಠವು ಈ ಪ್ರಕರಣ ಕೈಗೆತ್ತಿಕೊಂಡು ಲಿಂಗಾಯತರಲ್ಲಿನ ಜಂಗಮರೇ ಬೇರೆ, ಬುಡ್ಗ ಅಥವಾ ಬೇಡ ಜಂಗಮರೇ ಬೇರೆ' ಎಂದು ಸ್ಪಷ್ಟಪಡಿಸಿತ್ತು. ವೀರಶೈವ ಲಿಂಗಾಯತರಾದ ರವೀಂದ್ರ ಸ್ವಾಮಿ, ಬೇಡ ಜಂಗಮ ಎಸ್‌ಸಿ ಎಂದು ಪ್ರತಿಪಾದಿಸುವ ಪ್ರಶ್ನೆಯೇ ಬರದು ಎಂದು ಹೇಳಿತ್ತು. ಇದಕ್ಕೆ ಸಾಕಷ್ಟು ನಿದರ್ಶನವೂ ನೀಡಿತ್ತು. ಕಳೆದ ಜೂನ್ 30ರಂದು ಹೈಕೋರ್ಟ್ ವಿಭಾಗೀಯ ಪೀಠ ವೀರಶೈವ ಲಿಂಗಾಯತ ಜಂಗಮರು ಬೇಡ ಅಥವಾ ಬುಡ್ಗ ಜಂಗಮರಲ್ಲ. ಇವರು ಎಸ್‌ಸಿ ಸರ್ಟಿಫಿಕೇಟ್ ಪಡೆಯಲು ಅನರ್ಹರು ಎಂದು ಆದೇಶಿಸಿತ್ತು. ಈ ತೀರ್ಪನ್ನು ಪ್ರಶ್ನಿಸಿ ರವೀಂದ್ರ ಅವರು ಸುಪ್ರೀಂಕೋರ್ಟ್‌ನಲ್ಲಿ ಸಲ್ಲಿಸಿದ್ದ ವಿಶೇಷ ಮೇಲ್ಮನವಿ ವಜಾಗೊಂಡಿದೆ. ಸುಪ್ರೀಂಕೋರ್ಟ್ ನ್ಯಾಯಮೂರ್ತಿ ರಾಜೇಶ್ ಬಿಂದಾಲ್ ಮತ್ತು ಮನಮೋಹನ್ ಅವರಿದ್ದ ಪೀಠ ಹೈಕೋರ್ಟ್ ಆದೇಶದಲ್ಲಿ ಮಧ್ಯಪ್ರವೇಶ ಮಾಡುವುದಕ್ಕೆ ನಮಗೆ ಯಾವುದೇ ಕಾರಣಗಳಿಲ್ಲ. ಈ ವಿಶೇಷ ಮೇಲ್ಮನವಿ ವಜಾಗೊಳಿಸಲಾಗುತ್ತಿದೆ ಎಂದು ತಿಳಿಸಿ ಹೈಕೋರ್ಟ್ ನೀಡಿದ್ದ ತೀರ್ಪಿಗೆ ಸುಪ್ರೀಂ ಸಹ ಮುದ್ರೆಯೊತ್ತಿದೆ. ಇದರಿಂದ ಭವಿಷ್ಯದಲ್ಲಿ ದಲಿತರ ಹಕ್ಕು ಕಬಳಿಸುವ ಅವರ ಪ್ರಯತ್ನ ಸಂಪೂರ್ಣವಾಗಿ ಮುಗಿದು ಹೋದ ಅಧ್ಯಾಯ. ಹಾಗಾಗಿ ನಮಗೆ ಇದರಿಂದ ದೊಡ್ಡ ನ್ಯಾಯ ಸಿಕ್ಕಿದೆ. ಈಗಾಗಲೆ ಇವರು ಪಡೆದಿರುವ ಸುಳ್ಳು ಜಾತಿ ಪ್ರಮಾಣ ಪತ್ರ ರದ್ದುಗೊಳಿಸಿ ಜಿಲ್ಲಾಧಿಕಾರಿಗಳು ಆದೇಶಿಸಬೇಕು. ಇವರ ವಿರೂದ್ಧ ಕಾನೂನು ಕ್ರಮ ಜರುಗಿಸಿ ಭವಿಷ್ಯದಲ್ಲಿ ಇಂತಹ ಸಂವಿಧಾನ ವಿರೋಧಿ ಕಾರ್ಯ-ಕ್ಕೆ ಯಾರೂ ಸಹ ಕೈ ಹಾಕದಂತೆ ನೋಡಿಕೊಳ್ಳಬೇಕು ಜೊತೆಗೆ 2019ರಲ್ಲಿ ಇವರಿಗೆ ಸುಳ್ಳು ಜಾತಿ ಪ್ರಮಾಣ ನೀಡಲು ಸಹಕರಿಸಿದ ಗ್ರಾಮ ಲೆಕ್ಕಿಗರು, ಕಂದಾಯ ನಿರಿಕ್ಷಕರು ಹಾಗೂ ತಹಸಿಲ್ದಾರರನ್ನು ಸೇವೆಯಿಂದ ವಜಾ ಮಾಡಬೇಕೆಂದು ಬೌದ್ಧೆ ಒತ್ತಾಯಿಸಿದರು.




ಖ್ಯಾತ ವಿದ್ವಾಂಸರು ಹಾಗೂ ನಿವೃತ್ತ ಪ್ರಾಂಶುಪಾಲರಾದ ಪ್ರೊ.ವಿಠಲದಾಸ ಪ್ಯಾಗೆ ಮಾತನಾಡಿ, ಜಿಲ್ಲೆಯಲ್ಲಿ ರವೀಂದ್ರ ಸ್ವಾಮಿ ಹಾಗೂ ಭಾಲ್ಕಿಯಲ್ಲಿ ಪುರಸಭೆ ಸದಸ್ಯರೊಬ್ಬರು ಎಸ್ಸಿ ಬೇಡ ಜಂಗಮ ಜಾತಿ ಪ್ರಮಾಣಪತ್ರ ಪಡೆದಿದ್ದಾರೆ. ತಹಸೀಲ್ದಾರರು ನ್ಯಾಯಾಲಯ ಆದೇಶಕ್ಕೆ ತಪ್ಪಾಗಿ ಅರ್ಥೈಸಿಕೊಂಡಿದ್ದರಿಂದ ರವಿಂದ್ರ ಸ್ವಾಮಿ ಅವರಿಗೆ ಎಸ್‌ಸಿ ಬೇಡ ಜಂಗಮ ಪ್ರಮಾಣಪತ್ರ ನೀಡಿರುತ್ತಾರೆ ಹೊರತು, ಅರ್ಹತೆ ಆಧಾರದ ಮೇಲೆ ಇಲ್ಲ ಎಂಬುದು ಕಂಡು ಬಂದಿದೆ. ಉದಾಹರಣೆಗಳಿವೆ. ಬೀದರ್ ಜಿಲ್ಲೆಯಲ್ಲಿ ಇಂತಹ ಅನೇಕ ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದ ಉದಾಹರಣೆಗಳಿವೆ ಹಾಗೆ ಇತ್ತೀಚೆಗೆ ಹಲವಾರು ಪರಿಶಿಷ್ಟ ಪಂಗಡದವರು ಸುಳ್ಳು ಜಾತಿ ಪ್ರಮಾಣ ಪತ್ರ ಪಡೆಯಲು ಹವಣಿಸಿದ್ದಾರೆ. ಅಂಥವರ ವಿರೂದ್ಧವೂ ಸಹ ಕ್ರಮ ವಹಿಸಿ ದಲಿತರ ಹಕ್ಕು ರಕ್ಷಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕಿದೆ ಎಂದರು.

ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯವಾದಿ ವಿಲ್ಸನ್ ಕರ್ನಾಟಕ ಉಚ್ಛ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯದಲ್ಲಾದ ಪ್ರಕರಣದ ವಿಚಾರಣೆ ಹಾಗೂ ತೀರ್ಪಿನ ಬಗ್ಗೆ ಸವಿಸ್ತಾರವಾಗಿ ವಿವರಿಸಿದರು.

ದಲಿತ ಮುಖಂಡರಾದ ಡಾ.ಕಾಶಿನಾಥ ಚಲವಾ, ಶಿವರಾಜ ತಡಪಳ್ಳಿ, ರಾಜಕುಮಾರ ವಾಘಮಾರೆ, ಅರುಣ ಪಟೇಲ, ರಾಹುಲ ಕಾಂಬಳೆ ಹಾಗೂ ಇತರರಿದ್ದರು.

# ಬೃಹತ್ ಉಚಿತ ಆರೋಗ್ಯ ತಪಾಸಣಾ ಚಿಕಿತ್ಸಾ ಶಿಬಿರ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಶ್ರೀ ಶಿರಡಿ ಸಾಯಿಬಾಬ ಸೇವಾ ಚಾರಿಟೇಬಲ್ ಟ್ರಸ್ಟ್ ಹಾಗೂ ಪೂರ್ಣಿಮಾ ಆಯುರ್ವೇದ ಮಾಹಾವಿದ್ಯಾಲಯ,ಆಸ್ಪತ್ರೆಮತ್ತು ಸಂಶೋಧನಾ ಕೇಂದ್ರ,ರಾಯಚೂರು

ಇವರ ಸಹಯೋಗದೊಂದಿಗೆ ದಿ.,4ರಂದು ಬೃಹತ್ ಉಚಿತ ಆರೋಗ್ಯತಪಾಸಣಾ ಮತ್ತು ಚಿಕಿತ್ಸಾ ಶಿಬಿರ ಓಂ ಸಾಯಿ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆಎಂದುಪೂರ್ಣಿಮಾ ಆಯುರ್ವೇದಮಾಹಾವಿದ್ಯಾಲಯ ಪ್ರಾಚಾರ್ಯರಾದಡಾ.ಚಂದ್ರಶೇಖರ ರೆಡ್ಡಿ ಹೇಳಿದರು.

ನಗರದ ಓಂ ಸಾಯಿ ಮಂದಿರದ ಆವರಣದಲ್ಲಿಕರೆದಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ,ಅಂದು ಬೆಳಗ್ಗೆ 10.00 ರಿಂದ ಮದ್ಯಾಹ್ನ 3:00 ರ ವರೆಗೆ ಶ್ರೀ ಸಾಯಿ ಕಿರಣ ಆದೋನಿ ಗುರೂಜಿ ಸಂಸ್ಥಾಪಕ ಹಾಗೂ ಧರ್ಮಾಧಿಕಾರಿಗಳು ಓಂ ಸಾಯಿ ಧ್ಯಾನಮಂದಿರರಾಯಚೂರುಅವರ ನೇತೃತ್ವದಲ್ಲಿ ಶಿಬಿರ ನಡರಯಲಿದೆ.

ಶಿಬಿರದಲ್ಲಿ ಉಚಿತತಪಾಸಣೆಮತ್ತು ಚಿಕಿತ್ಸೆನೀಡುವ ರೋಗಗಳು:ಸಂಧಿ ನೋವು, ಕತ್ತು ನೋವು, ಬೆನ್ನು ನೋವು,ನರಸಂಭಂದಿತರೋಗಗಳು ಇತ್ಯಾದಿ.ಆಮ್ಲ ಪಿತ್ತ,ಕಾಮಲೆ,ಫ್ಯಾಟಿ ಲಿವರ್, ಅಸ್ತಮಾ, ಸೈನಸೈಟಿಸ್, ಟಾನ್ಸಿಲೈಟಿಸ್,ಮೈಗ್ರೇನ್,ತಲೆನೋವು, ಅಲರ್ಜಿ,ರಕ್ತಹೀನತೆ,ಪಾರ್ಶ್ವವಾಯು, ಪಾರ್ಕಿನ್ ಸನ್ಸ್ ಕಾಯಿಲೆ, ಶೀತ, ಕೆಮ್ಮು, ಇತ್ಯಾದಿ,ಎಲ್ಲಾ ತರಹದ ಚರ್ಮ ರೋಗಗಳು,ಬೊಜ್ಜುತನಕ್ಕೆ ವಿಶೇಷಚಿಕಿತ್ಸೆನೀಡಲಾಗುವುದೆಂದರು.

ಗುದಗತರೋಗಗಳಾದ:ಮೂಲವ್ಯಾದಿ (ಪೈಲ್ಸ್), ಭಗಂದರ(ಫಿಸ್ಟುಲಾ), ರಕ್ತಸ್ರಾವ ಇತ್ಯಾದಿ, ರಕ್ತನಾಳ ಉಬ್ಬುವಿಕೆ. ಆಣಿ(ಕಾರ್ನ್),ನರವಲಿ

ಕಿಡ್ನಿ ರೋಗಗಳು ಹಾಗೂ ಕಿಡ್ನಿ ಸ್ಟೋನ್ ಪ್ರೋಸ್ಟೇಟ್ ಕಾಯಿಲೆ.ಕಿವಿ, ಮೂಗು, ಗಂಟಲು, ರೋಗಗಳು

ನೇತ್ರರೋಗಗಳು: ಥೈರಾಯಿಡ್, ರಕ್ತದ ಒತ್ತಡ (ಬಿ.ಪಿ.), ಮಧುಮೇಹ (ಸಕ್ಕರೆ ಕಾಯಿಲೆ)ಪಿ.ಸಿ.ಓ.ಡಿ, ಗರ್ಭಾಶಯದ ಗಡ್ಡೆಗಳು/ ಅಂಡಾಶಯದ ಸಮಸ್ಯೆಗಳು,ಶ್ವೇತ ಪ್ರದರ, ಗರ್ಭಾಶಯ ಬೀಳುವಿಕೆ, ಮಾಸಿಕ ಋತು ಸಂಬಂಧಿ ತೊಂದರೆಗಳು, ಗರ್ಭಿಣಿ ಮತ್ತು ಹೆರಿಗೆ ನಂತರದ ಆರೈಕೆ.

ಚಿಕ್ಕ ಮಕ್ಕಳ ರೋಗಗಳು ಬಂಜೆತನಕ್ಕೆ ವಿಶೇಷ ಚಿಕಿತ್ಸೆ ನೀಡಲಾವುದೆಂದರು.

ಈ ಶಿಬಿರದಲ್ಲಿ ಪ್ರಯೋಜನ ಪಡೆಯುವರೋಗಿಗಳಿಗೆರಿಯಾಯಿತಿ ದರದಲ್ಲಿ ಚಿಕಿತ್ಸೆಪಡೆಯುವ ಆರೋಗ್ಯ ಕಾರ್ಡ್ ವಿತರಿಸಲಾಗುವುದೆಂದರು.

ಓಂ ಸಾಯಿ ಧ್ಯಾನ ಮಂದಿರದ ಸಂಸ್ಥಾಪಕಹಾಗೂಧರ್ಮಾಧಿಕಾರಿಗಳಾದ ಶ್ರೀ ಸಾಯಿ ಕಿರಣ ಅದೋನಿ ಗುರೂಜಿ ಮಾತನಾಡಿ,ಶ್ರೀ ಶಿರಡಿ ಸಾಯಿಬಾಬ ಸೇವಾ ಚಾರಿಟೇಬಲ್ ಟ್ರಸ್ಟ್ ಹಾಗೂ ಪೂರ್ಣಿಮಾ ಆಯುರ್ವೇದ ಮಾಹಾವಿದ್ಯಾಲಯ, ಆಸ್ಪತ್ರೆಮತ್ತು ಸಂಶೋಧನಾ ಕೇಂದ್ರ,ರಾಯಚೂರು ಸಂಯುಕ್ತಶ್ರಯದಲ್ಲಿ ಬೃಹತ್ ಉಚಿತ ಆರೋಗ್ಯತಪಾಸಣಾ ಮತ್ತು ಚಿಕಿತ್ಸಾ ಶಿಬಿರಹಮ್ಮಿಕೊಂಡಿದ್ದು,ಭಕ್ತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು.ಮುಂದುನ ದಿನಗಳಲ್ಲಿ ಪ್ರತಿ ಗುರುವಾರದಂದು ಓಂ ಸಾಯಿ ಧ್ಯಾನ ಮಂದಿರದಲ್ಲಿ ಉಚಿತ ರೋಗ ತಪಾಸಣೆ ನಡೆಯಲಿದೆ ಎಂದರು.ಈ ಸಂದರ್ಭದಲ್ಲಿ ಡಾ.ಬಸವರಾಜ,ಡಾ.ಶ್ರತಿಕಾ,ಡಾ.ರೋಜಾ,ಡಾ. ರಾಘವೇಂದ್ರ ಉಪಸ್ಥಿತರಿದ್ದರು.

# ಮುಖ್ಯರಸ್ತೆಯ ಧೂಳು ಮುಕ್ತ ಮಾಡುವಂತೆ ಕರವೆಯಿಂದ ಅರೆ ಬೆತ್ತಲೆ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ಸಿರವಾರ

ರಾಜ್ಯಹೆದ್ದಾರಿಯಲ್ಲಿರುವ ಮುಖ್ಯರಸ್ತೆಯು ವಿಫರೀತ ದೂಳಿನಿಂದ ಕೂಡಿದೆ, ದೂಳು ಮುಕ್ತ ಮಾಡುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಕುಮಾರ್ ಶೆಟ್ಟಿ ಬಣ ಸಿರವಾರ ತಾಲೂಕು ಘಟಕದ ವತಿಯಿಂದ ಬಸವೇಶ್ವರ ವೃತ್ತದಿಂದ ಮುಖ್ಯರಸ್ತೆಯ ಮಾರ್ಗವಾಗಿ ತಹಸೀಲ್ದಾರ ಕಛೇರಿಯ ವರೆಗೂ ಅರೆ ಬೆತ್ತಲೆ ಮೆರವಣಿಗೆ ಮಾಡುವ ಮೂಲಕ ಒತ್ತಾಯಿಸಿದರು. ಪಟ್ಟಣದ ಮುಖ್ಯರಸ್ತೆಯ ಮೇಲಿರುವ ಧೂಳನ್ನು ತೆರವು ಮಾಡಬೇಕೆಂದು ಅದರ ಉದ್ದೇಶ ಸಿರವಾರ ಪಟ್ಟಣ ಒಂದು ಸುಂದರವಾದ ಊರಗಿದ್ದು ಮುಖ್ಯರಸ್ತೆಯಲ್ಲಿರುವ ಅಂಗಡಿಗಳ ಮಾಲೀಕರಿಗೆ ರಸ್ತೆ ಬದಿಯ ಅಂಗಳಿಗಳ ಮಾಲಿಕರಿಗೆ ವ್ಯಾಪಾರಸ್ಥರುಗೆ ಹಾಗೂ ಜನರಿಗೆ ಧೂಳಿನಿಂದ ಆಗುತ್ತಿರುವ ಆರೋಗ್ಯದ ಸಮಸ್ಯೆ ಇದನ್ನು ಮನಗೊಂಡು ಸಂಭಂದಪಟ್ಟ 'ಇಲಾಖೆಗೆ ತಿಳಿಸಿ ಇದನ್ನು ಮುಕ್ತ ಮಾಡಬೇಕು ಈಗಾಗಲೆ ಬಹಳಷ್ಟು ಜನರಿಗೆ ಕಣ್ಣಿನ ಸಮಸ್ಯೆ ಮತ್ತು ಕ್ಯಾನ್ಸರ್ ಸಮಸ್ಯೆ ಉಂಟಗಿದ್ದು ಬಡ ಜನರು ಬಹಳಷ್ಟು ಕಷ್ಟ ಪಡುತಿದ್ದು. ಕೂಡಲೆ ದೂಳು ಮುಕ್ತ ಕ್ರಮಕೈಗೊಳದಿದ್ದರೆ

ಒಂದು ವೇಳೆ ಇದನ್ನು ಬಗೆ ಗಮನ ಹರಿಸದಿದ್ದರೆ ಮುಂದಿನ ದಿನಗಳಲ್ಲಿ ಸಿರವಾರ ಬಂದ್ ಹೋರಾಟ ಹಮ್ಮಿಕೊಳ್ಳಲಾಗುವದೊಂದು ತಿಳಿಸಲಾಗುತ್ತಿದೆ

ಈ ಸಂದರ್ಭ ತಾಲೂಕ ಅದ್ಯಕ್ಷ ಕೆ ರಾಘವೇಂದ್ರ ಖಾಜನಗೌಡ, ವೆಂಕಟೇಶ್ ಶಂಕ್ರಿ ದೇವತಗಲ್ ಕಾರ್ಯಾಧ್ಯಕ್ಷರು ಸಿರವಾರ, ಗುರುದೇವ, ಕೃಷ್ಣ ಮೂರ್ತಿ ಶೇಟ್ಟಿ, ರವಿಕುಮಾರ ಮಲ್ಲಟ,ಮುದುಕಪ್ಪ, ಆಂಜನೇಯ್ಯ, ನರಸಪ್ಪ ಟೈಲರ್.ನಾಗಬಾಬು ಇದರು

# ಕೇಂದ್ರ ಬಸ್ ನಿಲ್ದಾಣಕ್ಕೆ ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ್ ಭೇಟಿ; ಪರಿಶೀಲನೆ



ರಾಯಚೂರು:ಕೆಕೆಆರ್‌ಟಿಸಿ ಅಧ್ಯಕ್ಷರಾದ ಅರುಣಕುಮಾರ ಎಂ.ವೈ.ಪಾಟೀಲ್ ಅವರು ಇತ್ತೀಚೆಗೆ ಲಿಂಗಸೂಗೂರ ನಗರಕ್ಕೆ ಭೇಟಿ ನೀಡಿದರು.

ಲಿಂಗಸುಗೂರು ಬಸ್ ನಿಲ್ದಾಣ ಹಾಗೂ ಲಿಂಗಸುಗೂರು ಬಸ್ ಘಟಕದ ಸ್ಥಳಗಳಿಗೆ ಭೇಟಿ ಮಾಡಿ ಅಲ್ಲಿನ ಸಿಬ್ಬಂದಿಯ ಕಾರ್ಯವೈಖರಿಗಳನ್ನು ಪರಿಶೀಲಿಸಿದರು.

ಇದೆ ವೇಳೆ, ಕೆಕೆಆರ್ ಟಿಸಿಯ ಸಿಬ್ಬಂದಿಯ ಸಮಸ್ಯೆಗಳನ್ನು ಆಲಿಸಿದರು. ಅವರು ಉತ್ತಮವಾಗಿ ಮಾಡುತ್ತಿರುವ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಇದೆ ವೇಳೆ, ಬಸ್ ನಿಲ್ದಾಣದಲ್ಲಿ ವಿದ್ಯಾರ್ಥಿಗಳ ಮತ್ತು ಹಿರಿಯ ನಾಗರಿಕರ ಸಾರಿಗೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಸಹ ಆಲಿಸಿದರು.

ಸುಗಮ ಸಾರಿಗೆ ಸೇವೆಯ ನಡುವೆ ಕೆಲ ಸಮಸ್ಯೆಗಳು ಕಾಣಿಸಿಕೊಂಡಿದ್ದು ಸಮಸ್ಯೆಗಳನ್ನು ಸರಿಪಡಿಸಿಕೊಳ್ಳಲು ಸಂಬಂಧಪಟ್ಟ ಹಾಗೂ ಘಟಕ ವ್ಯವಸ್ಥಾಪಕರಿಗೆ ಸೂಚನೆ ನೀಡಿದರು.ನಮ್ಮ ಕಡೆಯಿಂದ ಬೇಕಾದ ಸಹಾಯ, ಸೌಲಭ್ಯ, ಸಹಕಾರ ಪಡೆಯಲು ಮುಕ್ತವಾಗಿ ತಿಳಿಸಿದರೆ ಖಂಡಿತವಾಗಿ ಸಹಾಯ ಮಾಡುವುದಲ್ಲದೆ ಸುಗಮ ಸಾರಿಗೆ ಜನರ ಊರಿಗೆ ಎನ್ನುವ ಧೇಯವಾಕ್ಯವನ್ನು ಸಫಲಗೊಳಿಸುತ್ತೇವೆ ಎಂದು ಅಧ್ಯಕ್ಷರು ಇದೆ ವೇಳೆ ತಿಳಿಸಿದರು.

ಜನಸ್ನೇಹಿ ಸಾರಿಗೆ ವ್ಯವಸ್ಥೆ ರೂಪಿಸುವುದೇ ನಮ್ಮ ಧ್ಯೇಯೋದ್ದೇಶವಾಗಿದೆ. ಈ ದಿಶೆಯಲ್ಲಿ ಜನರ ಊರಿಗೆ ಸುಗಮ ಸಾರಿಗೆ ಆಶಯ ಸಕಾರಕ್ಕೆ ಶ್ರಮಿಸುತ್ತಿದ್ದೇವೆ.

ಕರ್ನಾಟಕ ರಾಜ್ಯ ಸಾರಿಗೆ ವ್ಯವಸ್ಥೆ ದೇಶದಲ್ಲೇ ಮಾದರಿಯಾಗಿದೆ. ಅದರಲ್ಲೂ ನಮ್ಮ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಜನಸ್ನೇಹಿ ಸಾರಿಗೆ ವ್ಯವಸ್ಥೆ ಹೊಂದಿದ್ದಕ್ಕಾಗಿ ಹತ್ತು ಹಲವು ರಾಷ್ಟ್ರೀಯ, ಅಂತಾರಾಷ್ಟ್ರೀಯ ಪ್ರಶಸ್ತಿ, ಪುರಸ್ಕಾರಗಳು ಪಡೆದಿದೆ.

ಇದರ ಹೊರತಾಗಿಯೂ ನಾವು ಇನ್ನೂ ಉತ್ತಮ ಜನಸ್ನೇಹಿ ಸಾರಿಗೆ ವ್ಯವಸ್ಥೆ ಹೊಂದುವುದಕ್ಕಾಗಿ ಬೇಕಾದ ಸುಧಾರಣೆಗಳನ್ನು ತರಲು ನಮ್ಮ ಸರ್ಕಾರ ಸಿದ್ಧವಿದೆ.

ನಮ್ಮ ಜನಪರ ಆಲೋಚನೆಗಳನ್ನು ಜಾರಿ ತರುವ ನಿಟ್ಟಿನಲ್ಲಿ ರಾಯಚೂರು ಜಿಲ್ಲೆಯ ಪ್ರವಾಸ ಹಮ್ಮಿಕೊಂಡಿದ್ದಾಗಿ ಇದೆ ವೇಳೆ ಅಧ್ಯಕ್ಷರು ಸುದ್ದಿಗಾರರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಲಿಂಗಸುಗೂರು ಘಟಕದ ವ್ಯವಸ್ಥಾಪಕರಾದ ಪ್ರಕಾಶ ದೊಡ್ಡಮನಿ, ಸಂಸ್ಥೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು, ಎಪಿಎಂಸಿ ಅಧ್ಯಕ್ಷರು ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು..

# ಬಿ.ಎಸ್.ಸುರೇಶ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬಿ.ಎಸ್. ಸುರೇಶ ಅವರು ಡಿಸೆಂಬರ್ 3ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಬೆಳಿಗ್ಗೆ 10 ಗಂಟೆಗೆ ಬಳ್ಳಾರಿ ಜಿಲ್ಲೆಯ ತೋರಣಗಲ್ಲು ಜಿಂದಾಲ್ ಏರ್‌ಸ್ಟ್ರಿಪ್ ನಿಂದ ಹೆಲಿಕ್ಯಾಪ್ಟರ್ ಮುಖಾಂತರ ಹೊರಟು, ಬೆಳಿಗ್ಗೆ 11 ಗಂಟೆಗೆ ರಾಯಚೂರಿಗೆ ಆಗಮಿಸಲಿದ್ದಾರೆ.

ಬೆಳಿಗ್ಗೆ 11 ರಿಂದ, ಯರಮರಸ್, ಮಾವಿನಕೆರೆ ಸೇರಿದಂತೆ ವಿವಿಧೆಡೆ ಭೇಟಿ ಕಾರ್ಯಕ್ರಮದ ಬಳಿಕ, ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 3 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಡಾ.ದೇವರಾಜ ಬಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ನಾಗಲಕ್ಷ್ಮೀ ಚೌಧರಿ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರು ಡಿಸೆಂಬರ್ 3ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.ಡಿಸೆಂಬರ್ 3ರ ಬೆಳಿಗ್ಗೆ 7 ಗಂಟೆಗೆ ಕಲಬುರಗಿ ನಗರದಿಂದ ನಿರ್ಗಮಿಸಿ ಬೆಳಿಗ್ಗೆ 11ಕ್ಕೆ ರಾಯಚೂರು ಜಿಲ್ಲೆಯ ಲಿಂಗಸುಗೂರು ನಗರಕ್ಕೆ ಆಗಮಿಸಿ ಖಾಸಗಿ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ಮಧ್ಯಾಹ್ನ1.30ಕ್ಕೆ ಲಿಂಗಸುಗೂರದಿಂದ ನಿರ್ಗಮಿಸಿ, ಮಧ್ಯಾಹ್ನ 2 ಗಂಟೆಗೆ ಹಟ್ಟಿ ಚಿನ್ನದ ಗಣಿ ಪ್ರದೇಶಕ್ಕೆ ಆಗಮಿಸಿ ಮಹಿಳಾ ಕಾರ್ಮಿಕರೊಂದಿಗೆ ಸಂವಾದ ನಡೆಸುವರು. ಮಧ್ಯಾಹ್ನ 3.30ಕ್ಕೆ ಹಟ್ಟಿಯಿಂದ ನಿರ್ಗಮಿಸಿ ಲಿಂಗಸೂರಗೆ ತೆರಳಿ ಸಂಜೆ 4 ಗಂಟೆಗೆ ಲಿಂಗಸಗೂರು ಪೊಲೀಸ್ ಠಾಣೆಗೆ ಭೇಟಿ ನೀಡುವರು. ಬಳಿಕ ಲಿಂಗಸುಗೂರಿನ ಸಮಾಜ ಕಲ್ಯಾಣ ಇಲಾಖೆಯ ಪದವಿ ಮಟ್ಟದ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡುವರು. ಲಿಂಗಸೂಗೂರನಿಂದ ಸಂಜೆ 6.30ಕ್ಕೆ ನಿರ್ಗಮಿಸಿ ರಾಯಚೂರು ನಗರಕ್ಕೆ ಆಗಮಿಸಿ, ರಾತ್ರಿ 11 ಗಂಟೆಗೆ ರಾಯಚೂರಿನಿಂದ ರೈಲು ಮಾರ್ಗವಾಗಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ: ಸರಳ ವಿವಾಹ ಸಹಾಯಧನಕ್ಕೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 50 ಸಾವಿರ ರೂ. ಸಹಾಯಧನಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರದ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 222 ರಲ್ಲಿ ಘೋಷಿಸಿರುವಂತೆ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹಗಳ ವೆಚ್ಚಗಳಿಗಾಗಿ ನೀಡುವ ಕಾರ್ಯಕ್ರಮವನ್ನು ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾದೆ.

ಷರತ್ತುಗಳು: ಅರ್ಜಿ ಸಲ್ಲಿಸುವ ವಧು-ವರರು ಕರ್ನಾಟಕ ರಾಜ್ಯಕ್ಕೆ ಸೇರಿದ ಅಲ್ಪಸಂಖ್ಯಾತರ ಸಮುದಾಯಗಳಿಗೆ (ಮುಸ್ಲಿಂ, ಕ್ರಿಶ್ಚಿಯನ್,ಜೈನ್,ಬೌದ್ಧ, ಸಿಖ್ ಮತ್ತು ಪಾರ್ಸಿ) ಸೇರಿದವರಾಗಿರಬೇಕು. ಸಾಮೂಹಿಕ ವಿವಾಹಗಳಲ್ಲಿ ಕನಿಷ್ಠ 05 ಜೋಡಿಗಳು ಭಾಗವಹಿಸಿರತಕ್ಕದ್ದು. ಜಿಲ್ಲಾ ನೋಂದಣಿ/ವಕ್ಫ್ ಬೋರ್ಡ್ ಕಚೇರಿಗಳಲ್ಲಿ ಸಾಮೂಹಿಕ ವಿವಾಹಗಳ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟಗಳು, ದೇವಸ್ಥಾನದ ಟ್ರಸ್ಟಗಳು, ಸಂಘಗಳು, ಸೊಸೈಟಿಗಳು ವಕ್ಫ ಸಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾದಲ್ಲಿ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಈ ಸೌಲಭ್ಯ ಪಡೆಯುವ ವಧುವಿಗೆ ಕನಿಷ್ಠ 18 ವರ್ಷದಿಂದ ಗರಿಷ್ಠ 42 ವರ್ಷಗಳು, ವರನಿಗೆ ಕನಿಷ್ಠ 21 ವರ್ಷದಿಂದ ಗರಿಷ್ಠ 45 ವರ್ಷ ವಯಸ್ಸು ಆಗಿರತಕ್ಕದ್ದು. ಈ ಯೋಜನೆಯಡಿ ಸಹಾಯಧನ ಪಡೆಯಲು ವಧು-ವರರ ವಾರ್ಷಿಕ ಆದಾಯವು 2.50 ಲಕ್ಷರೂ.ಗಳು ಮತ್ತು ಒಟ್ಟಾರೆಯಾಗಿ 5 ಲಕ್ಷ ರೂ. ಗಳನ್ನು ಮೀರತಕ್ಕದ್ದಲ್ಲ. ಈ ಸೌಲಭ್ಯವನ್ನು ಜೀವನದಲ್ಲಿ ಒಮ್ಮೆ ಮಾತ್ರ ಪಡೆಯಬಹುದಾಗಿದೆ. ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಈ ಯೋಜನೆಯ ಸೌಲಭ್ಯ ನೀಡತಕ್ಕದ್ದು.

ವರನಿಗೆ ಈಗಾಗಲೇ ಜೀವಂತ ಪತ್ನಿಯಿದ್ದಲ್ಲಿ ಅಥವಾ ವಧುವಿಗೆ ಜೀವಂತ ಪತಿ ಇದ್ದಲ್ಲಿ ಈ ಯೋಜನೆಯು ಅನ್ವಯಿಸುವುದಿಲ್ಲ. ಸದರಿ ಸಾಮೂಹಿಕ ವಿವಾಹವು ಇತರೆ ಜಿಲ್ಲೆಗಳಲ್ಲಿ ನಡೆದಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರು ದೃಡೀಕರಿಸುವುದು. ವಧು-ವರರು ಕನಿಷ್ಠ ಏಳು ದಿನ ಮುಂಚಿತವಾಗಿ ವಾಸ್ತವ್ಯವಿರುವ ಜಿಲ್ಲೆಯಲ್ಲಿಯೇ ಅರ್ಜಿ ಸಲ್ಲಿಸತಕ್ಕದ್ದು.

ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನ್‌ಲೈನ್‌ನಲ್ಲಿ ನಡೆಸಲಾಗುತ್ತಿದ್ದು, ಅದಾಗ್ಯೂ ಕೆಲವು ಸ್ವಯಂ ಸೇವೆ ಸಂಸ್ಥೆಗಳು ಮತ್ತು ಅರ್ಜಿದಾರರು ತಾಂತ್ರಿಕ ಕಾರಣಗಳಿಂದ ಆನ್‌ಲೈನ್ ಅರ್ಜಿ ಸಲ್ಲಿಸಲು ತೊಂದರೆ ಉಂಟಾದಲ್ಲಿ ಅಂತಹ ಸಂದರ್ಭದಲ್ಲಿ ಮಾತ್ರ ಅನುಮೋದಿತ ಆಫ್‌ಲೈನ್ ಅರ್ಜಿ ನಮೂನೆಗಳನ್ನು ಜಿಲ್ಲಾ ಅಥವಾ ತಾಲ್ಲೂಕು ಕಚೇರಿಯಿಂದ ಪಡೆದು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಕೇಂದ್ರಗಳಾದ ರಾಯಚೂರು:9731028420, ದೇವದುರ್ಗ: 9148233616, ಲಿಂಗಸುಗೂರು: 9886447863, ಮಾನವಿ: 887334758 ಹಾಗೂ ಸಿಂಧನೂರು: 8217621732ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚರಂಡಿಯೊಳಗೆ ಮೊಸಳೆ ಮರಿ ಪತ್ತೆ, ಆತಂಕಕೊಳಗಾದ ನಿವಾಸಿಗಳು



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ನಗರದ ಜಲಾಲ್‌ನಗರದ ಚರಂಡಿ ಯೊಳಗೆ ಶನಿವಾರ ರಾತ್ರಿ ಮೊಸಳೆ ಮರಿಯೊಂದು ಪತ್ತೆಯಾಗಿದೆ. ಜಲಾಲ್‌ನಗರದ ಕೌನ್ಸಿಲರ್ ತಿಮ್ಮಾರೆಡ್ಡಿ ಅವರ ಮನೆಯ ಹತ್ತಿರದ ಚರಂಡಿಯಲ್ಲಿ ಮೊಸಳೆ ಪತ್ತೆಯಾಗಿತ್ತು. ವಿಷಯ ತಿಳಿದು ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕಾಗಮಿಸಿ ಮೊಸಳೆಯನ್ನು ಸೆರೆಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ಮೊಸಳೆ ಮರಿ ಮಳೆ ನೀರಿನಲ್ಲಿ ಹರಿದು ಬಂದು ಚರಂಡಿ ಸೇರಿರಬಹುದು ಎಂದು ಅಂದಾಜಿಸಲಾಗಿದೆ. ಅರಣ್ಯ ಇಲಾಖೆಯ ಮೇಲಧಿಕಾರಿಗಳ ಆದೇಶದಂತೆ ಮೊಸಳೆ ಮರಿಯನ್ನ ಕೃಷ್ಣಾನದಿಯಲ್ಲಿ ಸುರಕ್ಷಿತವಾಗಿ ಬಿಡಲಾಗಿದೆ.

# ದಿ 3,4ರಂದು ಸೌರ ಬೆಂಬಲಿತ ಜೀವನೋಪಾಯ ಪರಿಹಾರಗಳ ಪ್ರದರ್ಶನ




ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ವಿಕಾಸಿನಿ ವಿಕಾಸಪಥದಲ್ಲಿ ಮಹಿಳೆಯರ ಹೆಜ್ಜೆ ಸೌರ ಬೆಂಬಲಿತ ಜೀವನೋಪಾಯ ಪರಿಹಾರಗಳ ಪ್ರದರ್ಶನ ದಿ: 3 ಮತ್ತು 4ರಂದು ಬೆಳಿಗ್ಗೆ 09:30 ರಿಂದ ಸಾಯಂಕಾಲ 5:00 ಗಂಟೆಯವರೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಅವರಣದಲ್ಲಿ ಆಯೋಜಿಸಲಾಗಿದೆ ಎಂದು ಸೆಲ್ಕೋ ಫೌಂಡೇಷನ್ ವ್ಯವಸ್ಥಾಪಕರಾದ ಫಣೀಂದ್ರ ಸಿಂಗ್ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ,ಸಂಜೀವಿನಿ-ಕರ್ನಾಟಕ ಗ್ರಾಮೀಣ ಜೀವನೋಪಾಯ ಅಭಿಯಾನ, ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ, ರಾಯಚೂರು ಮಹಾನಗರ ಪಾಲಿಕೆ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಸೆಲ್ಕೋ ಫೌಂಡೇಷನ್, ಬೆಂಗಳೂರು ಇವರುಗಳ ಸಹಯೋಗದೊಂದಿಗೆ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮ ಪರಿಚಯ ಸಂಪನ್ಮೂಲ ವ್ಯಕ್ತಿ ಶ್ರೀಮತಿ ಕವಿತ ಕೆ ಸೆಲ್ಕೋ ಫೌಂಡೇಷನ್ ಮಾಡಲಿದ್ದಾರೆ.ಸ್ವಾಗತವನ್ನು ಫಣೀಂದ್ರ ಸಿಂಗ್ ಹಿರಿಯ ಯೋಜನಾ ವ್ಯವಸಾಪಕರು. ಸೆಲ್ಕೋ ಫೌಂಡೇಷನ್ ಮಾಡಲಿದ್ದಾರೆ.ಕಾರ್ಯಕ್ರಮದ ಉದ್ಘಾಟನೆಯನ್ನು ರಾಯಚೂರು ಕೃವಿವಿ

ಕುಲಪತಿಗಳಾದ ಡಾ.ಎಂ. ಹನುಮಂತಪ್ಪ ನೆರವೇರಿಸಲಿದ್ದಾರೆಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ನಿತೀಶ್ ಕೆ. ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ, ಅಧಿಕಾರಿಈಶ್ವರ್ ಕಾಂದು , ಮಹಾನಗರ ಪಾಲಿಕೆ ಆಯುಕ್ತರಾದಜುಬಿನ್ ಮೊಹಪಾತ್ರ ಆಗಮಿಸಲಿದ್ದಾರೆ.

ವಿಶೇಷ ಅತಿಥಿಗಳಾಗಿ ಶ್ರೀಮತಿ ಕಲಾವತಿ ಉಪ ವ್ಯವಸ್ಥಾಪಕ ನಿರ್ದೇಶಕರು. ನಬಾರ್ಡ್, ರಾಯಚೂರುಪಾಂಡಪ್ಪ ಲಂಬಾಣಿ : ಪ್ರಧಾನ ಬ್ಯಾಂಕ್ ವ್ಯವಸ್ಥಾಪಕರು, ರಾಯಚೂರು ಆಗಮಿಸಲಿದ್ದಾರೆ.ವೇದಿಕೆ ಚರ್ಚೆ ನಡೆಯಲಿದ್ದು, ಶ್ರೀಮತಿ ಸ್ಫೂರ್ತಿ ಸೆಲ್ಕೋ ಫೌಂಡೇಷನ್

ಫಣೀಂದ್ರ ಸಿಂಗ್ ಸೆಲ್ಕೋ ಫೌಂಡೇಷನ್ ಭಾಗವಹಿಸಲಿದ್ದಾರೆ.ಅಧ್ಯಕ್ಷತೆಯನ್ನು ಶ್ರೀಮತಿ ಸುರಭಿ ರಾಜಗೋಪಾಲ್ ಹಿರಿಯ ಪ್ರಧಾನ ವ್ಯವಸ್ಥಾಪಕರು, ಸೆಲ್ಕೋ ಫೌಂಡೇಷನ್ ವಹಿಸಲಿದ್ದಾರೆಂದರು.

# ಅಲ್ಪಸಂಖ್ಯಾತರ:ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಬಿ.ಎಡ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ನೀಡಲು ಸೇವಾಸಿಂಧು ಪೋರ್ಟಲನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ಶಿಕ್ಷಕರ ಶಿಕ್ಷಣ ಮಂಡಳಿಯಿಂದ ಮಾನ್ಯತೆ ಪಡೆದಿರುವ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿರುವ (ಮುಸ್ಲಿಂ ಕ್ರಿಶ್ಚಿಯನ್,ಜೈನ್ ಸಿಖ್,ಬೌದ್ದ್ ಹಾಗೂ ಪಾರ್ಸಿ) ವಿದ್ಯಾರ್ಥಿಗಳಿಗೆ 25000 ರೂ.ಗಳ ವಿಶೇಷ ಪ್ರೋತ್ಸಾಹಧನ ಸಂಬಂಧಪಟ್ಟ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಡಿಬಿಟಿ ಮುಖಾಂತರ ಜಮಾ ಮಾಡಲಾಗುವುದು.

ಈ ಬಿ.ಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ಅರ್ಹ ವಿದ್ಯಾರ್ಥಿಗಳಿಗೆ ಸೇವಾ ಸಿಂಧು ಪೋರ್ಟಲ್‌ನ ಆನ್‌ಲೈನ್‌ನಲ್ಲಿ https://sevasindhu.karnataka.gov.in ನಲ್ಲಿ ಡಿಸೆಂಬರ್ 31ರೊಳಗಾಗಿ ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ಸಂಖ್ಯೆ:- 8277799990 ಹಾಗೂ ಇಲಾಖಾ ವೆಬ್ ಸೈಟ್ ವಿಳಾಸ: https://dom.karnataka.gov.in ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಕೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂಚಾಯತಿಗೆ ಗ್ರಾಮ ಗಾಂಧಿ ಗ್ರಾಮ ಪುರಸ್ಕಾರ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ತಾಲೂಕಿನ ಚಿಕ್ಕಸುಗೂರು ಗ್ರಾಮ ಪಂಚಾಯಿತಿಯ ಸಾಧನೆಗೆ ಮತ್ತೊಂದು ಗರಿ ಲಭಿಸಿದೆ.

ಚಿಕ್ಕಸುಗೂರು ಗ್ರಾಮ ಪಂಚಾಯತಿಗೆ ಗಾಂಧಿ ಗ್ರಾಮ ಪುರಸ್ಕಾರ ನೀಡಿ ರಾಜ್ಯ ಸರ್ಕಾರ ಗೌರವಿಸಿದೆ. ಬೆಂಗಳೂರಿನಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಗಾಂಧಿ ಅವರು ಚಿಕ್ಕಸುಗೂರು ಗ್ರಾಮ ಪಂಚಾಯತಿಗೆ ಗಾಂಧಿ ಗ್ರಾಮ ಪುರಸ್ಕಾರ ನೀಡಿದ್ದಾರೆ. ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀನಿವಾಸ ಏಗನೂರು, ಪಿಡಿಓ ಸರೋಜ ಅವರು ಗಾಂಧಿ ಗ್ರಾಮ ಪ್ರಶಸ್ತಿ ಸ್ವೀಕರಿಸಿದರು. ಪಂಚತಂತ್ರ 2.0 ಗೆ ಪಂಚಾಯತ್ ರಾಜ್ ಇಲಾಖೆ ಸಚಿವರು ಚಾಲನೆ ನೀಡಿದರು.

# ವಿಕಲಚೇತನರ ಕುಂದುಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು :

ವಿಕಲಚೇತನರ ಕುಂದು ಕೊರತೆಗಳನ್ನು ಚರ್ಚಿಸಲು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಡಿಸೆಂಬರ್ 6ರ ಬೆಳಿಗ್ಗೆ 11ಗಂಟೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ನಿಗದಿಪಡಿಸಲಾಗಿದ್ದು, ಜಿಲ್ಲೆಯ ವಿಕಲಚೇತನರು ತಮ್ಮ ಅಹವಾಲುಗಳನ್ನು ಸಭೆಯಲ್ಲಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಗರಾಭಿವೃದ್ಧಿ ಇಲಾಖೆ ಪ್ರಗತಿ ಪರಿಶೀಲನೆ ಸಭೆ ನಡೆಸಿದ ಸಚಿವ ಬಿ.ಎಸ್.ಸುರೇಶ್

# ಸರ್ಕಾರಿ ಜಾಗ ಒತ್ತುವರಿ ತೆರವಿಗೆ ತಿಂಗಳ ಗಡುವು




**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ನಗರದ ಸರ್ಕಾರಿ ಜಾಗ, ರಸ್ತೆ ಮತ್ತು ಉದ್ಯಾನಗಳ ಒತ್ತುವರಿಯನ್ನು ಒಂದು ತಿಂಗಳೊಳಗಾಗಿ ತೆರವುಗೊಳಿಸಬೇಕು ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ಅವರು ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರ ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಬಳ್ಳಾರಿ ಜಿಲ್ಲೆಯ ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ ಏರ್ಪಡಿಸಿದ್ದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದಲ್ಲಿ ಪಾರ್ಕ್, ರಸ್ತೆ ಮತ್ತು ಸರ್ಕಾರಿ ಜಾಗದ ಒತ್ತುವರಿಯಾಗಿ ಸಾರ್ವಜನಿಕರ ದೈನಂದಿನ ಚಟುವಟಿಕೆಗಳಿಗೆ ತೊಂದರೆ ಆಗುತ್ತಿರುವ ಬಗ್ಗೆ ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಕೂಡಲೇ, ಅಂತಹ ಒತ್ತುವರಿ ಪ್ರಕರಣಗಳನ್ನು ಪತ್ತೆ ಮಾಡಿ ಒಂದು ತಿಂಗಳೊಳಗಾಗಿ ಆ ಒತ್ತುವರಿಯನ್ನು ತೆರವುಗೊಳಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಸರ್ಕಾರಿ ಜಾಗವನ್ನು ಭೂಗಳ್ಳರಿಂದ ರಕ್ಷಿಸಿಕೊಳ್ಳಲು ಅನುವಾಗುವ ರೀತಿಯಲ್ಲಿ ನ್ಯಾಯಾಲಯಗಳಲ್ಲಿ ವಾದ ಮಂಡಿಸಲು ಸಮರ್ಥರಿರುವ ವಕೀಲರನ್ನು ನೇಮಕ ಮಾಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

**ಅಧಿಕಾರಿಗಳ ಹೊಣೆ:**

ನಗರದೆಲ್ಲೆಡೆ ನಾಗರಿಕರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಾಗಬೇಕು. ಕಲುಷಿತ ನೀರು ಪೂರೈಕೆ ಪ್ರಕರಣಗಳು ಕಂಡುಬಂದರೆ ಅದಕ್ಕೆ ಸಂಬಂಧಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಹೊಣೆಗಾರರನ್ನಾಗಿ ಮಾಡಿ ಅವರ ವಿರುದ್ಧ ಕ್ರಮ ಜರುಗಿಸಲಾಗುತ್ತದೆ ಎಂದು ಸಚಿವ ಬಿ.ಎಸ್.ಸುರೇಶ್ ಅವರು ಎಚ್ಚರಿಕೆ ನೀಡಿದರು.

**ತೆರಿಗೆ ಸಂಗ್ರಹ ಹೆಚ್ಚಳಕ್ಕೆ ಸೂಚನೆ:**

ತೆರಿಗೆ ಸಂಗ್ರಹ ಹೆಚ್ಚಳಕ್ಕೆ ಗಮನಹರಿಸಬೇಕು. ಕಟ್ಟುನಿಟ್ಟಾಗಿ ವಾಣಿಜ್ಯ ಕಟ್ಟಡಗಳಿಂದ ತೆರಿಗೆ ವಸೂಲು ಮಾಡಬೇಕು. ಅತಿ ಹೆಚ್ಚು ತೆರಿಗೆ ಬಾಕಿ ಉಳಿಸಿಕೊಂಡಿರುವ ಕಟ್ಟಡ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ವಾಣಿಜ್ಯ ಮತ್ತು ಕಟ್ಟಡ ಪರವಾನಗಿಯನ್ನು ತ್ವರಿತವಾಗಿ ವಿತರಣೆ ಮಾಡಬೇಕು ಎಂದು ಸಚಿವರು ಸೂಚಿಸಿದರು.

ಅಮೃತ್ 2.0 ಯೋಜನೆಯಡಿ ಉದ್ಯಾನಗಳು ಮತ್ತು ಕೆರೆಗಳನ್ನು ಪುನಶ್ಚೇತನಕ್ಕೆ ಕ್ರಮ ಕೈಗೊಳ್ಳಬೇಕು. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಇ-ಖಾತಾ ಅಭಿಯಾನವನ್ನು ಇನ್ನಷ್ಟು ಸಮರ್ಪಕವಾಗಿ ಜನರಿಗೆ ತಲುಪಿಸಬೇಕು ಎಂದು ಅಧಿಕಾರಿಗಳಿಗೆ ಕರೆ ನೀಡಿದರು.

ಪ್ರತಿಯೊಬ್ಬ ಅಧಿಕಾರಿಯೂ ವಾರ್ಡ್ ಗಳಿಗೆ ಭೇಟಿ ನೀಡಿ ನಾಗರಿಕರ ಸಮಸ್ಯೆಗಳನ್ನು ಆಲಿಸಿ, ಪರಿಹಾರ ಕಂಡುಕೊಳ್ಳಬೇಕು. ಹೀಗೆ ಯಾವ ವಾರ್ಡಿಗೆ ಭೇಟಿ ನೀಡಲಾಗುತ್ತದೆ ಎಂಬುದರ ಬಗ್ಗೆ ಮಾಹಿತಿ ಹಂಚಿಕೊಳ್ಳಲು ಆಯುಕ್ತರನ್ನು ಒಳಗೊಂಡ ವಾಟ್ಸಪ್ ಗ್ರೂಪ್ ಆರಂಭಿಸಬೇಕು ಮತ್ತು ಆಯಾ ವಾರ್ಡ್ ನ ಜನಪ್ರತಿನಿಧಿಗಳನ್ನು ಸ್ಥಳಕ್ಕೆ ಕರೆದೊಯ್ಯಬೇಕು ಎಂದು ಸೂಚನೆ ನೀಡಿದರು. ಬೀದಿ ನಾಯಿ ನಿಯಂತ್ರಣಕ್ಕೆ ಸಂತಾನ ನಿಯಂತ್ರಣ ಲಸಿಕೆ ಹಾಕಿಸಬೇಕು ಮತ್ತು ಬಿಡಾಡಿ ದನಗಳನ್ನು ಗೋಶಾಲೆಗೆ ಹಾಕಬೇಕು. ಇಂದಿರಾ ಕ್ಯಾಂಟೀನ್ ಅನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕೆಂದು ಸಚಿವ ಬೈರತಿ ಸುರೇಶ್ ಸೂಚನೆ ನೀಡಿದರು.

**ಮಾಸ್ಟರ್ ಪ್ಲಾನ್ ಗೆ ಸೂಚನೆ:**

ನಗರದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ಆದಷ್ಟೂ ಬೇಗ ಮಾಸ್ಟರ್ ಪ್ಲಾನ್ ಸಿದ್ಧಪಡಿಸಿ ಅನುಮೋದನೆ ಪಡೆದುಕೊಳ್ಳಬೇಕು. 127 ಕೋಟಿ ರೂ. ವೆಚ್ಚದಲ್ಲಿ ಎಂಜಿಎನ್ ವಿವೈ ಕಾಮಗಾರಿಗಳನ್ನು ಕೈಗೊಳ್ಳಬೇಕು. ಅಲ್ಲೀಪುರ ಕೆರೆ ಮತ್ತು ಬಂಡಿಹಟ್ಟಿ ಕೆರೆಯನ್ನು 25 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಬೇಕು. ನಗರಾಭಿವೃದ್ಧಿ ಪ್ರಾಧಿಕಾರದಿಂದ 200 ಎಕರೆ ಪ್ರದೇಶದಲ್ಲಿ ಸುಸಜ್ಜಿತ ಬಡಾವಣೆ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಕಳೆದ ಆಗಸ್ಟ್ನಲ್ಲಿ 14.57 ಕೋಟಿ ರೂ. ವೆಚ್ಚದ 131 ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ನಡೆದಿದೆ. ಕೆಲಸ ಮಾತ್ರ ಪ್ರಾರಂಭಿಸಿಲ್ಲ;ಏಕೆ? ಇನ್ನು 10 ದಿನಗಳೊಳಗಾಗಿ ಕಾರ್ಯಾದೇಶ ನೀಡಿ, 11 ದಿನದಂದು ಕೆಲಸ ಆರಂಭಿಸಬೇಕು. ಇಲ್ಲದಿದ್ದರೆ ಸಂಬಂಧಿಸಿದ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿಯವರಿಗೆ ನಿರ್ದೇಶನ ನೀಡಿದರು.

ನಮ್ಮ ಸರ್ಕಾರ ಬಂದ ಮೇಲೆ ಅಭಿವೃದ್ಧಿ ಕಾಮಗಾರಿಗಳಿಗೂ ಒತ್ತು ನೀಡಿದ್ದು, ಸುಮಾರು 200 ಕೋಟಿ ರೂ. ಅಧಿಕ ಅನುದಾನ ನೀಡಿದೆ. ಆದರೂ ಅಧಿಕಾರಿಗಳು ಸಮರ್ಪಕವಾಗಿ ಬಳಸುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದ ಅವರು, ದೇವರು ವರ ಕೊಟ್ಟರೂ ಪೂಜಾರಿ ವರ ನೀಡುತ್ತಿಲ್ಲ ಎಂಬ ಗಾದೆ ಪ್ರಸ್ತಾಪಸಿದರು. 15ನೇ ರಾಜ್ಯ ಹಣಕಾಸು ಯೋಜನೆಯ ವೈಯಕ್ತಿಕ ಸೌಲಭ್ಯದಡಿ ಫಲಾನುಭವಿಗಳಿಗೆ ಏಕೆ ಸೌಲಭ್ಯ ನೀಡಿಲ್ಲ, ನಗರ ವ್ಯಾಪ್ತಿಯಲ್ಲಿ ಬೋರ್‌ವೆಲ್, ಮೋಟಾರ್ ಪಂಪ್ ಅಳವಡಿಕೆಗೆ ರೂ.35 ಲಕ್ಷ ಅನುದಾನವಿದ್ದು, ಏಕೆ ಖರ್ಚು ಮಾಡಿಲ್ಲ? ಪಾಲಿಕೆಯ ಸದಸ್ಯರೊಬ್ಬರು ತಮ್ಮ ವಾರ್ಡ್ನಲ್ಲಿ ಬೋರ್‌ವೆಲ್ ಅಳವಡಿಕೆಗಾಗಿ ಎರಡು ವರ್ಷಗಳಿಂದ ಮನವಿ ಮಾಡುತ್ತಾರೆ. ಏಕೆ ಅಳವಡಿಸಲಾಗುತ್ತಿಲ್ಲ? ಅದೇ ರೀತಿಯಾಗಿ ನಗರದಲ್ಲಿ ಉದ್ಯಾನವನ ಮತ್ತು ಕೆರೆ ಅಭಿವೃದ್ಧಿ ಕಾಮಗಾರಿಗಳಿಗೂ ಅನುದಾನವಿದೆ. ಏಕೆ ಬಳಸುತ್ತಿಲ್ಲ? ಎಂದು ಸಂಬಂಧಿಸಿದ ಅಧಿಕಾರಿಯ ಮೇಲೆ ಸಚಿವರು ಗರಂ ಆದರು.

ನಮ್ಮ ಸರ್ಕಾರ ಬಂದ ಮೇಲೆ ರಾಜ್ಯದಲ್ಲಿ ಅನಧೀಕೃತ ಕಟ್ಟಡ, ಬಡಾವಣೆಗಳನ್ನು ಅಧಿಕೃತವಾಗಿಸಲು ಇ-ಖಾತಾ ಅಭಿಯಾನ ಆರಂಭಿಸಿದ್ದು, ವರ್ಷಕ್ಕಿಂತ ವರ್ಷ ತೆರಿಗೆ ಆದಾಯ ಹೆಚ್ಚಳಗೊಳ್ಳಬೇಕು ಎಂದು ಹೇಳಿದ ಸಚಿವರು, ಮಹಾನಗರ ಪಾಲಿಕೆಯ ವಾರ್ಷಿಕವಾರು ತೆರಿಗೆ ನಿಗದಿತ ಗುರಿ ತಲುಪುತ್ತಿದೆಯೇ? ನಗರದಲ್ಲಿ ಮನೆಗಳಿಗಿಂತ ವ್ಯಾಪಾರಕ್ಕಾಗಿ ಪರವಾನಿಗೆ ಪಡೆದ ವಾಣಿಜ್ಯ ಮಳಿಗೆಗಳ ತೆರಿಗೆ ಕಡ್ಡಾಯವಾಗಿ ಪಾವತಿಸುವಂತೆ ಸೂಚಿಸಬೇಕು. ಇಲ್ಲದಿದ್ದಲ್ಲಿ ಬಡ್ಡಿ, ಚಕ್ರಬಡ್ಡಿ ಒಳಗೊಂಡು ಪಾವತಿಸಲು ಎಚ್ಚರಿಸಬೇಕು ಎಂದರು.

ಮಹಾನಗರ ಪಾಲಿಕೆಯಲ್ಲಿ ಜನನ-ಮರಣ ಪ್ರಮಾಣ ಪತ್ರ ವಿತರಣೆ ಸಕಾಲದಲ್ಲಿ ಜರಗುತ್ತಿದೆಯೇ? ಎಂದು ಪ್ರಶ್ನಿಸಿದ ಅವರು, ಸಿಬ್ಬಂದಿ ಕೊರತೆ, ಖಾಲಿ ಇರುವ ಹುದ್ದೆಗಳ ಮಾಹಿತಿ ನೀಡಬೇಕು. ಈ ಕುರಿತು ಇಲಾಖೆಯ ಕಾರ್ಯದರ್ಶಿಯವರೊಂದಿಗೆ ಚರ್ಚಿಸಲಾಗುವುದು ಎಂದರು.

ಬಳಿಕ ಮಹಾನಗರ ಪಾಲಿಕೆಯಲ್ಲಿ ಕಸ ಗೂಡಿಸುವ ಯಂತ್ರ, ಜೆಟ್ಟಿಂಗ್ ಯಂತ್ರ ಇದೆಯೇ? ಎಂದು ವಿಚಾರಿಸಿದ ಅವರು, ಇದಕ್ಕೆ ಪಾಲಿಕೆ ಸದಸ್ಯರು ಹಳೆಯ ಮಾದರಿಯ ಯಂತ್ರಗಳಿದ್ದು, ಅವು ಕಾರ್ಯನಿರ್ವಹಿಸುತ್ತಿಲ್ಲ ಎಂದು ಸಭೆಗೆ ಪ್ರಸ್ತಾಪಿಸಿದಾಗ, ಸಿಎಸ್‌ಆರ್ ಅನುದಾನದಡಿ ಆಧುನಿಕ ಯಂತ್ರಗಳನ್ನು ಖರೀದಿಸಿ ಪಾಲಿಕೆಗೆ ಹಸ್ತಾಂತರಿಸಲಾಗುವುದು ಎಂದು ಸಚಿವರ ಗಮನಕ್ಕೆ ತಂದರು.

ಮುಖ್ಯಮಂತ್ರಿಯವರ ಕನಸಿನ ಯೋಜನೆಯಾದ ಬಡವರ ಹಸಿವು ನೀಗಿಸಲು ಆರಂಭಿಸಿದ ಇಂದಿರಾ ಕ್ಯಾಂಟೀನ್ ಗಳನ್ನು ಮುಚ್ಚುವಂತಿಲ್ಲ,

ಯಾವುದೇ ಕ್ಯಾಂಟೀನ್ ಗಳ ಗುತ್ತಿಗೆದಾರರ ಬಿಲ್ ಪಾವತಿ ಬಾಕಿ ಇದ್ದಲ್ಲಿ ಕೂಡಲೇ ಅವುಗಳನ್ನು ಇತ್ಯರ್ಥಪಡಿಸಬೇಕು ಮತ್ತು ಕ್ಯಾಂಟೀನ್ ಗಳನ್ನು ಆರಂಭಿಸಬೇಕು ಎಂದು ಖಡಕ್ ಸೂಚನೆ ನೀಡಿದರು.

ನಗರದ ಅಭಿವೃದ್ಧಿಯಲ್ಲಿ ಸದಸ್ಯರ ಪಾತ್ರವು ಅತೀ ಮುಖ್ಯವಾಗಿದ್ದು, ಅಧಿಕಾರಿಗಳು ಅವರೊಂದಿಗೆ ಸೌಹಾರ್ದತೆ ಹೊಂದುವ ಮೂಲಕ ಜನರ ಕಷ್ಟ-ಕಾರ್ಪಣ್ಯಗಳನ್ನು ಅರಿತು ಬೇಕಾದ ಸೌಲಭ್ಯ ಒದಗಿಸಬೇಕು ಎಂದು ಕಿವಿಮಾತು ಹೇಳಿದರು.

ಸಭೆಯಲ್ಲಿ ಸಂಸದ ಈ.ತುಕಾರಾಮ್, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಬಳ್ಳಾರಿ ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯುಲು,

ಉಪಮೇಯರ್ ಮೊಬಿನಾ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಸೇರಿದಂತೆ ಪಾಲಿಕೆ ಸದಸ್ಯರು, ಬುಡಾ ಮತ್ತು ಪಾಲಿಕೆ ಅಧಿಕಾರಿ,

ಸಿಬ್ಬಂದಿ ಉಪಸ್ಥಿತರಿದ್ದರು.

## ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ, ಕೆ.ಪಿ.ಎಂ.ಇ ಕಾಯ್ದೆ, ಜಿಲ್ಲಾ ಅಂಧತ್ವ ನಿವಾರಣಾ ಕಾರ್ಯಕ್ರಮಗಳ ಕುರಿತು ವಿವಿಧ ಇಲಾಖೆಗಳ ನೇತೃತ್ವದಲ್ಲಿ ನಗರದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿ.05 ರಂದು ಮಧ್ಯಾಹ್ನ 03 ಗಂ-ಟೆಗೆ ನಗರದ ನೂತನ ಜಿಲ್ಲಾಡಳಿತ ಭವನದ ವಿಸಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ ಬಾಬು ಅವರು ತಿಳಿಸಿದ್ದಾರೆ.

## ಇಪಿಎಫ್‌ಓ: ಡಿ.15 ರಂದು ಪಿಂಚಣಿ ಅದಾಲತ್

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:** ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಡಿಸೆಂಬರ್ 15 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ. ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಡಿಸೆಂಬರ್ 10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

## ಡಿಪ್ಲೋಮಾ ಪ್ರವೇಶ: ಅರ್ಜಿ ಆಹ್ವಾನ

ಬಳ್ಳಾರಿ:ಕರ್ನಾಟಕ ಇನ್ಸಿಟ್ಯೂಟ್ ಮ್ಯಾನೇಜ್ಮೆಂಟ್ ತರಬೇತಿ ಸಂಸ್ಥೆಯಲ್ಲಿ ಜನವರಿ ಒಂದು 2026 ರಿಂದ ಪ್ರಾರಂಭವಾಗುವ ಡಿಪ್ಲೋಮಾ ಇನ್ ಕೋ ಆಪರೇಟಿವ್ ಮ್ಯಾನೇಜ್ಮೆಂಟ್ ರೆಗ್ಯುಲರ್ ಮತ್ತು ದೂರ ಶಿಕ್ಷಣದ ಕೋರ್ಸ್ ಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಪಡೆಯಲು ಆಸಕ್ತಿ ಹೊಂದಿರುವ ಅಭ್ಯರ್ಥಿಗಳು ಡಿಸೆಂಬರ್ 15 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು.

ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಪಿಯುಸಿ ಉತ್ತೀರ್ಣರಾಗಿರಬೇಕು. ಪಿಯುಸಿ ಮೇಲ್ಪಟ್ಟ ಅಭ್ಯರ್ಥಿಗಳು ಸಹ ಅರ್ಜಿಯನ್ನು ಸಲ್ಲಿಸಬಹುದು. ಸದರಿ ತರಬೇತಿಯು ಸಹಕಾರ ಕ್ಷೇತ್ರದ ನೇಮಕಾತಿ ಪರೀಕ್ಷೆಗಳಿಗೆ ಅನುಕೂಲಕರ ಹಾಗೂ ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೂ ಮಾಹೆಯಾನ ಶಿಷ್ಯವೇತನ ನೀಡಲಾಗುವುದು.

ಅರ್ಜಿಯನ್ನು ಪಡೆಯುವ ವಿಳಾಸ: ಕರ್ನಾಟಕ ಇನ್ಸಿಟ್ಯೂಟ್ ಆಫ್ ಕೋರ್ಟಿ ಮ್ಯಾನೇಜ್ಮೆಂಟ್ ನಂಬರ್ 1/2, ಎರಡನೇ ಮಹಡಿ ಮೂರನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು -18.

ಹೆಚ್ಚಿನ ಮಾಹಿತಿಗಾಗಿ ಮೊ.9449007661 ಹಾಗೂ 08035541407 ಸಂಪರ್ಕಿಸಬಹುದು ಎಂದು ಪ್ರಕಟಣೆ

## ಉದ್ದಿಮೆದಾರರು ವ್ಯಾಪಾರ ಅವಕಾಶಗಳ ಕುರಿತು ಅರಿವು ಹೊಂದಿ: ನರೇಂದ್ರ ಬಾಬು.ಟಿ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಉದ್ದಿಮೆದಾರರು ವ್ಯಾಪಾರ ಅವಕಾಶಗಳ ಕುರಿತು ಅರಿವು ಹೊಂದಬೇಕು ಎಂದು ಅಲ್ಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಕಾಲೇಜಿನ ಅಧ್ಯಕ್ಷ ನರೇಂದ್ರ ಬಾಬು.ಟಿ ಅವರು ಹೇಳಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವತಿಯಿಂದ ಆರ್‌ಎಎಂಪಿ ಯೋಜನೆಯಡಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು ಯೋಜನೆ ಕುರಿತು ನಗರದ ಕಂಟೋನ್‌ಮೆಂಟ್‌ನ ವೀರಶೈವ ವಿದ್ಯಾವರ್ಧಕ ಸಂಘದ ಅಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಕಾಲೇಜು ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಒಂದು ದಿನದ ಜಾಗೃತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ವ್ಯವಹಾರ ಯೋಜನೆ ಸಿದ್ದತೆಗೆ ಸಹಕಾರ, ತಂತ್ರಜ್ಞಾನದ ಉನ್ನತೀಕರಣ ಮತ್ತು ಗುಣಮಟ್ಟದ ಪ್ರಮಾಣೀಕರಣಕ್ಕೆ ಬೆಂಬಲ, ವಿಳಂಬಿತ ಪಾವತಿಗಳ ಸಮಸ್ಯೆಗಳ ಬಗ್ಗೆ ಹಾಗೂ ಬ್ರಾಂಡಿಂಗ್ ಮತ್ತು ರಫ್ತು ಪ್ರಚಾರದ ಕುರಿತು ಮಾತನಾಡಿದರು.

ಕಾರ್ಯಾಗಾರದಲ್ಲಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು (ಬಿ.ಡಿ.ಎಸ್.ಪಿ) ಸೌಲಭ್ಯಗಳು, ಯಶಸ್ಸಿನ ಕಥೆಗಳ ಬಗ್ಗೆ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್.ಬಿ., ಅಲ್ಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನ ನಿರ್ದೇಶಕ ಡಾ.ಗೋಪಿ ಕೆ.ಟಿ., ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ.ಶೈಲಜಾ ಬಿ., ಎಂಸಿಎ ವಿಭಾಗದ ಎಚ್‌ಒಡಿ ಸತ್ಯನಾರಾಯಣ, ನಿರ್ವಹಣ ಅಧ್ಯಯನ ವಿಭಾಗದ ಎಚ್‌ಒಡಿ ಡಾ.ಎ ತಿಮ್ಮಣ್ಣಗೌಡ, ಪ್ರಮಾಣೀಕೃತ ರಾಷ್ಟ್ರೀಯ ತರಬೇತುದಾರರ ಮತ್ತು ಮಕ್ಕಳ ಸಲಹೆಗಾರರಾದ ಜೆಎಫ್‌ಎಂ ಮಂಜುನಾಥ್ ಬಳ್ಳುಳ್ಳಿ, ಎಂಸಿಎ ಶಿವಾನಂದ, ಸಿಡಾಕ್‌ನ ತರಬೇತಿ ಅಧಿಕಾರಿ ವಿನೋದ್ ಕುಮಾರ್ ಸೇರಿದಂತೆ ಉದ್ದಿಮೆದಾರರು ಭಾಗವಹಿಸಿದ್ದರು.

## ಹಿರಿಯ ಪತ್ರಕರ್ತ ಮೋಹಿಯೋದ್ದಿನ ಲಾಥೋಡಿ ರವರಿಗೆ ಕನ್ನಡ ರತ್ನ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್ ರವರ ಅಧ್ಯಕ್ಷತೆಯಲ್ಲಿ ಪಟ್ಟಣದ ಗಾಂಧಿ ವೃತ್ತದಲ್ಲಿ ಹಮ್ಮಿಕೊಂಡಿದ ಕನ್ನಡ ರಾಜ್ಯೋತ್ಸವ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಹಿರಿಯ ಪತ್ರಕರ್ತರಾದ ಮೋಹಿಯೋದ್ದಿನ ಲಾಥೋಡಿ ಅವರು ಪತ್ರಿಕಾ ರಂಗದಲ್ಲಿ ಜನರ ಸೇವೆಯನ್ನು ಹಗಲಿರಳನ್ನದೇ ಬಡ ಜನರಿಗೆ, ಧ್ವನಿ ಇಲ್ಲದವರಿಗೆ ಧ್ವನಿಯಾಗಿ ಸೇವೆ ಸಲ್ಲಿಸುವ ಕಾರ್ಯವನ್ನು ಮೆಚ್ಚಿ, ಅವರನ್ನು "ಕನ್ನಡ ರತ್ನ" ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿ ಗೌರವಿಸಿದರು. ಶ್ರೀ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ಆಶೀರ್ವಾದಿಸಿದರು. ಶಾಸಕರಾದ ಡಾ ಸಿದ್ದಲಿಂಗಪ್ಪ ಪಾಟೀಲ, ಡಾ. ಶೈಲೇಂದ್ರ ಬೆಲ್ದಾಳೆ, ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್, ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ, ಜಿಲ್ಲಾಧ್ಯಕ್ಷ ಸುಭಾಷ ಕೆನೆಡೆ, ಜಿಲ್ಲಾ ಕಾರ್ಯದರ್ಶಿ ರಮೇಶ ಧೂಳ, ತಾಲೂಕಾಧ್ಯಕ್ಷ ಪವನ ಪೂಜಾರಿ, ರಾಜಕುಮಾರ್ ಆರ್. ಹಡಪದ ಸೇರಿದಂತೆ ಕನ್ನಡ ಅಭಿಮಾನಿಗಳು ಉಪಸ್ಥಿತರಿದ್ದರು.

## ಕಾರ್ಮಿಕ ಸಚಿವರಾದ ಸಂತೋಷ್ ಎಸ್.ಲಾಡ್ ಪ್ರವಾಸ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಎಸ್.ಲಾಡ್ ಅವರು ಡಿಸೆಂಬರ್ 03 ರಂದು ಬಳ್ಳಾರಿಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಡಿ.03 ರಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು, ಬೆಳಿಗ್ಗೆ 10.15 ಕ್ಕೆ ಬಳ್ಳಾರಿಯ ತೋರಣಗಲ್ ಜಿಂದಾಲ್ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಬಳಿಕ ಸಂಡೂರು ತಾಲ್ಲೂಕಿನ ವಿಠಲಾಪುರ ಗ್ರಾಮದಲ್ಲಿ ಏರ್ಪಡಿಸಿರುವ ಸಂಡೂರು ಸಂಕಲ್ಪ ಸಮರ್ಪಣಾ ಸಮಾವೇಶ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಸಂಜೆ 05 ಗಂಟೆಗೆ ತೋರಣಗಲ್ಲಿನ ಜಿಂದಾಲ್ ಏರ್‌ಸ್ಟ್ರಿಪ್ ಗೆ ಆಗಮಿಸಿ, ಬೆಂಗಳೂರಿಗೆ ತೆರಳುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

## ಕಬಡ್ಡಿ ಪ್ರತಿಭೆ ಮುಖ್ಯಮಂತ್ರಿಯಿಂದ ಪ್ರಶಸ್ತಿ



**ಮಲ್ಲಮ್ಮ ನುಡಿ ವಾರ್ತೆ** ಬೇಲೂರು:

ಸಾಧನೆ ಮಾಡಬೇಕೆಂಬ ಛಲ, ಆಸಕ್ತಿ ಇದ್ದಲ್ಲಿ ಉತ್ತಮ ಸ್ಥಾನಕ್ಕೆ ಏರಲು ಸಾಧ್ಯವಾಗಲಿದೆ ಎಂಬುದಕ್ಕೆ ಅಪ್ಪಟ ಗ್ರಾಮೀಣ ಪ್ರತಿಭೆ ಎಂ.ಬಿ.ಆತ್ಮೀಯ ಸಾಕ್ಷಿಯಾಗಿದ್ದಾರೆ.

ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗ್ರಾಮೀಣ ಕ್ರೀಡಾ ಸಾಧಕರನ್ನು ಗುರುತಿಸಿ ಕೊಡಮಾಡುವ '2023 ರ ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿಗೆ' ಮೂಲತಃ ಬೇಲೂರು ತಾಲ್ಲೂಕಿನವರಾದ ರಾಷ್ಟ್ರಮಟ್ಟದ ಕ್ರೀಡಾಪಟು ವಿವಾಹಿತೆ ಎಂ.ಬಿ.ಆತ್ಮೀಯ ಆಯ್ಕೆಗೊಂಡು ಮುಖ್ಯಮಂತ್ರಿ ಸಿ.ಎಂ.ಸಿದ್ದರಾಮಯ್ಯ ಅವರಿಂದ ಬೆಂಗಳೂರಿನ ಯುವನಿಕ ಸಭಾಂಗಣದಲ್ಲಿ ಸೋಮವಾರವಷ್ಟೇ ಪ್ರಶಸ್ತಿ, ಗೌರವಕ್ಕೆ ಭಾಜನರಾಗಿದ್ದು, ಇದು ಬೇಲೂರು ತಾಲ್ಲೂಕಿಗೆ ಸಂದ ಗೌರವ ಎಂದೇ ಭಾವಿಸಬಹುದಾಗಿದೆ.

ಬೇಲೂರು ತಾಲ್ಲೂಕು ಮರವತ್ತಿ ಗ್ರಾಮದ ಭದ್ರೇಗೌಡಲತಾ ಇವರ ಪುತ್ರಿಯಾದ ಎಂ.ಬಿ.ಆತ್ಮೀಯ, ಪ್ರೌಢಶಿಕ್ಷಣ ಗೆಂಡೆಹಳ್ಳಿಯಲ್ಲಿ ಪೂರ್ಣಗೊಳಿಸಿ ಪದವಿಪೂರ್ವ, ಪದವಿ ಶಿಕ್ಷಣ ಆಳ್ವಾಸ್ ಶಿಕ್ಷಣ ಸಂಸ್ಥೆಯಲ್ಲಿ ಪಡೆದವರು. ವೃತ್ತಿಪರ ಕಬಡ್ಡಿ ಆಟಗಾರ್ತಿಯಾಗಿದ್ದು, ಜೂನಿಯರ್, ಸೀನಿಯರ್ ವಿಭಾಗದಲ್ಲಿ ಭಾರತ ತಂಡದಲ್ಲಿ ತರಬೇತಿ ಪಡೆದಿದ್ದಾರೆ. ರಾಷ್ಟ್ರಮಟ್ಟದಲ್ಲಿ ಪದಕ ಗಳಿಸಿದ್ದಾರೆ.

ಕಳೆದ ಒಂದು ವರ್ಷದ ಹಿಂದಷ್ಟೇ ಇವರ ಹಾಗೇ ಕಬಡ್ಡಿಯಲ್ಲಿ ರಾಜ್ಯ ಮಟ್ಟದ ಪ್ರತಿಭೆಯಾದ ಪ್ರಸ್ತುತ ಐಟಿ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಬೇತಮಂಗಳದ ಸಂತೋಷ್ ಅವರನ್ನು ವಿವಾಹಿತರಾಗಿದ್ದಾರೆ.

10 ಬಾರಿ ಕರ್ನಾಟಕ ತಂಡವನ್ನು ರಾಷ್ಟ್ರಮಟ್ಟವನ್ನು ಪ್ರತಿನಿಧಿಸಿದ್ದು ವಿಶ್ವವಿದ್ಯಾಲಯದಿಂದ ಆಲ್ ಇಂಡಿಯಾ ಇಂಟರ್ ಯುನಿವರ್ಸಿಟಿ ಮೂಲಕ ಅಂತರಾಷ್ಟ್ರೀಯ ಕಬಡ್ಡಿ ಪಂದ್ಯದಲ್ಲಿ ಭಾಗವಹಿಸಿದ್ದಾರೆ. 2025 ರಲ್ಲಿ ಹರಿದ್ವಾರದಲ್ಲಿ 38ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಛಾಂಪಿಯನ್‌ಶಿಪ್, 2023-24 ರಲ್ಲಿ ಪಂಜಾಬ್‌ನಲ್ಲಿ 70ನೇ ಹಿರಿಯರ ರಾಷ್ಟ್ರೀಯ ಪಂದ್ಯದಲ್ಲಿ ಭಾಗವಹಿಸುವಿಕೆ, ಹರಿಯಾಣದಲ್ಲಿ 69ನೇ ಹಿರಿಯ ರಾಷ್ಟ್ರೀಯ ಕಬಡ್ಡಿ ಸ್ಪರ್ಧೆಗೆ ರಾಜ್ಯದ ತಂಡದ ನಾಯಕಿಯಾಗಿ ಆಯ್ಕೆ.

ಚೆನ್ನೈನ್ ನಡೆದ ದಕ್ಷಿಣ ವಲಯ ಅಂತರ ವಿಶ್ವವಿದ್ಯಾಲಯ ಪಂದ್ಯದಲ್ಲಿ ಪ್ರಥಮ ಸ್ಥಾನ, ಖೇಲೋ ಇಂಡಿಯಾ, ಭುವನೇಶ್ವರ, ಒಡಿಶಾ, ವಾರಣಾಸಿ, ವೆಲ್ಟೆಕ್ ವಿಶ್ವವಿದ್ಯಾಲಯ, ಹಿಮಾಚಲ ಪ್ರದೇಶ, ಆಂದ್ರಪ್ರದೇಶ, ರೋಹ್ಟಕ್, ಮಂಗಳೂರು, ಗುಜರಾತ್, ಕೇರಳ, ಮಧ್ಯಪ್ರದೇಶ, ಉತ್ತರಪ್ರದೇಶ ಇಲ್ಲಿನ ವಿಶ್ವವಿದ್ಯಾಲಯ ಹಂತದ ಕಬಡ್ಡಿ ಪಂದ್ಯದಲ್ಲಿ ಪ್ರಥಮ, ದ್ವಿತೀಯ ಬಹುಮಾನ ಪಡೆದುಕೊಂಡಿ-ದ್ದಾರೆ. ಒಟ್ಟಾರೆ, ಪ್ರೌಢಶಿಕ್ಷಣದ ಹಂತದಿಂದ ಕಬಡ್ಡಿಯಲ್ಲಿ ಸಾಧನೆ ಮಾಡಲು ತೋರಿದ ಆಸಕ್ತಿ 2023 ರವರಗೂ ಕೊಂಡೊಯ್ದು ಉತ್ತುಂಗಕ್ಕೆ ಏರಿಸಿದೆ. ಇಂತಹವರನ್ನು ಗುರುತಿಸಿ ರಾಜ್ಯೋತ್ಸವ, ಗಣರಾಜ್ಯೋತ್ಸವ ಪ್ರಶಸ್ತಿ ಪುರಸ್ಕಾರ ನೀಡುವ ಅಗತ್ಯವಿದೆ. ಇವರ ಸಾಧನೆಗೊಂದು ಪತ್ರಿಕೆ ಸಲ್ಯೂಟ್ ಹೊಡೆಯಲಿದೆ.

## ವಿಶ್ವ ಏಡ್ಸ್ ದಿನ ಕಾರ್ಯಕ್ರಮದಲ್ಲಿ ಆಡಳಿತ ವೈದ್ಯಾಧಿಕಾರಿ ಡಾ.ಹುಕ್ಕೇರಿ ಸಲಹೆ

# ಏಡ್ಸ್ ಕುರಿತು ಭಯಬೇಡ ಮುನ್ನೆಚ್ಚರಿಕೆ ಇರಲಿ



**ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:**

ಏಡ್ಸ್ ಎಂಬುದು ಒಂದು ಮಾರಣಾಂತಿಕ ಕಾಯಿಲೆಯಾಗಿದ್ದರೂ ಸುರಕ್ಷಿತ ಲೈಂಗಿಕ ಕ್ರಮಗಳನ್ನು ಅನುಸರಿಸುವುದರಿಂದ ಅದನ್ನು ನಿಯಂತ್ರಿಸಬಹುದು. ಈ ರೋಗದ ಕುರಿತು ಭಯಬೇಡ ಆದರೆ ಮುನ್ನೆಚ್ಚರಿಕೆ ಅಗತ್ಯವಾಗಿದೆ ಎಂದು ಸ್ಥಳೀಯ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಶ್ರೀಶೈಲ ಹುಕ್ಕೇರಿ ಹೇಳಿದರು.

ಸೋಮವಾರ ಪಟ್ಟಣದಲ್ಲಿ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಹಾಗೂ ತಡೆಗಟ್ಟು ಘಟಕ ವಿಜಯಪುರ, ತಾಲೂಕ ಆರೋಗ್ಯ ಅಧಿಕಾರಿಗಳ ಕಚೇರಿ ಮುದ್ದೆಬಿಹಾಳ, ಎಸ್.ವಿ.ಎಂ. ಪ್ಯಾರಾಮೆಡಿಕಲ್ ಇನ್ಸಿಟ್ಯೂಟ್ ಹಾಗೂ ಸಮುದಾಯ ಆರೋಗ್ಯ ಕೇಂದ್ರ ತಾಳಿಕೋಟಿ ಇವರ ಸಹಯೋಗದಲ್ಲಿ ವಿಶ್ವ ಏಡ್ಸ್ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರತಿ ವರ್ಷ ಡಿಸೆಂಬರ್ 1ರಂದು ವಿಶ್ವ ಏಡ್ಸ್ ದಿನದ ಆಚರಣೆಯನ್ನು ವಿಶ್ವ ಆರೋಗ್ಯ ಸಂಸ್ಥೆಯು 1988ರಿಂದ ಆರಂಭಿಸಿತು ಇದರ ಪ್ರಮುಖ ಉದ್ದೇಶ ಎಚ್.ಐ.ವಿ./ ಏಡ್ಸ್ ರೋಗದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಅದರ ಕುರಿತು ಇರುವ ತಪ್ಪು ಕಲ್ಪನೆಗಳನ್ನು ದೂರು ಮಾಡುವುದು ಹಾಗೂ ರೋಗಿಗಳಿಗೆ ಸಮಾಜದಲ್ಲಿ ಗೌರವ ದೊರಕಿಸುವಂತೆ ಮಾಡುವುದಾಗಿದೆ ಎಂದ ಅವರು ಇವತ್ತು ಇಂತಹ ನಿರಂತರ ಜಾಗೃತಿ ಕಾರ್ಯಕ್ರಮಗಳಿಂದ ಯುವಜನರಲ್ಲಿ ಆರೋಗ್ಯ ಪ್ರಜ್ಞೆ ಮೂಡಿದೆ. ಇಂದು ಅವರು

ಸುರಕ್ಷಿತ ಲೈಂಗಿಕ ಕ್ರಿಯೆ ಅನುಸರಿಸುತ್ತಿರುವುದರಿಂದ ಎವಿ ಸೋಂಕಿತರ ಪ್ರಮಾಣ ಕಡಿಮೆಯಾಗುತ್ತಿದೆ ಎಂದರು. ಐಸಿಟಿಸಿ ಸಮಾಲೋಚಕಿ ಕಲ್ಪನಾ ಹೂಗಾರ ಪ್ರಾಸ್ತಾವಿಕವಾಗಿ ಮಾತನಾಡಿ ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ಕೊನೆಗಾಣಿಸೋಣ" ಈ ವರ್ಷದ ಘೋಷವಾಕ್ಯವಾಗಿದೆ ಎಂದು ತಿಳಿಸಿ, ಎವಿ ಸೋಂಕಿನ ನಿಯಂತ್ರಣ ಕ್ರಮಗಳು ಹಾಗೂ ಏಡ್ಸ್ ರೋಗದ ಬಗ್ಗೆ ಸಾರ್ವಜನಿಕರಲ್ಲಿ ಇರುವ ತಪ್ಪು ಕಲ್ಪನೆಗಳ ಕುರಿತು ವಿವರಿದರು. ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಕೇಂದ್ರದ ಸಿಬ್ಬಂದಿ ವರ್ಗ, ಎನ್.ಜಿ.ಓ. ವರ್ಕರ್ಸ್, ತಾಳಿಕೋಟಿ ಎಸ್‌ವಿಎಮ್ ಪ್ಯಾರಾ ಮೆಡಿಕಲ್ ಇನ್ಸಿಟ್ಯೂಟ್ ವಿದ್ಯಾರ್ಥಿಗಳು ಹಾಗೂ ಆಶಾ ಕಾರ್ಯಕರ್ತೆಯರು ಇದ್ದರು. ವಿದ್ಯಾರ್ಥಿಗಳ ಜಾಗೃತಿ ಜಾಥಾ: ವೇದಿಕೆ ಕಾರ್ಯಕ್ರಮ ಮುನ್ನ ಎಸ್.ವಿ.ಎಂ. ಪ್ಯಾರ

ಾ ಮೆಡಿಕಲ್ ಇನ್ಸಿಟ್ಯೂಟ್ ವಿದ್ಯಾರ್ಥಿಗಳಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ವಿಶ್ವ ಏಡ್ಸ್ ದಿನದ ಕುರಿತು ಜಾಥಾದ ಮೂಲಕ ಸಾರ್ವಜನಿಕರಲ್ಲಿ ಜನಜಾಗೃತಿಯನ್ನು ಮೂಡಿಸಲಾಯಿತು. ಇವತ್ತು ನಿರಂತರ ಜಾಗೃತಿಯಿಂದ ಯುವಜನರಲ್ಲಿ ಆರೋಗ್ಯ ಪ್ರಜ್ಞೆ ಮೂಡಿದೆ. ಸುರಕ್ಷಿತ ಲೈಂಗಿಕ ಕ್ರಿಯೆ ಅನುಸರಿಸುತ್ತಿದ್ದಾರೆ ಇದರಿಂದ ಎವಿ ಸೋಂಕಿತರ ಪ್ರಮಾಣ ಕಡಿಮೆಯಾಗುತ್ತಿದೆ. ಡಾ.ಶ್ರೀಶೈಲ ಹುಕ್ಕೇರಿ ಆಡಳಿತ ವೈದ್ಯಾಧಿಕಾರಿ ತಾಳಿಕೋಟಿ.

# ಉತ್ತಮ ಸೇವೆ ಸಲ್ಲಿಸಿದವರಿಗೆ ಸನ್ಮಾನ

## ಎಚ್.ಐ.ವಿ ಸೋಂಕಿನ ಬಗ್ಗೆ ಜಾಗೃತಿ ಮೂಡಿಸಿ: ನ್ಯಾ.ದಿಡ್ಡಿ



**ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ:** –ಎಚ್.ಐ.ವಿ ಏಡ್ಸ್ ಸೋಂಕಿನ ಬಗ್ಗೆ ಯುವಕರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಹೇಳಿದರು.

ನಗರದ ಬಿವಿವ ಸಂಘದ ಸಜ್ಜಲಶ್ರೀ ನರ್ಸಿಂಗ್ ಮಹಾವಿದ್ಯಾಲಯದ ಸಭಾಭವನದಲ್ಲಿ ಸೋಮವಾರ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ, ರೆಡ್ ರಿಬ್ಬನ್ ಕ್ಲಬ್ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ವಿಶ್ವ ಏಡ್ಸ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ರೀತಿಯಲ್ಲಿ ಯುವಕರು ಹೆಚ್.ಐ.ವ್ಹಿ ಸೋಂಕಿಗೆ ಒಳಗಾಗದೇ ಸೋಂಕಿನ ಬಗ್ಗೆ ತಿಳುವಳಿಕೆ ಪಡೆದು–ಕೊಂಡು ತಮ್ಮ ತಮ್ಮ ಸ್ನೇಹಿತರಿಗೆ ಅರಿವು ಮೂಡಿಸಲು ಮುಂದಾಗಬೇಕು. ಸೋಂಕು ತಡೆಗಟ್ಟಲು ಜನಸಾಮಾನ್ಯರಲ್ಲಿ ಸೂಕ್ತ ಅರಿವು ಹಾಗೂ ಜಾಗೃತಿ ಮೂಡಿಸಲು, ಇದನ್ನು ಎದುರಿಸಲು ನಮ್ಮ ಮುಂದಿನ ಸವಾಲುಗಳ ಬಗ್ಗೆ ಚಿಂತಿಸುವ ದಿನ ಇದಾಗಿದೆ ಎಂದರು ತಿಳಿಸಿದರು. ಜಿಲ್ಲಾ ಏಡ್ಸ ನಿಯಂತ್ರಣ ಅಧಿಕಾರಿ ಡಾ.ಸುವರ್ಣಾ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ, ಹೆಚ್.ಐ.ವಿ ಸೋಂಕು ನಿಯಂತ್ರಿಸುವ ಕಾರ್ಯದಲ್ಲಿ ನಮ್ಮ ಇಲಾಖೆಯಿಂದ ಮಾತ್ರವಲ್ಲದೇ ಜಿಲ್ಲೆಯ ಎಲ್ಲ ಬೇರೆ ಬೇರೆ ಇಲಾಖೆ ಹಾಗೂ ಜಿಲ್ಲೆಯ ಎಲ್ಲ ರೆಡ್ ರಿಬ್ಬನ್ ಕ್ಲಬ್‌ಗಳು ಹಾಗೂ ಎನ್.ಎಸ್.ಘಟಕಗಳು ವಿವಿಧ ಸಂಘ ಸಂಸ್ಥೆಗಳು ಕೆಲಸ ಮಾಡುತ್ತಿವೆ. ಎಚ್.ಐ.ವಿ ನಿಯಂತ್ರಣದಲ್ಲಿ ಎಲ್ಲರೂ ಕೂಡಿ ಕೆಲಸ ನಿರ್ವಹಿಸಿದಾಗ ಮಾತ್ರ ಸೋಂಕನ್ನು 2030ರ ವೇಳೆಗೆ ಸೊನ್ನೆಗೆ ತರಲು ಸಾಧ್ಯವಾಗುತ್ತದೆ ಎಂದರು.

ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಮೆಡಿಸಿನ್ ವಿಭಾಗದ ಡಾ.ಅಜಯ ಸಜ್ಜನ ಉಪನ್ಯಾಸ ನೀಡಿದರು. ಈ ವೇಳೆಯಲ್ಲಿ ಕಳೆದ 2024–25ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಹೆಚ್.ಐ.ವಿ, ಏಡ್ಸ್ ನಿಯಂತ್ರಣದಲ್ಲಿ ಘನನೀಯ ಸೇವೆಯನ್ನು ಸಲ್ಲಿಸಿದ ಜಿಲ್ಲಾ ಆಸ್ಪತ್ರೆಯ ಸ್ತ್ರೀರೋಗ ತಜ್ಞೆಡಾ.ನಿವೇದಿತಾ ಭಾವಿ, ಅತ್ಯುತ್ತಮ ಪ್ಲಾಶ್ ಮಾಬ್ ಆಗಿರುವ ವಿದ್ಯಾಗಿರಿಯ ಬಸವೇಶ್ವರ ಪದವಿ ಮಹಾವಿದ್ಯಾಲಯ, ಅತ್ಯುತ್ತಮ ರೆಡ್ ರಿಬ್ಬನ್ ಕ್ಲಬ್ ಮುಧೋಳ ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ, ಅತ್ಯುತ್ತಮ ಎಫ್–ಐಸಿಟಿಸಿ ಕೇಂದ್ರ ಬೇಲೂರ ಪ್ರಾಥಮಿಕ ಆರೋಗ್ಯ ಕೇಂದ್ರ, ಎಚ್.ಐ.ವಿ ಕ್ಷೇತ್ರದಲ್ಲಿ ಚೆನ್ನಾಗಿ ಕಾರ್ಯನಿರ್ವಹಿಸಿದ ರಬಕವಿಯ ಸಮರ್ಪಣಾ ಸಂಸ್ಥೆಗೆ ಪ್ರಶಸ್ತಿ ಪತ್ರ ಹಾಗೂ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು.

# ಚದುರಂಗ ಬುದ್ಧಿಮತ್ತೆಯ ಆಟ–ಚನ್ನವೀರ ಶ್ರೀಗಳು



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಕ್ರಿಕೆಟ್, ಕಬ್ಬಡ್ಡಿ, ಹಾಕಿಯಂತಹ ಆಟಗಳು ದೇಹದ ಸಾಮರ್ಥ್ಯವನ್ನು ಹೆಚ್ಚಿಸಿದರೆ, ಚದುರಂಗ ಆಟ ಬುದ್ಧಿಮತ್ತೆಯನ್ನು ಹೆಚ್ಚಿಸುತ್ತದೆ ಎಂದು ಕಮತಗಿಯ ಕುಂಟೋಜಿ ಹಿರೇಮಠದ ಚನ್ನವೀರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದಲ್ಲಿ ಸೋಮವಾರ ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಗ್ರಾಮೀಣ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಹಾಗೂ ಬಾಗಲಕೋಟೆ ವಿಶ್ವವಿದ್ಯಾಲಯ ಜಮಖಂಡಿ ಇವರ ಸಹಯೋಗದಲ್ಲಿ ಜರುಗಿದ 2025–26 ನೇ ಸಾಲಿನ ಏಕವಲಯ ಅಂತರ ಕಾಲೇಜುಗಳ ಪುರುಷ ಮತ್ತು ಮಹಿಳಾ ಚದುರಂಗ ಪಂದ್ಯಾವಳಿ ಉದ್ಘಾಟಿಸಿ ಅವರು ಮಾತನಾಡಿದರು. ಚದುರಂಗ 16ನೇ ಶತಮಾನದಲ್ಲಿ ಗ್ರೀಸ್ ದೇಶದಲ್ಲಿ ಹುಟ್ಟಿಕೊಂಡಿತ್ತು. ಎಲ್ಲಾ ಆಟಗಳ ಗೆಲುವಿಗೆ ಅದೃಷ್ಟ ಕಾರಣವಾದರೆ ಚದುರಂಗದಲ್ಲಿ ಮೆದುಳಿನ ಸಾಮರ್ಥ್ಯದಿಂದ ಗೆಲ್ಲಬೇಕಾಗುತ್ತದೆ. ಈ ಆಟ ತಾಳ್ಮೆ, ಸಂಯಮತೆಯನ್ನು ಬೆಳೆಸುತ್ತದೆ ಎಂದು ಸ್ವಾಮೀಜಿ ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಮಖಂಡಿ ವಿಶ್ವವಿದ್ಯಾಲಯದ ಕ್ರೀಡಾ ಸಂಯೋಜನಾಧಿಕಾರಿ ಡಾ.ಕೆ. ಎಂ.ಶಿರಹಟ್ಟಿ ಮಾತನಾಡಿ, ಕ್ರೀಡೆಯು ದೈಹಿಕ ಮತ್ತು ಮಾನಸಿಕ ಸಾಮರ್ಥ ಹೆಚ್ಚಿಸಲು ಅತ್ಯಗತ್ಯವಾಗಿದ್ದು, ಇದು ಸ್ನಾಯುಗಳನ್ನು ಬಲಪಡಿಸುತ್ತದೆ. ಕ್ರೀಡೆ ಆಡುವ ಮೂಲಕ ಒತ್ತಡ ಕಡಿಮೆ ಮಾಡಬಹುದು ಮತ್ತು ಉಲ್ಲಾಸ ಹೆಚ್ಚಿಸುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಚದರುಂಗದಂತಹ ಆಟಗಳಲ್ಲಿ ಭಾಗವಹಿಸಿದರೆ ಏಕಾಗ್ರತೆ ಮತ್ತು ಸ್ಮರಣಶಕ್ತಿ ಹೆಚ್ಚಿಸಿಕೊಳ್ಳಲು ಅನುಕೂಲವಾಗುತ್ತದೆ ಎಂದು ಹೇಳಿದರು.

ವಿಜಯಪುರದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಸಹಾಯಕ ದೈಹಿಕ ಶಿಕ್ಷಣ ನಿರ್ದೇಶಕ ಡಾ.ವಿಶ್ವನಾಥ ನಡಕಟ್ಟಿನ, ಹುನಗುಂದ ಎಸ್.ಆರ್.ವಸ್ತ್ರದ ಕಲಾ ಹಾಗೂ ವಾಣಿಜ್ಯ, ವ್ಹಿ.ಎಸ್.ಬೆಳ್ಳಿಹಾಳ ವಾಣಿಜ್ಯ ಮಹಾವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಎಸ್.ಬಿ.ಚಳಗೇರಿ ಮಾತನಾಡಿದರು. ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಪೂಜ್ಯ ಹುಚ್ಚೇಶ್ವರ ಮಹಾಸ್ವಾಮಿಗಳು ಸಾನಿಧ್ಯ ರಾಂಪುರ ರೇವಣಸಿದ್ದೇಶ್ವರ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಉಮೇಶ ಎಚ್. ಮೇಟಿ, ಚಿದಾನಂದ ನಂದಾರ, ವೆಂಕಟೇಶ ಪಿ., ಸುನೀಲ ನಾರಾಯಣಿ, ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಆಡಳಿತಾಧಿಕಾರಿ ಅನಿಲಕುಮಾರ ಕಲ್ಯಾಣಶೆಟ್ಟಿ, ಕಾಲೇಜಿನ ಪ್ರಾಚಾರ್ಯ ಪಿ.ಎಂ.ಗುರುವಿನಮಠ, ಮಹಾಂತೇಶ ಲಾಯದಗುಂದಿ ಹಾಗೂ ಸಂಸ್ಥೆಯ ಆಡಳಿತ ಮಂಡಳಿ ನಿರ್ದೇಶಕರು, ಆಡಳಿತಾಧಿಕಾರಿಗಳು, ಜಿಲ್ಲೆಯ ವಿವಿಧ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕುಮಾರೇಶ್ವರ ಆಸ್ಪತ್ರೆಯಲ್ಲಿ ವಿಶ್ವ ಏಡ್ಸ್ ದಿನಾಚರಣೆ

## ಏಡ್ಸ್ ಕಾಯಿಲೆಗೆ ಚಿಕಿತ್ಸಾ ಸೌಲಭ್ಯವಿದೆ: ಡಾ.ಕೋರಾ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ದಶಕಗಳ ಹಿಂದೆ ಏಡ್ಸ್ ಮಾರಣಾಂತಿಕ ಕಾಯಿಲೆಯಾಗಿತ್ತು. ವೈದ್ಯಕೀಯ ಸಂಶೋಧನೆಗಳಿಂದಾಗಿ ಏಡ್ಸ್ ಕಾಯಿಲೆಯನ್ನು ಗುಣಪಡಿಸಲು ಈಗ ಔಷಧಿಗಳು ಬಳಕೆಗೆ ಬಂದಿವೆ. ಪರಿಣಾಮವಾಗಿ ಎಚ್.ಐ.ವಿ ಸೋಂಕಿತರಿಗೆ ಚಿಕಿತ್ಸೆಯ ಸೌಲಭ್ಯ ಆಸ್ಪತ್ರೆಗಳಲ್ಲಿ ಲಭ್ಯವಿದೆ ಎಂದು ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜ್ ಮತ್ತು ಎಚ್.ಎಸ್.ಕೆ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ ಹೇಳಿದರು.

ಬಿ.ವಿ.ವಿ ಸಂಘದ ಎಸ್.ಎನ್.ಮೆಡಿಕಲ್ ಕಾಲೇಜ್ ಮತ್ತು ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯ ಎ.ಆರ್.ಟಿ (ಆ್ಯಂಟಿರೆಟ್ರೋವೈರಲ್ ಥೆರಪಿ) ಕೇಂದ್ರದಲ್ಲಿ ಆಯೋಜಿಸಿದ್ದ ವಿಶ್ವ ಏಡ್ಸ್ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಚ್.ಐ.ವಿ ಸೋಂಕಿತರಿಗೆ ಚಿಕಿತ್ಸೆ ನೀಡಲು ಎ.ಆರ್.ಟಿ ಕೇಂದ್ರ ಕಾರ್ಯನಿರ್ವಹಿಸುತ್ತಿದೆ. 204 ಸೋಂಕಿತರು ಚಿಕಿತ್ಸೆಗಾಗಿ ನೋಂದಣಿ ಮಾಡಿಕೊಂಡಿರುವರು. ಈ ಕೇಂದ್ರದಲ್ಲಿ ಏಡ್ಸ್ ಚಿಕಿತ್ಸೆಗೆ ಉಚಿತವಾಗಿ ಔಷಧಿಗಳನ್ನು ವಿತರಿಸಲಾಗುತ್ತಿದೆ. ಹಲವರು ಗುಣಮುಖರಾಗಿ ಸಹಜ ಜೀವನ ನಡೆಸುತ್ತಿರುವರು. ಎಚ್.ಐ.ವಿ ಸೋಂಕಿತರು ಎ.ಆರ್.ಟಿ ಕೇಂದ್ರದ ಸೌಲಭ್ಯ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ಸಾರ್ವಜನಿಕರಲ್ಲಿ ಏಡ್ಸ್ ಕುರಿತು ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ಈ ಕಾಯಿಲೆಗೆ ಚಿಕಿತ್ಸಾ ಸೌಲಭ್ಯ ಇರುವುದರಿಂದ ಎಚ್.ಐ.ವಿ ಸೋಂಕಿತರು ಸ್ವಯಂಪ್ರೇರಣೆಯಿಂದ ಮುಂದೆಬಂದು ಚಿಕಿತ್ಸೆ ಪಡೆಯಬೇಕು. ಎಚ್.ಐ.ವಿ ಸೋಂಕು ಕಾಣಿಸಿಕೊಳ್ಳದಂತೆ ಮತ್ತು ಹರಡದಂತೆ ನಿಯಂತ್ರಿಸುವ ನಿಟ್ಟಿನಲ್ಲಿ ಈ ವರ್ಷದ ಘೋಷವಾಕ್ಯ ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ನಿವಾರಿಸೋಣ ಎಂದಾಗಿದೆ. ಏಡ್ಸ್ ನಿಯಂತ್ರಣಕ್ಕಾಗಿ ಆಸ್ಪತ್ರೆಗಳೊಂದಿಗೆ ಸಾರ್ವಜನಿಕರು ಕೈಜೋಡಿಸಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಇದೇ ಸಂದರ್ಭ ಎಚ್.ಐ.ವಿ ಸೋಂಕಿತರಿಗೆ ಎ.ಆರ್.ಟಿ ಕೇಂದ್ರದಿಂದ ಉಚಿತ ಪಡಿತರವನ್ನು ವಿತರಿಸಲಾಯಿತು. ವೈದ್ಯರಾದ ಡಾ.ಚೌಧರಿ, ಡಾ.ಸಿ.ಎಸ್.ಹಿರೇಮಠ, ಡಾ.ಉಮಾಕಾಂತ ಬೋಕೆ, ಡಾ.ನಾರಾಯಣ ಮುತಾಲಿಕ, ಆಪ್ತ ಸಮಾಲೋಚಕರಾದ ವಿಠ್ಠಲ ಉತಾರ, ಶೋಭಾ ಬಸವರೆಡ್ಡಿ, ಪ್ರವೀಣಗೌಡ, ಸಿದ್ದು ಮುತ್ತತ್ತಿ, ಅರೆವೈದ್ಯಕೀಯ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಡಿ.9 ಮುಚಖಂಡಿ ಜಾತ್ರೆ, ಕಾರ್ತಿಕೋತ್ಸವ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಐತಿಹಾಸಿಕ ಮುಚಖಂಡಿ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಡಿ.5ರಿಂದ 10 ರವರೆಗೆ ಜರುಗಲಿದ್ದು, 9 ರಂದು ಮಹಾರಥೋತ್ಸವ, ಕಾರ್ತಿಕೋತ್ಸವ ನಡೆಯಲಿದೆ.

ಶುಕ್ರವಾರ 5 ರಿಂದ 8 ರವರೆಗೆ ನಿತ್ಯ ಸಂಜೆ 7 ಘಂಟೆಗೆ ಚಿಕ್ಕ ರಥೋತ್ಸವ ನಡೆಯಲಿದ್ದು, ಮಂಗಳವಾರ 9 ಮಧ್ಯಾಹ್ನ 4 ಗಂಟೆಗೆ ಚಿಕ್ಕ ರಥೋತ್ಸವ ನಡೆಯಲಿದೆ. ಸಾಯಂಕಾಲ 5 ಘಂಟೆಗೆ ಮಹಾ ರಥೋತ್ಸವ ನಂತರ ಕಾರ್ತಿಕೋತ್ಸವ ವಿಜೃಂಭಣೆಯಿಂದ ಜರುಗಲಿದೆ.

ಡಿ.7 ರವಿವಾರ ಮುಂಜಾನೆ 6 ಗಂಟೆಗೆ ರುದ್ರಾಭಿಷೇಕ, ಅಯ್ಯಾಚಾರ ಮತ್ತು ಶಿವದೀಕ್ಷೆ, ಬಿಲ್‌ಕೆರೂರಿನ ಬಿಲ್ವಾಶ್ರಮದ ಸಿದ್ಧಲಿಂಗ ಶಿವಾಚಾರ್ಯರ ಮಹಾಸ್ವಾಮಿಗಳು ಹಾಗೂ ಗುಳೇದಗುಡ್ಡದ ಕಾಡಸಿದ್ದೇಶ್ವರ ಸಂಸ್ಥಾನ ಮರಡಿಮಠದ ಕಾಡಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ನಡೆಯಲಿದ್ದು ನಂತರ ಅನ್ನಸಂತರ್ಪಣೆ ಜರುಗಲಿದೆ.

ಡಿ.9 ರಂದು ರಾತ್ರಿ 10–30 ಘಂಟೆಗೆ ಶ್ರೀ ಕೃಷ್ಣ ಪಾರಿಜಾತ ಪ್ರದರ್ಶನಗೊಳ್ಳುವುದು. 10 ರಂದು ಬುಧವಾರ ಸಾಯಂಕಾಲ 4ಗಂಟೆಗೆ ಸುಪ್ರಸಿದ್ಧ ಪೈಲವಾನರ ಕುಸ್ತಿ ಸ್ಪರ್ಧೆಗಳು ಜರುಗಲಿವೆ, 16 ರಂದು ಮಂಗಳವಾರ ಮರಿ ಕಾರ್ತಿಕೋತ್ಸವ ಜರಗುವುದು.

# ಅರ್ಜಿ ಆಹ್ವಾನ

ಬಾಗಲಕೋಟೆ: ಅಮೃತ್ 2.0 ಅಭಿಯಾನದ ಅಮೃತ್ ಮಿತ್ರ ಕಾರ್ಯಕ್ರಮದ ತಾಂತ್ರಿಕೇತರ ಚಟುವಟಿಕೆಯಡಿ ಗುಳೇದಗುಡ್ಡ ಪುರಸಭೆ ವ್ಯಾಪ್ತಿಯ ಸಾರ್ವಜನಿಕ ಉದ್ಯಾನವನ ನಿರ್ವಹಣೆಗೆ ಮಹಿಳಾ ಸ್ವಸಹಾಯ ಸಂಘಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಡೇನಲ್ಕ್ ಅಭಿಯಾನದಡಿ ರಚಿಸಲಾದ ಅರ್ಹ ಸಂಘಗಳು ಅರ್ಜಿ ನಮೂನೆಯನ್ನು ಕಾರ್ಯಾಲಯದಿಂದ ಪಡೆದು, ತಮ್ಮ ಪ್ರಸ್ತಾವನೆಯನ್ನು ಮುಚ್ಚಿದ ಲಕೋಟೆಯಲ್ಲಿ ಡಿಸೆಂಬರ್ 10 ರೊಳಗಾಗಿ ಪುರಸಭೆಗೆ ಸಲ್ಲಿಸಬೇಕು.

# ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,2–ರಾಜ್ಯಾದ್ಯಂತ ಹಾಗೂ ಹೊರ ರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾ ಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯನಿರ್ವಹಿಸುತ್ತಿರುವ ನೊಂದಾಯಿತ ಸಂಘ ಸಂಸ್ಥೆಗಳಿಗೆ ಧನಸಹಾಯ ನೀಡಲು ಹಾಗೂ ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷಭೂಷಣಗಳ ಖರೀದಿಗೆ ಸಹಾಯಧನ ಹಾಗೂ ಚಿತ್ರಕಲೆ, ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನ ನೀಡಲು 2025–26ನೇ ಸಾಲಿನ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪಯೋಜನೆಯಡಿ ಸೇವಾಸಿಂಧು ಖಜತಭುಟಿಜ್ಞಣ. ಇಚಿಡಿಟಿಚಿಣಚಿಇಚಿ.ರಠತ. ುಟಿ ಮುಖಾಂತರ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಡಿಸೆಂಬರ್ 30 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ 08024410547, 8792662816, 08022213530, 9986837037, 9900337738, 9448436877 ನಂಬರಗಳಿಗೆ ಹಾಗೂ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಮತ್ತು ಬಾಗಲಕೋಟೆ ಜಿಲ್ಲೆಯ ವ್ಯವಸ್ಥಾಪಕರು, ಸೇವಾಸಿಂಧು ಇವರನ್ನು ಸಂಪರ್ಕಿಸುವಂತೆ ಪ್ರಕಟಣೆ ಮೂಲಕ ತಿಳಿಸಲಾಗಿದೆ.

# ಡಾ.ಗಿರೀಶ ಮೇಟಿ ಅವರಿಗೆ ಪ್ರಶಸ್ತಿ




**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:** ಬೆಳಗಾವಿಯ ಕೆ.ಎಲ್.ಇ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಇತ್ತೀಚಿಗೆ ಜರುಗಿದ ಪರ್ಲ್ ಪಿಸಿಕಾನ್ 2025 ಅಂತರಾಷ್ಟ್ರೀಯ ಸಮಾವೇಶದಲ್ಲಿ ಬಾಗಲಕೋಟೆಯ ಖ್ಯಾತ ಫಿಸಿಯೋಥೆರಪಿಸ್ಟ್ ಡಾ.ಗಿರೀಶ ಮೇಟಿ ಅವರಿಗೆ 25 ವರ್ಷಗಳ ಫಿಜಿಯೋಥೆರಪಿ ವೈದ್ಯಕೀಯ ವೃತ್ತಿಯಲ್ಲಿ ಅತ್ಯುನ್ನತ ಸೇವೆ ಮಾಡಿದಕ್ಕಾಗಿ 'ದ ಪಿನಾಕಲ್ ಆಫ್ ಪ್ರಾಕ್ಟೀಸ್ ಆಂಡ್ ಎಕ್ಸಲೆನ್ಸ್ ಇನ್ಫಿಯೋಥೆರಪಿ ಪ್ರಾಕ್ಟೀಸ್' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಬಾಗಲಕೋಟೆಯ ಕುಮಾರೇಶ್ವರ ಆಸ್ಪತ್ರೆ, ಕೆರೂಡಿ ಆಸ್ಪತ್ರೆ, ಕಟ್ಟಿ ಆಸ್ಪತ್ರೆಯಲ್ಲಿ ಫಿಜಿಯೋಥೆರಪಿ ವೈದ್ಯರಾಗಿ ಕಳೆದ 25 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಡಾ.ಗಿರೀಶ ಮೇಟಿ ಸಾವಿರಾರು ಜನರಿಗೆ ಶಸ್ತ್ರ ಚಿಕಿತ್ಸೆ ಇಲ್ಲದೆಯೇ ಫಿಜಿಯೋಥೆರಪಿ ಮೂಲಕ ಚಿಕಿತ್ಸೆ ನೀಡಿ ಗುಣಪಡಿಸಿದ್ದಾರೆ.

ಪಿಜಿಯೋಥೆರಪಿಯಲ್ಲಿ ಅತ್ಯಾಧುನಿಕ ಯಂತ್ರಗಳನ್ನು ಬಳಸಿ ಅವರು ಚಿಕಿತ್ಸೆ ನೀಡುತ್ತಿದ್ದಾರೆ.

ಪ್ರಶಸ್ತಿ ಪಡೆದಿರುವ ಡಾ.ಗಿರೀಶ ಅವರನ್ನು ಹಿರಿಯ ವೈದ್ಯ ಡಾ.ಸುಭಾಷ ಪಾಟೀಲ, ರೆಡ್ ಕ್ರಾಸ್ ಸಂಸ್ಥೆಯ ಚೇರ್ಮನ್ ಆನಂದ ಜಗಜಿನ್ನಿ, ವೈದ್ಯರುಗಳಾದ ಡಾ.ಎಚ್.ಆರ್.ಕಟ್ಟಿ, ಡಾ.ಎಸ್.ಬಿ.ಕೆರೂಡಿ, ಡಾ.ಪ್ರಭುಸ್ವಾಮಿಮಠ, ಡಾ.ದೇವರಾಜ ಪಾಟೀಲ ಮತ್ತಿತರರು ಅಭಿನಂದಿಸಿದ್ದಾರೆ.

# ಹೊನ್ನಕುಸುಮ ಗುಚ್ಛ' ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,2–ಸಾಹಿತ್ಯ ಬದುಕಿನ ತಲ್ಲಣ ಮತ್ತು ಪಲ್ಲಟಗಳಿಗೆ ದಾರಿಯಾಗಬಲ್ಲದು. ತನಗವೆಂಬ ಹೊಸ ಪ್ರಾಧಿಕಾರದಿಂದ ಮತ್ತೆ ಬರಹ ಜಗತ್ತಿಗೆ ಬಂದು ಜೋಶಿ ಅವರ ಮಾಗಿದ ಅನುಭವಕ್ಕೆ ಸಾಕ್ಷಿ ಎಂದು ಹಿರಿಯ ಲೇಖಕಿ ದಾನೇಶ್ವರಿ ಸಾರಂಗಮಠ ಹೇಳಿದರು.

ಬ್ರಾಹ್ಮಣ ಸಮಾಜ, ಕನ್ನಡ ಲೇಖಕರ ಪರಿಷತ್ತು, ತನಗ ಬಳಗ, ನೆನಪು ಪ್ರಕಾಶನ ಮತ್ತು ಹವ್ಯಾಸಿ ನಾಟಕ ಕಂಪನಿ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಹುನಗುಂದ ನಗರದ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಹಿರಿಯ ಲೇಖಕ ವ್ಯಾಸತೀರ್ಥ ಜೋಶಿ ಅವರ ಸಂಕಲನ 'ಹೊನ್ನ ಕುಸುಮ ಗುಚ್ಛ' ಬಿಡುಗಡೆ ಮಾಡಿ ಅವರು ಮಾತನಾಡಿದರು.

ಜೋಶಿ ಅವರ ಇಲ್ಲಿನ ತಲ್ಲನಗಳು ಗಂಭೀರ, ವಿಡಂಬನೆ ಹಾಗೂ ಹಾಸ್ಯದಲ್ಲಿ ಮೂಡಿ ಬಂದಿವೆ. ಇಳಿ ವಯಸ್ಸಿನಲ್ಲಿರುವ ಅವರ ಜೀವನೋತ್ಸಾಹ ನಿಜಕ್ಕೂ ಮೆಚ್ಚುವಂಥದ್ದು, ಹಾಗೆಯೇ ಅದು ಹೊಸ ಬರಹಗಾರರಿಗೆ ಅನುಕರಣೀಯ ಎಂದರು. ಹಿರಿಯ ಲೇಖಕ ಸಿದ್ದಲಿಂಗಪ್ಪ ಬೀಳಗಿ ಅಧ್ಯಕ್ಷತೆ ವಹಿಸಿ, ಜೋಶಿ ಅವರು ಆಯ್ದುಕೊಂಡ ವಿಷಯ, ನಿರೂಪಣೆ, ಭಾಷೆಯ ಬಳಕೆ, ತಂದ ಪ್ರಾಸಗಳು ಎಲ್ಲವೂ ವಿಶೇಷ. ಸಾಹಿತ್ಯ ಬದುಕಿನ ಪ್ರತಿಬಿಂಬ ಎನ್ನುವಂತೆ ಇಲ್ಲಿನ ಬಹಳಷ್ಟು ತನಗಗಳು ಉದಾಹರಣೆ ಆಗಿವೆ ಎಂದರು. ಪಿ.ಬಿ.ಧುತ್ತರಗಿ ಟ್ರಸ್ಟ್ ಅಧ್ಯಕ್ಷ ಎಸ್ಕೆ ಕೊನೆಸಾಗರ ಮತ್ತು ಬ್ರಾಹ್ಮಣ ಸಮಾಜದ ಅಧ್ಯಕ್ಷ ವಾದಿರಾಜ ಗುಡ್ಡದ ಅತಿಥಿಗಳಾಗಿದ್ದರು. ಇದೇ ಸಂದರ್ಭದಲ್ಲಿ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪಡೆದ ಹಿರಿಯ ರಂಗಕರ್ಮಿ ಅನಂತ ಬಬಲೇಶ್ವರ ಹಾಗೂ ಪ್ರಕಟಣೆಗೆ ನೆರವಾದವರನ್ನು ಸತ್ಕರಿಸಲಾಯಿತು. ಹಿರಿಯ ಲೇಖಕ ಜಿ.ವಿ.ದೇಶಪಾಂಡೆ, ಎಸ್.ಕೆ.ಕುಲಕರ್ಣಿ ಉಪಸ್ಥಿತರಿದ್ದರು. ಹವ್ಯಾಸಿ ನಾಟಕ ಕಂಪನಿ ಮಕ್ಕಳು ಪ್ರಾರ್ಥಿಸಿದರು. ಡಾ.ಮುರ್ತಜಾ ಒಂಟಿ ಸ್ವಾಗತಿಸಿದರು. ವಿಜಯಕುಮಾರ ಕುಲಕರ್ಣಿ ನಿರೂಪಿಸಿದರು. ಲೇಖಕ ವ್ಯಾಸತೀರ್ಥ ಜೋಶಿ ವಂದಿಸಿದರು.

## PUBLIC NOTICE

Under the instruction of my client by name Jagadish S/o Veeranna R/o Bi Bi Galli Humnabad, my client was having original registered sale deed bearing document No: 2471m Date: 09-09-2020 in respect of open plot TMC No: 14-200/2 its property No: No. 13-25-20A, /Asst No: 14-200/2A, And document No: 2472, Dated: 09-09-2020 in respect of open Plot TMC No: 14-200/2 its property No: 13-25-20B, Asst No: 14-200/2B, of Town Bi Bi Galli Humnabad which is miss placed by my client on dated: 21-08-2025 same is not raced out. If any body found the above said parental deed please inform me in the below mentioned address within 7 days from the date of publication, it any person have any claim in respect of mentioned plat by way of sale, exchange, gift mortgage or any mode of transaction same may be inform in writing to the office below, If I have not received any objection within stipulated days that no claim is entertained or binding on my client.

Lost Report No: 1902503/

Place: Humnabad

Dated: 27-11-2025

Sd/-
Sri. S.M.Tumba Advocate
Humnabad Dist Bidar.

## : CITATION:

**IN THE COURT OF THE PRL. CIVIL JUDGE AND JMFC., AT HUMNABAD.**

**CRL. MISC. No.3227/2025.**

Petitioners:

1. Nawaz miya S/o Pasha miya. Age: 60-year, Occu: Agriculture.
2. Gousiya Begum W/o Md. Nawaz miya. Age: 34-year. Occu: House hold.
3. Imranmaidi S/o Md. Nawaz. Age: 29 year, Oeru: Coolie.
4. Babamaidi S/o Nawaz, Age: 27-year Occu: Coolie.
5. Hajjuma D/o Md. Nawaz, Age: 30-year, Occu: House hold,
6. Gousiyabegum D/o Md. Nawaz. Age: 34-year, Occu: House hold.
7. Khummer Begum D/o Md. Nawaz, Age: 33-year. Occu: House hold.
8. Md Pashulal S/o Md. Nawaz, Age: 25-year, Occu: Coolie.
9. Md Rizwan S/o Md. Nawaz, Age: 20-year, Occu: Student.
10. Md. Shakil S/o Md Nawaz, Age: 17-year, Occu: Student. (Minor U/G his real Mother Petitioner No.2) All R/o Hallikhed-B. Tq.Humnabad. Dist. Bidar.

Respondent:

The Registrar of Birth and Death through The Chief officer TMC Hallikhed-B.

Sub:-Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Wife of petitioner No.1 Sister of petitioner No.2 and Real Mother of petitioner No.3 to 10. Deceased by namely LATE. ZAHIRA BEE W/O MD NAWAZ, she was died on 13.05.1999 at Town Hallikhed-B. Tq. Humnabad. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 06.01.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 01-12-2025

//By order of the court//
Chief Ministerial Officer,
Prl. Civil Judge & JMFC Court,
Humnabad.

# ಗಾಂಧಿ ಗ್ರಾಮ ಪುರಸ್ಕಾರ ಪ್ರಶಸ್ತಿ ಪಡೆದ ಮನ್ನಾಏಖೇಳ್ಳಿ ಗ್ರಾ.ಪಂ.



**ಮಲ್ಲಮ್ಮ ನುಡಿ ವಾರ್ತೆಚಿಟಗುಪ್ಪ:**

ತಾಲ್ಲೂಕಿನ ಮನ್ನಾಏಖೇಳ್ಳಿ ಗ್ರಾಮ ಪಂಚಾಯಿತಿಗೆ ಬೆಂಗಳೂರಿನ ವಿಧಾನ ಸೌಧದಲ್ಲಿ ಸೋಮವಾರ ನಡೆದ ಸಮಾರಂಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು 2023-24ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ಪ್ರದಾನ ಮಾಡಿದರು. ಮನ್ನಾಏಖೇಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಜಕುಮಾರ ಎಸ್. ಅಗಸಿ ಹಾಗೂ ಅಭಿವೃದ್ಧಿ ಅಧಿಕಾರಿ ಭಾಗ್ಯಜ್ಯೋತಿ ಪುರಸ್ಕಾರ ಸ್ವೀಕರಿಸಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯರಾಜ್ ಇಲಾಖೆಯಿಂದ ಕೊಡಲಾಗುವ ಪುರಸ್ಕಾರವು 5 ಲಕ್ಷ, ಫಲಕ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿದೆ. ನರೇಗಾ ಪರಿಣಾಮಕಾರಿ ಅನುಷ್ಠಾನ, ಕೂಸಿನ ಮನೆ, ಡಿಜಿಟಲ್ ಗ್ರಂಥಾಲಯ ನಿರ್ವಹಣೆ, ತೆರಿಗೆ ಸಂಗ್ರಹ, ನೀರು, ಆರೋಗ್ಯ, ನೈರ್ಮಲ್ಯ, ಮಹಿಳಾ ಸಬಲೀಕರಣ ಹಾಗೂ ಮೂಲಸೌಕರ್ಯ ಕಾರ್ಯಗಳಿಗಾಗಿ ಪಂಚಾಯಿತಿಗೆ ಗಾಂಧಿ ಗ್ರಾಮ ಪುರಸ್ಕಾರ ಒಲಿದು ಬಂದಿದೆ. ಪುರಸ್ಕಾರದ ಹಣವನ್ನು ಕುಡಿಯುವ ನೀರಿನ ಯೋಜನೆ ವಿಸ್ತರಣೆ, ಸಮುದಾಯ ಶೌಚಾಲಯ ಹಾಗೂ ಇತರ ಕಾರ್ಯಗಳಿಗೆ ಬಳಸಲಾಗುವುದು ಎಂದು ಅಭಿವೃದ್ಧಿ ಭಾಗ್ಯಜ್ಯೋತಿ ತಿಳಿಸಿದರು.

ಪ್ರಸ್ತುತ ಅವಧಿಯಲ್ಲಿ ಕುಡಿಯುವ ನೀರಿನ ಸೌಲಭ್ಯ, ನೈರ್ಮಲ್ಯ ಮತ್ತು ಶಿಕ್ಷಣಕ್ಕೆ ಆದ್ಯತೆ ನೀಡಲಾಗಿದೆ. ಇದರ ಶ್ರೇಯಸ್ಸು ಪಂಚಾಯತ್ ಸಿಬ್ಬಂದಿ ಮತ್ತು ಗ್ರಾಮದ ಜನರ ಕಠಿಣ ಪರಿಶ್ರಮಕ್ಕೆ ಸಲ್ಲುತ್ತದೆ"

**ರಾಜಕುಮಾರ್ ಅಗಸಿ**
**ಅಧ್ಯಕ್ಷ, ಗ್ರಾಪಂ ಮನ್ನಾಏಖೇಳ್ಳಿ**

ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸರ್ವ ಸದಸ್ಯರು ಹಾಗೂ ಸಾರ್ವಜನಿಕರು ಅಭಿವೃದ್ಧಿಯಲ್ಲಿ ಸಲಹೆ, ಸಹಕಾರ ನೀಡಿ ಕೈಜೋಡಿಸಿದ್ದರಿಂದ ನಮ್ಮ ಪಂಚಾಯಿತಿಗೆ ಈ ಗೌರವ ಸಿಕ್ಕಿದೆ. ಈ ಪ್ರಶಸ್ತಿಯು ಮುಂದಿನ ದಿನಗಳಲ್ಲಿ ಹೆಚ್ಚಿನ ಉತ್ಸಾಹದಿಂದ ಕೆಲಸ ಮಾಡಲು ನಮಗೆ ಪ್ರೇರಣೆ ನೀಡಿದೆ"

**ಭಾಗ್ಯಜ್ಯೋತಿ**
**ಪಿಡಿಓ ಗ್ರಾಪಂ ಮನ್ನಾಏಖೇಳ್ಳಿ**

# ಮದ್ದಾಪುರ ಮೊಸಳೆ ಪ್ರತ್ಯಕ್ಷ



**ಮಲ್ಲಮ್ಮ ನುಡಿ ವಾರ್ತೆ ಮಾನ್ವಿ:**

ತಾಲ್ಲೂಕಿನ ಮದ್ದಾಪುರ ಗ್ರಾಮದ ಹತ್ತಿರ ಹರಿಯುವ ತುಂಗಭದ್ರಾ ನದಿಯಲ್ಲಿ ಭಾನುವಾರ ಮೊಸಳೆ ಪ್ರತ್ಯಕ್ಷವಾಗಿದೆ. ನದಿಯಲ್ಲಿ ಈಚೆಗೆ ದೊಡ್ಡ ಗಾತ್ರದ ಮೊಸಳೆಗಳು ಕಾಣುತ್ತಿರುವುದು ಆತಂಕ ಮೂಡಿಸಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಅರಣ್ಯ ಇಲಾಖೆ ಅಧಿಕಾರಿಗಳು ಕೂಡಲೆ ಪರಿಶೀಲನೆ ಮಾಡಿ ಮೊಸಳೆಗಳ ಸ್ಥಳಾಂತರಕ್ಕೆ ಅಗತ್ಯಕ್ರಮ ಕೈಗೊಳ್ಳಲು ಅವರು ಒತ್ತಾಯಿಸಿದ್ದಾರೆ. ಸೋಮವಾರ ವಲಯ ಅರಣ್ಯಾಧಿಕಾರಿ ಪುರುಷೋತ್ತಮ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ನಂತರ ಮಾತನಾಡಿದ ಅವರು, 'ಗ್ರಾಮದ ಜನರು ನೀರಿಗೆ

ಇಳಿಯುವ ಸಮಯದಲ್ಲಿ ಜಾಗ್ರತೆ ವಹಿಸಬೇಕು ಹಾಗೂ ನದಿ ನೀರಿಗೆ ತಮ್ಮ ಜಾನುವಾರುಗಳನ್ನು

ಇಳಿಸುವಾಗ ಎಚ್ಚರಿಕೆ ವಹಿಸಬೇಕು. ಅರಣ್ಯ ಇಲಾಖೆ ಸಿಬ್ಬಂದಿ ನಿರಂತರವಾಗಿ ನದಿಯಲ್ಲಿನ ಮೊಸಳೆಗಳ ಬಗ್ಗೆ ನಿಗಾ ವಹಿಸಲಿದ್ದಾರೆ. ಮೊಸಳೆ ಕಂಡು ಬಂದಲ್ಲಿ ಅವುಗಳನ್ನು ಸೆರೆ ಹಿಡಿದು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗುವುದು. ಮುನ್ನೆಚ್ಚರಿಕೆಯಾಗಿ ಗಾಮಸ್ಥರಿಗೆ ಜಾಗೃತಿ

ಮೂಡಿಸುವಂತೆ ಗ್ರಾಮ ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳಿಗೆ ಸೂಚಿಸಲಾಗುವುದು. ಅರಣ್ಯ ಇಲಾಖೆಯಿಂದ ಸಾರ್ವಜನಿಕರಿಗೆ ಮೊಸಳೆಗಳ ಅಪಾಯ ಇರುವ ಕುರಿತು ಜಾಗೃತಿ ಫಲಕ ಅಳವಡಿಸಲಾಗುವುದು' ಎಂದು ತಿಳಿಸಿದರು.




**ಯಾದಗಿರಿ:** ಕರ್ನಾಟಕ ಸಾಹಿತ್ಯ ಮತ್ತು ಸಾಂಸ್ಕೃತಿಕ ಪ್ರತಿಷ್ಠಾನವು ಬನವಾಸಿ ಕನ್ನಡಿಗರು ಕನ್ನಡಮಯ ಟ್ರಸ್ಟ್ ನ ಸಹಕಾರದೊಂದಿಗೆ ಬೆಂಗಳೂರಿನ ಸಾಹಿತ್ಯ ಪರಿಷತ್ತಿನ ಅಕ್ಕಮಹಾದೇವಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡದ ಅನನ್ಯ ಸೇವೆ ಪರಿಗಣಿಸಿ ಇಲ್ಲಿನ ಅಂಗರಕ್ಷಕ ಅನೀಲಕುಮಾರ ಪವಾರ ಅವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಸನ್ಮಾನಿಸಲಾಗಿದೆ. ಈ ವೇಳೆ ಸಂಘಟನೆ ರಾಜ್ಯಾಧ್ಯಕ್ಷ ಡಾ.ಮಂಜುಳಾ ಪಾವಗು ಸೇರಿದಂತೆಯೇ ಇತರರಿದ್ದರು.

## ಮೇಣದ ಬತ್ತಿಯೊಂದಿಗೆ ಜಾಗೃತಿ ನಡಿಗೆ

# ಏಡ್ಸ್ ಜಾಗೃತಿ ಕಾರ್ಯಕ್ಕೆ ನಾವೆಲ್ಲ ಕೈಜೋಡಿಸೋಣ:ಸ್ಮಿತಾ ಅಕ್ಕ ಸಲಹೆ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಆಕಸ್ಮಿಕವಾಗಿಯಾಗಲಿ ಅಥವಾ ಜೀವನದ ತಪ್ಪು ಹೆಜ್ಜೆಗಳಿಂದಾಗಲಿ ವ್ಯಕ್ತಿಯು ಹೆಚ್‌ಐವಿ ಸೋಂಕಿಗೆ ಒಳಗಾಗಿ ಜೀವನದ ಸುಂದರ ಕ್ಷಣಗಳನ್ನು ದೂರಮಾಡಿಕೊಳ್ಳುವದುರದೃಷ್ಟಕರ ಸನ್ನಿವೇಶಗಳಿಂದ ಪಾರಾಗಲು ಇರುವ ಸುರಕ್ಷತಾ ಕ್ರಮಗಳ ಜಾಗೃತಿ ಕಾರ್ಯಕ್ಕೆ ನಾವೆಲ್ಲರೂ ಕೈಜೊಡಿಸಿಬೇಕೆಂದು ಪ್ರಜಾಪೀತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ಸ್ಮೀತಾ ಅಕ್ಕ ಮನವಿ ಮಾಡಿದರು.




ಡಿಸೆಂಬರ್ 01ರ ಸೋಮವಾರ ಸಂಜೆ ನಗರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಿಮ್ಸ್ ನರ್ಸಿಂಗ್ ಕಾಲೇಜು, ಡ್ಯಾಪ್ಕೋ ಹಾಗೂ ಹೊಸಬೆಳಕು ಸಂಸ್ಥೆ ಸಹಯೋಗದಲ್ಲಿ ಹೆಚ್‌ಐವಿ ಜಾಗೃತಿಯ ಮೇಣದ ಬತ್ತಿಯೊಂದಿಗೆ ಜಾಗೃತಿ ನಡಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಮುದಾಯದಲ್ಲಿ ಏಡ್ಸ್ ಪಸರಿಸದಂತೆ ಎಚ್ಚರ ವಹಿಸುವುದು ಮತ್ತು ಜನತೆಗೆ ತಿಳಿ ಹೇಳುವುದು ನಮ್ಮೆಲ್ಲರ ಮಹತ್ವದ ಕಾರ್ಯವಾಗಬೇಕಿದೆ. ಇದು ಒಬ್ಬರಿಂದ ಸಾಧ್ಯವಾದುದಲ್ಲ. ಯುವ ಜನತೆಯು ಇದರಲ್ಲಿ ಪ್ರಮುಖ ಪಾತ್ರ ವಹಿಸಬೇಕಿದೆ ಎಂದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಮತನಾಡಿ, ಕಳೆದ ನಾಲ್ಕು ದಶಕಗಳಿಂದ ಸರಕಾರವು ಸಂಘ-ಸಂಸ್ಥೆಗಳ ಸಹಕಾರದೊಂದಿಗೆ ನಾನಾ ಕಾರ್ಯಕ್ರಮ ರೂಪಿಸಿದೆ.

ಸೋಂಕಿಗೆ ಒಳಗಾದಾಗ ಅನುಭವಿಸುವ ಆರೋಗ್ಯ ಸಮಸ್ಯೆಗಳ ಗಂಭೀರತೆಯನ್ನು ಜನತೆಗೆ ಮನವರಿಕೆ ಮಾಡಿಕೊಡುತ್ತಿದೆ. ಹದಿಹರೆಯದವರ ಭವಿಷ್ಯದ ದೃಷ್ಟಿಯಿಂದ ಇಂದಿನಿಂದಲೇ ನಾವು ಜೀವನ ಜೋಪಾನಕ್ಕಾಗಿ ಅರಿವಿನ ಬತ್ತಿ ಹಚ್ಚೋಣವೆಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಂ ಎನ್, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಗಣೇಶ ಕೆ., ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಶಿವಕುಮಾರ ನಾರಾ,

ಮನೋವೈದ್ಯ ಡಾ.ಮನೋಹರ ಪತ್ತಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಜಿಲ್ಲಾ ಡ್ಯಾಪ್ಕೋ ಮೇಲ್ವಿಚಾರಕ ಮಲ್ಲಯ್ಯ ಮಠಪತಿ, ರಿಮ್ಸ್ ನರ್ಸಿಂಗ್ ಕಾಲೇಜಿನ

ಬೋಧಕರಾದ ಸಂತೋಷಕುಮಾರ, ಹೊಸ ಬೆಳಕು ಸಂಸ್ಥೆಯ ಅಧ್ಯಕ್ಷ ಅಮರಯ್ಯ ಸ್ವಾಮಿ, ದೇವರಾಜ್, ಜಿಲ್ಲಾ ಕ್ಷಯರೋಗ ಮೇಲ್ವಿಚಾರಕರ ಅಮರೇಶ, ಎಂಟಿಎಸ್ ಸಂಧ್ಯಾ ಸೇರಿದಂತೆ ಕ್ಷಯರೋಗ, ಡ್ಯಾಪ್ಕೋ, ಎಆರ್‌ಟಿ ಸಿಬ್ಬಂದಿಯರು, ಆಶಾ ಕಾರ್ಯಕರ್ತೆಯರು, ನರ್ಸಿಂಗ್ ವಿದ್ಯಾರ್ಥಿನಿಯರು ಇದ್ದರು.

# ಕನ್ನಡ ಕಾವ್ಯ ಪರಂಪರೆ

## ಶ್ರೀಮಂತವಾದದ್ದು : ಡಾ: ಶಿರವಾಳ




**ಮಲ್ಲಮ್ಮ ನುಡಿ ವಾರ್ತೆ ಶಹಾಪುರ :**

ಕನ್ನಡ ಕಾವ್ಯ ಪರಂಪರೆಗೆ ಸುಮಾರು ಸಾವಿರ ವರ್ಷಗಳ ಇತಿಹಾಸವಿದ್ದು, ಪಂಪನಿಂದ ಆರಂಭಗೊಂಡ ನವ್ಯ, ನವೋದಯ,ಬಂಡಾಯ ಹೀಗೆ ವಿವಿಧ ಪ್ರಕಾರಗಳಲ್ಲಿ ವ್ಯಾಪಿಸಿ ತನ್ನದೇ ಆದ ವೈಶಿಷ್ಟತೆ ಹಾಗೂ ಶ್ರೀಮಂತಿಕೆಯಿಂದ ಕೂಡಿದೆ ಎಂದು ಸಂಶೋಧಕ ಹಾಗೂ ತಾಲೂಕ ಖಜಾನೆ ಅಧಿಕಾರಿಗಳಾದ ಡಾ: ಮೋನಪ್ಪ ಶಿರವಾಳ ಹೇಳಿದರು.

ನಗರದ ಜ್ಞಾನ ಗಂಗೋತ್ರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಗರದ ಕಲಾನಿಕೇತನ ಟ್ರಸ್ಟ್ ವತಿಯಿಂದ ಆಯೋಜಿಸಿದ ನಾಡಗೀತೆಗೆ ನೂರರ ಸಂಭ್ರಮದ ಪ್ರಯುಕ್ತ ಕರ್ನಾಟಕ ರಾಜ್ಯೋತ್ಸವ ಹಾಗೂ "ಕನ್ನಡ ಕಾವ್ಯ ದೀವಿಗೆ"ವಿಶೇಷ ಕಾರ್ಯಕ್ರಮದಲ್ಲಿ ಭಾಗವಹಿಸಿ ಉಪನ್ಯಾಸ ನೀಡಿ ಮಾತನಾಡಿದರು.

ಕನ್ನಡ ಕಾವ್ಯ ಪರಂಪರೆಯು ಅರಿವು ಮೂಡಿಸುವ ಮತ್ತು ಭಾಷೆಯ ಸರಳತೆಯನ್ನು ಹೊಂದಿದೆ,ಅಲ್ಲದೆ ಕಾವ್ಯದ ಸಾಮಾಜಿಕ ಕಳಕಳಿ ಮತ್ತು ಸಾಮಾನ್ಯ ಜನರ ಭಾಷೆಗೆ ಬಳಸಿ ವಚನ ಸಾಹಿತ್ಯದ ಮೂಲಕ ಸಾಮಾಜಿಕ ಕ್ರಾಂತಿಗೆ ಕಾರಣವಾಯಿತು ಎಂದು ಬಣ್ಣಿಸಿದರು.

ಮತ್ತಷ್ಟು ಕನ್ನಡ ಕಾವ್ಯ ಅರಳಬೇಕಾದರೆ,ಹಳೆಗನ್ನಡ ನಡುಗನ್ನಡ ಹೊಸಗನ್ನಡದ ಜೊತೆಗೆ ಸಂಸ್ಕೃತವೂ ಓದಿನ ಅಗತ್ಯವಿದೆ ಎಂದು ಹೇಳಿದರು.ದಾಸ ಸಾಹಿತ್ಯ, ಶರಣ ಸಾಹಿತ್ಯ,ಬಂಡಾಯ ಸಾಹಿತ್ಯ, ವಚನ ಸಾಹಿತ್ಯ ಓದುವ ಹವ್ಯಾಸ ರೂಢಿಸಿಕೊಂಡು,ಮಾನವೀಯ ಮೌಲ್ಯಗಳು ಅಳವಡಿಸಿಕೊಂಡಾಗ ಮಾತ್ರ ಬದುಕು ಸಾರ್ಥಕತೆ ಕಾಣಲು ಸಾಧ್ಯ ಎಂದು ನುಡಿದರು.

ನಿವೃತ್ತ ಬ್ಯಾಂಕ್ ವ್ಯವಸ್ಥಾಪಕರಾದ ಶ್ರೀ ವಾಸುದೇವಾಚಾರ್ಯ ಸಗರ ರವರು, ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಭಾವಗೀತೆಯನ್ನು ಹಾಡುವುದರ ಮೂಲಕ ಎಲ್ಲರನ್ನು ಮೂಕಾಸ್ಮಿತರನ್ನಾಗಿ ಮಾಡಿದರು, ಈ ಸಮಾರಂಭದ ವೇದಿಕೆಯ ಮೇಲೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಕಾರ್ಯದರ್ಶಿಗಳಾದ ಮಹೇಶ್ ಅನೆಗುಂದಿ, ಸಂಸ್ಥೆಯ ಅಧ್ಯಕ್ಷರಾದ ಮುರಳಿದರು ಕುಲಕರ್ಣಿ ಕಾರ್ಯಕ್ರಮವನ್ನು ಉದ್ಘಾಟಿಸಿದರು,ಹಿರಿಯ ಪತ್ರಕರ್ತರಾದ ನಾರಾಯಣಚಾರ್ಯ ಸಗರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು,ಕೊನೆರಾಚಾರ್ಯಾ ಸಗರ,ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಟ್ರಸ್ಟ್ ಅಧ್ಯಕ್ಷ ಬಸವರಾಜ ಶಿಣ್ಣೂರ ಎಲ್ಲರನ್ನು ಸ್ವಾಗತಿಸಿ ಪ್ರಾಸ್ತಾವಿಕ ಮಾತುಗಳನ್ನಾಡಿದರು,ಶಾಲಾ ವಿದ್ಯಾರ್ಥಿಗಳಾದ ಸೋಮು ಮತ್ತು ಸಂಗಡಿಗರಿಂದ ಸವಿಧಾನ ಪೀಠಿಕೆ ಓದಿಸಲಾಯಿತು.ಕಾರುಣ್ಯ ಹಾಗೂ ಸಂಗಡಿಗರಿಂದ ಕನ್ನಡ ಸಂಕಲ್ಪ ಬೋಧಿಸಲಾಯಿತು,ಧರಣಿ ಮತ್ತು ಸಂಗಡಿಗರು ನಾಡಗೀತೆ ಹಾಡಿದರು. ಹರಿಪ್ರಿಯಾ ಮತ್ತು ಅಂಜಲಿ ಪ್ರಾರ್ಥಿಸಿದರು.ನಂತರ ಕರ್ನಾಟಕದ ಇತಿಹಾಸ ಸಾರುವ ಸಮಗ್ರ ಸ್ಮಾರಕಗಳು,ದೇವಾಲಯಗಳು, ಕೋಟೆಗಳು ಪ್ರದರ್ಶನ ಎರ್ಪಡಿಸಲಾಗಿತ್ತು.

# ಶ್ರೀ ಮಾಣಿಕ ಪ್ರಬು ಜಾತ್ರೆ ಆರಂಭ

**ಮಲ್ಲಮ್ಮ ನುಡಿ ವಾರ್ತೆಹುಮನಾಬಾದ್.**

ನಡೆದಾಡಿದದೇವರಾದ ಶ್ರೀ ಮಾಣಿಕ ಪ್ರಬು ಜಾತ್ರಾ ಮಹೋತ್ಸವ ಆರಂಭ'ವಾಗಿದೆ. ಕೊರೆಯುವ ಚಳಿಗೂ ಲೆಕ್ಕಿಸದ ಭಕ್ತರು ಪ್ರತಿ ನಿತ್ಯ ದೇವಸ್ಥಾನಕ್ಕೆ ಅಗಮಿಸಿ ದೇವರ ದರುಶನ ಪಡೆ-ಯುತ್ತಿದ್ದಾರೆ. ಬಂದ ಭಕ್ತರಿಗೆ ಪ್ರಸಾದದ ವ್ಯವಸ್ಥೆ ಕಲ್ಪಿಸಲಾಗಿದೆ.




Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)